ಡಾ|| ರಾಜ್‌ಕುಮಾರ್ ಅಕಾಡೆಮಿ
ಬೆಂಗಳೂರು

ಡಾ|| ರಾಜ್‌ಕುಮಾರ್ ಕುಟುಂಬದವರ ಕೊಡುಗೆ

# ವಾರದ ಸುದ್ದಿ ಸಂಕಲನ

## ಸ್ಪಷ್ಟ ಮತ್ತು ಸಮಗ್ರ ವಿದ್ಯಮಾನಗಳು

**ಅಕ್ಟೋಬರ್ ೫ನೇ ವಾರ**

27-10-2025 TO 01-11-2025




# ಆಂಧ್ರಕ್ಕೆ ಅಪ್ಪಳಿಸಿದ ‘ಮೊಂಥಾ’ ಚಂಡಮಾರುತ

- ಎಫ್‌ಡಿಐ ಏರಿಕೆ
- 2026 ಆಸಿಯಾನ್ ಭಾರತ : ಕಡಲ ಸಹಕಾರ ವರ್ಷ ಘೋಷಣೆ
- ವಿದೇಶಿ ವಿನಿಮಯ ಸಂಗ್ರಹ ಇಳಿಕೆ
- ಪಿಎಂ–ಶ್ರೀ ಯೋಜನೆ

## ❖ ಮನೆ ಕೆಲಸದವರ 'ಕಲ್ಯಾಣ' ಮಸೂದೆ

**ಸಂದರ್ಭ: ಬೆಳಗಾವಿ ಅಧಿವೇಶನದಲ್ಲಿ ಮಂಡನೆಗೆ ಸಿದ್ಧತೆ । ವಿಶೇಷ ಮಂಡಳಿ, ನಿಧಿ ಸ್ಥಾಪನೆ: ಮನೆ ಕೆಲಸದವರಿಗೆ ಕನಿಷ್ಠ ವೇತನ, ವಾರಕ್ಕೆ 48 ಗಂಟೆ ದುಡಿಮೆ, ಒ.ಟಿ , ವಾರಕ್ಕೊಂದು ರಜೆ, ವಿಶ್ರಾಂತಿ, ವಾರ್ಷಿಕ ರಜೆ ಇತ್ಯಾದಿ ಸೌಲಭ್ಯಗಳನ್ನು ಒಳಗೊಂಡ ಸಾಮಾಜಿಕ ಭದ್ರತೆ ಮತ್ತು ಕಲ್ಯಾಣ ಉದ್ದೇಶದ 'ಕರ್ನಾಟಕ ಗೃಹ ಕಾರ್ಮಿಕರ (ಸಾಮಾಜಿಕ ಭದ್ರತೆ ಮತ್ತು ಕಲ್ಯಾಣ) ಮಸೂದೆ– 2025' ಅನ್ನು ಬೆಳಗಾವಿ ಅಧಿವೇಶನದಲ್ಲಿ ಮಂಡಿಸಲು ಸರ್ಕಾರ ಸಿದ್ಧತೆ ನಡೆಸಿದೆ.**

- ಉದ್ದೇಶಿತ ಮಸೂದೆಯು ರಾಜ್ಯದಲ್ಲಿ ಅಧಿಸೂಚಿತವಾಗಿರುವ ಎಲ್ಲ ನಗರ ಪಾಲಿಕೆಗಳಿಗೆ ಅನ್ವಯ ಆಗಲಿದ್ದು, ಮಸೂದೆಯ ಕರಡನ್ನು ಸಿದ್ಧಪಡಿಸಲಾಗಿದೆ.
- ಮನೆ ಕೆಲಸದವರ ಕಲ್ಯಾಣಕ್ಕಾಗಿ ವಿಶೇಷ ಮಂಡಳಿ ಮತ್ತು ನಿಧಿ ಸ್ಥಾಪಿಸುವ ಬಗ್ಗೆಯೂ ಮಸೂದೆಯಲ್ಲಿ ಪ್ರಸ್ತಾವವಿದೆ. **ಕಲ್ಯಾಣ ನಿಧಿಗೆ ಮನೆ ಕೆಲಸದವರು, ಉದ್ಯೋಗದಾತರು, ಮನೆ ಕೆಲಸದವರನ್ನು ಪೂರೈಸುವ ಏಜೆನ್ಸಿಗಳು ನೀಡುವ ಅಥವಾ ಪಡೆಯುವ ಸಂಭಾವನೆಯ ಶೇ 5ರಷ್ಟು ಸೆಸ್ ಪಾವತಿಸಬೇಕಾಗುತ್ತದೆ ಎಂಬ ಅಂಶ ಈ ಮಸೂದೆಯಲ್ಲಿದೆ.**
- ಅಲ್ಲದೆ, ಮನೆ ಕೆಲಸದವರ ಸುರಕ್ಷತೆ ನಿಯಮಗಳ ಅಡಿ ಸಂಗ್ರಹಿಸಲಾಗುವ ಎಲ್ಲ ದಂಡಗಳು, ಕೇಂದ್ರ ಅಥವಾ ರಾಜ್ಯ ಸರ್ಕಾರ ನೀಡಿದ ಅನುದಾನಗಳು, ಮಂಡಳಿ ಮಾಡಿದ ಬ್ಯಾಂಕ್ ಹೂಡಿಕೆ ಗಳಿಂದ ಗಳಿಸಿದ ಬಡ್ಡಿ ಆದಾಯಗಳು, ಮನೆ ಕೆಲಸದವರ, ಉದ್ಯೋಗದಾತರ ನೋಂದಣಿಯ ಶುಲ್ಕವೂ ಈ ಕಲ್ಯಾಣ ನಿಧಿಗೆ ಜಮೆ ಆಗಲಿದೆ.
- ಮನೆ ಕೆಲಸದವರ ಹಕ್ಕುಗಳನ್ನು ರಕ್ಷಿಸಲು ಮತ್ತು ಅವರಿಗೆ ಸಾಮಾಜಿಕ ಭದ್ರತೆ ಒದಗಿಸಲು ರೂಪಿಸಿರುವ ಈ ಕರಡು ಮಸೂದೆಯು ಲಿಖಿತ ಒಪ್ಪಂದ, ಕಡ್ಡಾಯ ನೋಂದಣಿ, ಕನಿಷ್ಠ ವೇತನ, ನಿಗದಿತ ಕೆಲಸದ ಸಮಯ, ವಾರದ ರಜೆ, ಹೆರಿಗೆ ರಜೆ ಸೇರಿದಂತೆ ಅನೇಕ ಸೌಲಭ್ಯಗಳನ್ನು ಕರಡು ಮಸೂದೆಯಲ್ಲಿ ಪ್ರಸ್ತಾಪಿಸಲಾಗಿದೆ.
- ನೋಂದಣಿ: ಮಸೂದೆಯ ಪ್ರಕಾರ, ಉದ್ಯೋಗದಾತರು, ಸೇವಾ ಪೂರೈಕೆ ದಾರರು ಹಾಗೂ ರಾಜ್ಯದ ಒಳಗೆ ಮನೆ ಕೆಲಸ ಮಾಡುವ ಎಲ್ಲರೂ ನೋಂದಣಿ ಮಾಡಿಕೊಳ್ಳಬೇಕು.
- ಡಿಜಿಟಲ್ ಪೋರ್ಟಲ್ ಮೂಲಕವೇ ನೋಂದಣಿ ಮಾಡಲು ಅವಕಾಶ ಕಲ್ಪಿಸಲಾಗುವುದು. ನೋಂದಣಿ ಮಾಡಿ ಕೊಳ್ಳದೆ ಮನೆ ಕೆಲಸದವರನ್ನು ನೇಮಕ ಮಾಡಿಕೊಳ್ಳುವಂತಿಲ್ಲ. ನೋಂದಣಿ ಮಾಡಿಕೊಂಡರೂ ಕಾಲ ಕಾಲಕ್ಕೆ ನವೀಕರಿಸದಿದ್ದರೆ ಉದ್ಯೋಗದಾತರಿಗೆ ಆರಂಭಿಕ ಹಂತದಲ್ಲಿ ದಂಡ, ಆ ನಂತರ ಸೆರೆವಾಸ ವಿಧಿಸಲು ಮಸೂದೆಯಲ್ಲಿ ಪ್ರಸ್ತಾವಿಸಲಾಗಿದೆ. ಗೃಹ ಕಾರ್ಮಿಕ ಸುರಕ್ಷತಾ ನಿಯಮಗಳನ್ನು ಉಲ್ಲಂಘಿಸಿದರೆ ದಂಡ ಮತ್ತು ಶಿಕ್ಷೆಗಳಿರಲಿವೆ.

### *'ವಾಗ್ದಾನ ಉಳಿಸಿಕೊಳ್ಳಲಿ'*

- 'ಕರ್ನಾಟಕ ಗೃಹ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕಲ್ಯಾಣ ಮಸೂದೆ'ಯ ಬಗ್ಗೆ ಮನೆ ಕೆಲಸದವರ ಸಂಘಟನೆಗಳ ಒಕ್ಕೂಟದೊಂದಿಗೆ ಕಾರ್ಮಿಕ ಸಚಿವ ಸಂತೋಷ್ ಲಾಡ್ ಚರ್ಚೆ ನಡೆಸಿದ್ದರು. ಮನೆ ಕೆಲಸದವರಿಗೆ ಸಾಮಾಜಿಕ ಭದ್ರತೆ ಒದಗಿಸಲು ಅಗತ್ಯವಾದ ವೆಚ್ಚವನ್ನು ಕಾರ್ಮಿಕರು ಮತ್ತು ಮಾಲೀಕರಿಂದ ಭರಿಸುವ ಪ್ರಸ್ತಾವ ಕೈಬಿಡುವುದಾಗಿ ಅವರು ಭರವಸೆ ನೀಡಿದ್ದರು. ಸಚಿವರು ಮಸೂದೆಯನ್ನು ಅಂಗೀಕರಿಸುವಾಗ ಈ ವಾಗ್ದಾನವನ್ನು ಉಳಿಸಿಕೊಳ್ಳಬೇಕು ಎಂದು ಒಕ್ಕೂಟದ ಸಂಚಾಲಕಿ ಜಬೀನಾಖಾನಂ ಆಗ್ರಹಿಸಿದ್ದಾರೆ.

Dr. Rajkumar IAS/KAS Academy

## *'ಕಲ್ಯಾಣ'ಕ್ಕಾಗಿ ಏನೇನು?*

Iಮನೆ ಕೆಲಸದವರ ಚಿಕಿತ್ಸಾ ವೆಚ್ಚ Iಮಕ್ಕಳ ವಿದ್ಯಾಭ್ಯಾಸದ ವೆಚ್ಚ

Iಅಪಘಾತ ಸಂಭವಿಸಿದರೆ ಪರಿಹಾರ Iಇಬ್ಬರು ಮಕ್ಕಳಿಗೆ ಸೀಮಿತಗೊಳಿಸಿ ವೇತನ ಸಹಿತ ಮಾತೃತ್ವ ರಜೆ

Iಮರಣ ಹೊಂದಿದರೆ ಅಂತ್ಯಕ್ರಿಯೆಗೆ ಸಹಾಯಧನ Iನಿವೃತ್ತಿ ಹೊಂದಿದರೆ ಪಿಂಚಣಿಗೆ ಅವಕಾಶ

Iಲೈಂಗಿಕ ಶೋಷಣೆ, ಕಳ್ಳಸಾಗಣೆಗೆ ತಡೆ Iಜಾತಿ, ಲಿಂಗ, ವರ್ಗ, ಜನಾಂಗ, ಧರ್ಮ, ಪ್ರದೇಶದ ಆಧಾರದಲ್ಲಿ ತಾರತಮ್ಯಕ್ಕೆ ತಡೆ

Iಪ್ರತಿ ನೋಂದಾಯಿತ ಘಟಕಕ್ಕೆ ವಿಶಿಷ್ಟ ಗುರುತಿನ ಸಂಖ್ಯೆ

## *ದೇಶದಲ್ಲಿಯೇ ಮೊದಲು*

- ದೇಶದಲ್ಲಿಯೇ ಮೊದಲ ಬಾರಿಗೆ ಮನೆ ಕೆಲಸದವರಿಗೆ ಸಾಮಾಜಿಕ ಭದ್ರತೆ ಒದಗಿಸಲು ರಾಜ್ಯ ಸರ್ಕಾರವು ಮುಂದಾಗಿದೆ. ಅದಕ್ಕಾಗಿ ಕರಡು ಮಸೂದೆ ತಯಾರಿಸಿ, ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿದೆ ಎಂದು ಕಾರ್ಮಿಕ ಇಲಾಖೆಯ ಹೆಚ್ಚುವರಿ ಆಯುಕ್ತ ಮಂಜುನಾಥ್ ಜಿ. ಮಾಹಿತಿ ನೀಡಿದ್ದಾರೆ.
- ಮನೆ ಕೆಲಸದವರ ಕುಂದು ಕೊರತೆಗಳನ್ನು ಪರಿಹರಿಸುವುದಕ್ಕಾಗಿ ರಾಜ್ಯಮಟ್ಟ ದಲ್ಲಿ ಸಲಹಾ ಮಂಡಳಿ, ಜಿಲ್ಲಾ ಮಟ್ಟದ ಕುಂದುಕೊರತೆ ಪರಿಹಾರ ಸಮಿತಿ ರಚನೆ ಆಗಲಿದೆ ಎಂದು ತಿಳಿಸಿದ್ದಾರೆ.

## ❖ ಎಸ್ಐಆರ್: ಇಂದು ವೇಳಾಪಟ್ಟಿ ಘೋಷಣೆ?

**ಸಂದರ್ಭ: ದೇಶದಾದ್ಯಂತ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಕೈಗೊಳ್ಳಲು ಕೇಂದ್ರ ಚುನಾವಣಾ ಆಯೋಗ ಸಜ್ಜಾಗಿದ್ದು, ವೇಳಾಪಟ್ಟಿ ಘೋಷಿಸುವ ಸಾಧ್ಯತೆ ಇದೆ.**

- ಹಲವು ಹಂತಗಳಲ್ಲಿ ಪರಿಷ್ಕರಣೆಗೆ ಚಿಂತನೆ ನಡೆದಿದೆ. ಚುನಾವಣೆ ಸಮೀಪಿಸುತ್ತಿರುವ ರಾಜ್ಯಗಳಲ್ಲಿ ಮೊದಲ ಹಂತದ ಎಸ್ಐಆರ್ ನಡೆಯಬಹುದು.
- ಚುನಾವಣೆ ಸಮೀಪಿಸುತ್ತಿರುವ ಕೇರಳ, ತಮಿಳುನಾಡು, ಪುದುಚೇರಿ, ಪಶ್ಚಿಮ ಬಂಗಾಳದಲ್ಲಿ ಮೊದಲ ಹಂತದ ಎಸ್ಐಆರ್ ನಡೆಯುವ ಮುನ್ಸೂಚನೆ ಇದೆ. **ಜತೆಗೆ, ಕೇಂದ್ರಾಡಳಿತ ಪ್ರದೇಶಗಳು ಸೇರಿದಂತೆ 10–15 ರಾಜ್ಯಗಳಲ್ಲಿ ಸಮಗ್ರ ಪರಿಷ್ಕರಣೆ ನಡೆಯಲಿದೆ. ಬಹುತೇಕ ರಾಜ್ಯಗಳಲ್ಲಿ 2002 ಮತ್ತು 2004ರ ನಡುವೆ ಎಸ್ಐಆರ್ ನಡೆದಿತ್ತು.**

## ❖ ಗ್ರಾ.ಪಂ.ಗೆ ಅನುಮೋದನೆ ಅಧಿಕಾರ

**ಸಂದರ್ಭ: ಬಡಾವಣೆ ಅಭಿವೃದ್ಧಿಗೆ ನಿಯಮ ರೂಪಿಸಿದ ಗ್ರಾಮೀಣಾಭಿವೃದ್ಧಿ ಇಲಾಖೆ: ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸ್ಥಳೀಯ ಯೋಜನಾ ಪ್ರದೇಶ ಹೊರತುಪಡಿಸಿದ ಜಾಗಗಳಲ್ಲಿ ಬಡಾವಣೆ ಅಭಿವೃದ್ಧಿಗೆ ನಿಯಮ ಗಳನ್ನು ರೂಪಿಸಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಸುತ್ತೋಲೆ ಹೊರಡಿಸಿದೆ.**

- ಗ್ರಾಮ ಪಂಚಾಯಿತಿಯ ಸ್ಥಳೀಯ ಯೋಜನಾ ಪ್ರದೇಶದ ಹೊರಗೆ ಇರುವ ಹಾಗೂ ಭೂಪರಿವರ್ತನೆಗೆ ಒಳಗಾದ ಜಮೀನುಗಳಿಗೆ ಮಾತ್ರ ಈ ನಿಯಮ ಅನ್ವಯವಾಗುತ್ತದೆ. ಪೂರ್ವಾನು ಮೋದನೆ ಪಡೆದ ಈ ಬಡಾವಣೆಗಳಲ್ಲಿನ ನಿವೇಶನಗಳಿಗೆ ಗ್ರಾಮ ಪಂಚಾಯಿತಿಯೇ ಖಾತೆ ಮಾಡಿಕೊಡಲಿದೆ. ಭೂಪರಿವರ್ತನೆ ಇಲ್ಲದೆ ಅಭಿವೃದ್ಧಿ ಪಡಿಸಲಾದ ಬಡಾವಣೆಗಳಿಗೆ ಇದು ಅನ್ವಯವಾಗುವುದಿಲ್ಲ.
- ಬಡಾವಣೆ ಅಭಿವೃದ್ಧಿ ಪಡಿಸುವುದಕ್ಕೂ ಮುನ್ನ ಸಂಬಂಧಿತ, ಪರಿವರ್ತಿತ ಜಮೀನಿನ ಮಾಲೀಕ ಬಡಾವಣೆಯ ವಿನ್ಯಾಸವನ್ನು ರಚಿಸ ಬೇಕು. ಬಡಾವಣೆಯಲ್ಲಿ ಇರಲಿರುವ ಸಾರ್ವಜನಿಕ ರಸ್ತೆಗಳು, ಉದ್ಯಾನ, ಚರಂಡಿ, ಒಳಚರಂಡಿ, ನೀರಿನ ಕೊಳವೆ ಮಾರ್ಗ, ತ್ಯಾಜ್ಯ ನೀರು ಸಂಸ್ಕರಣ ಘಟಕ, ವಿದ್ಯುತ್ ಜಾಲಗಳಿಗೆ ಸಂಬಂಧಿತ ಇಲಾಖೆ ಅಥವಾ ಪ್ರಾಧಿಕಾರಗಳಿಂದ ನಿರಾಕ್ಷೇಪಣಾ ಪತ್ರ ಪಡೆಯಬೇಕು ಎಂದು ಸುತ್ತೋಲೆಯಲ್ಲಿ ಸೂಚಿಸಿದೆ.

- ಈ ಎಲ್ಲ ದಾಖಲೆಗಳನ್ನು ಒಳಗೊಂಡ ಅರ್ಜಿಯನ್ನು ಗ್ರಾಮ ಪಂಚಾಯಿತಿಗೆ ಸಲ್ಲಿಸಿ, ಬಡಾವಣೆ ಅಭಿವೃದ್ಧಿ ಪಡಿಸಲು ಅನುಮತಿ ಪಡೆಯಬೇಕು. ಹೀಗೆ ಅಭಿವೃದ್ಧಿ ಪಡಿಸಲಾದ ಬಡಾವಣೆ ಯಲ್ಲಿನ ಸಾರ್ವಜನಿಕ ರಸ್ತೆಗಳು, ಉದ್ಯಾನ, ಚರಂಡಿ– ಒಳಚರಂಡಿ ವ್ಯವಸ್ಥೆ, ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳು, ಸಾರ್ವಜನಿಕ ಬಳಕೆಯ ಪ್ರದೇಶಗಳನ್ನು ಹಕ್ಕು ಪರಿತ್ಯಾಜನಾ ಪತ್ರದ ಮೂಲಕ ಗ್ರಾಮ ಪಂಚಾಯಿತಿಗೆ ಬಿಟ್ಟು ಕೊಡಬೇಕು. ಹೀಗೆ ಬಿಟ್ಟು ಕೊಟ್ಟ ನಂತರ ಅವುಗಳ ನಿರ್ವಹಣೆಯ ಹೊಣೆಗಾರಿಕೆಯು ಸಂಬಂಧಿತ ಗ್ರಾಮ ಪಂಚಾಯಿತಿಯದ್ದಾಗಿರಲಿದೆ ಎಂದಿದೆ.
- ಇನ್ನು ಬಡಾವಣೆಯ ಮೂಲೆ ನಿವೇಶನಗಳು, ನಾಗರಿಕ ಬಳಕೆ (ಸಿ.ಎ) ನಿವೇಶನಗಳು ಮತ್ತು ಮಧ್ಯಂತರ ನಿವೇಶನಗಳನ್ನು ಅಡಮಾನ ಒಪ್ಪಂದದ ಅಡಿಯಲ್ಲಿ ಗ್ರಾಮ ಪಂಚಾಯಿತಿಗೆ ಒಪ್ಪಿಸಬೇಕು. ನಿಗದಿತ ಅವಧಿಯಲ್ಲಿ ಬಡಾವಣೆಯನ್ನು ಅಭಿವೃದ್ಧಿ ಪಡಿಸಿದರೆ, ಅಡಮಾನ ಒಪ್ಪಂದವನ್ನು ರದ್ದುಪಡಿಸಬೇಕು ಮತ್ತು ನಿವೇಶನ ಗಳನ್ನು ಬಡಾವಣೆ ಅಭಿವೃದ್ಧಿದಾರರಿಗೆ ಹಿಂತಿರುಗಿಸಬೇಕು ಎಂದು ಸೂಚಿಸಿದೆ.
- ಅಭಿವೃದ್ಧಿ ಪಡಿಸಲಾದ ಬಡಾವಣೆ ಯಲ್ಲಿರುವ ಮೂಲಭೂತ ಸೌಕರ್ಯಗಳು ಯಾವುದೇ ದೋಷದಿಂದ ಕೂಡಿಲ್ಲ ಎಂಬುದನ್ನು ಖಚಿತಪಡಿಸಿಕೊಳ್ಳುವ ಉದ್ದೇಶದಿಂದ, ಅಭಿವೃದ್ಧಿದಾರರು ಗ್ರಾಮ ಪಂಚಾಯಿತಿಗೆ ಖಾತರಿ ಒದಗಿಸ ಬೇಕು. ಮೂಲ ಸೌಕರ್ಯ ಅಭಿವೃದ್ಧಿಗೆ ತಗುಲಿರುವ ಒಟ್ಟು ವೆಚ್ಚದ ಶೇ 10ರಷ್ಟನ್ನು ಬ್ಯಾಂಕ್ ಭದ್ರತೆ ರೂಪದಲ್ಲಿ, ಒಂದು ವರ್ಷಕ್ಕೆ ಗ್ರಾಮ ಪಂಚಾಯಿತಿ ಎಂಜಿನಿಯ ರಿಂಗ್ ಇಲಾಖೆಯಲ್ಲಿ ಇರಿಸಬೇಕು. ಒಂದು ವರ್ಷದ ನಂತರ ಅದನ್ನು ವಾಪಸ್ ಪಡೆಯಬಹುದಾಗಿದೆ ಎಂದು ತಿಳಿಸಿದೆ.

***<u>ಸುತ್ತೋಲೆಯ ಪ್ರಮುಖ ಅಂಶಗಳು</u>***

Iಮೂಲಭೂತ ಸೌಕರ್ಯ ಅಭಿವೃದ್ಧಿಗೆ ಸಂಬಂಧಿತ ಇಲಾಖೆ/ಪ್ರಾಧಿಕಾರ ಗಳಿಂದ ವಿನ್ಯಾಸ ಅನುಮೋದನೆ ಪಡೆದ ನಂತರವಷ್ಟೇ ಗ್ರಾಮ ಪಂಚಾಯಿತಿಗೆ ಅರ್ಜಿ ಸಲ್ಲಿಸಲು ಅವಕಾಶ

Iಗ್ರಾಮೀಣಾಭಿವೃದ್ಧಿ ಇಲಾಖೆ, ಜಲ ಸಂಪನ್ಮೂಲ ಇಲಾಖೆ, ಎಸ್ಕಾಂಗಳಿಂದ ನಿರಾಕ್ಷೇಪಣಾ ಪತ್ರ ಪಡೆಯುವುದು ಕಡ್ಡಾಯ

Iಮೂಲಭೂತ ಸೌಕರ್ಯಗಳ ಅಭಿವೃದ್ಧಿ ವೇಳೆ ಸಂಬಂಧಿತ ಇಲಾಖೆ/ಪ್ರಾಧಿಕಾರ/ವಿಭಾಗಗಳಿಗೆ ಒಟ್ಟು ವೆಚ್ಚದ ಶೇ5 ರಿಂದ ಶೇ10 ರವರೆಗೆ ಮೇಲ್ವಿಚಾರಣಾ ಶುಲ್ಕ ಪಾವತಿಸಬೇಕು

Iಬಡಾವಣೆಗಳಲ್ಲಿನ ರಸ್ತೆ, ಉದ್ಯಾನ, ಸಾರ್ವಜನಿಕ ಬಳಕೆ ಪ್ರದೇಶ, ನಾಗರಿಕ ಬಳಕೆ ನಿವೇಶನಗಳನ್ನು ಗ್ರಾಮ ಪಂಚಾಯಿತಿಗೆ ಬಿಟ್ಟುಕೊಡುವುದು ಕಡ್ಡಾಯ

## ❖ ಗುಡ್ಡೆಹಳ್ಳಿ: ದೈತ್ಯ ಪತಂಗ ಪತ್ತೆ

**ಸಂದರ್ಭ: ಇಲ್ಲಿನ ಗುಡ್ಡೆಹಳ್ಳಿ ಗ್ರಾಮದಲ್ಲಿ 24 ಸೆಂ.ಮೀ ಅಗಲದ ರೆಕ್ಕೆ ಹೊಂದಿದ್ದ ದೈತ್ಯ ಪತಂಗ (ಅಟ್ಲಾಸ್ ಮೋತ್) ಕಂಡುಬಂದಿದೆ. ಹವ್ಯಾಸಿ ಛಾಯಾಗ್ರಾಹಕ ರವಿ ಗೌಡಾ ಎಂಬುವವರು ದೈತ್ಯ ಪತಂಗದ ಚಿತ್ರ ಸೆರೆಹಿಡಿದ್ದಾರೆ.**

- ‘ಕರಾವಳಿ ಭಾಗದ ಕಾಡುಗಳಲ್ಲಿ ದೈತ್ಯ ಪತಂಗ ಕಾಣಿಸಿಕೊಳ್ಳುತ್ತದೆ. ಪ್ರಪಂಚದಲ್ಲಿ ದೊಡ್ಡ ಗಾತ್ರದಲ್ಲಿರುವ ಪತಂಗಗಳ ಪೈಕಿ ಇದೂ ಒಂದು. ಕೆಲ ನಿರ್ದಿಷ್ಟ ಮರಗಳ ಎಲೆಗಳ ಮೇಲೆ ಮಾತ್ರ ಮೊಟ್ಟೆ ಇಡುತ್ತವೆ. ಹೆಣ್ಣು ಪತಂಗ ಮೊಟ್ಟೆ ಇಟ್ಟು ನಂತರ ಸಾಯುತ್ತದೆ’ ಎಂದು ಕೀಟ ತಜ್ಞರು ಮಾಹಿತಿ ನೀಡಿದ್ದಾರೆ.

## ❖ ‘2026: ಕಡಲ ಸಹಕಾರ ವರ್ಷ ಘೋಷಣೆ’

**ಸಂದರ್ಭ: ಆಸಿಯಾನ್–ಭಾರತ ಪಾಲುದಾರಿಕೆ: ಹಿಂದೂಮಹಾಸಾಗರ–ಪೆಸಿಫಿಕ್ ಪ್ರದೇಶದ ವಿದ್ಯಮಾನಗಳಿಗೆ ಸಂಬಂಧಿಸಿ ಆಸಿಯಾನ್ ಪ್ರಮುಖ ಪಾತ್ರವಹಿಸಬೇಕು ಎಂಬ ವಿಚಾರವನ್ನು ಭಾರತ ಯಾವಾಗಲೂ ಬೆಂಬಲಿಸುತ್ತಾ ಬಂದಿದೆನರೇಂದ್ರ ಮೋದಿ, ಪ್ರಧಾನಿ.**

- ಆಸಿಯಾನ್ ಮತ್ತು ಭಾರತ ನಡುವಿನ ಸಮಗ್ರ ಪಾಲುದಾರಿಕೆಯು ಜಾಗತಿಕ ಸ್ಥಿರತೆ ಹಾಗೂ ಅಭಿವೃದ್ಧಿಗೆ ಪ್ರಬಲ ಅಡಿಪಾಯ ವಾಗಲಿದೆ. ಹೀಗಾಗಿ 2026 ಅನ್ನು ‘ಆಸಿಯಾನ್–ಭಾರತ ಕಡಲ ಸಹಕಾರ ವರ್ಷ’ ಎಂಬುದಾಗಿ ಘೋಷಿಸ ಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.
- ಸಾಗರ ಸುರಕ್ಷತೆ ಹಾಗೂ ‘ನೀಲಿ ಆರ್ಥಿಕತೆ’ ಕ್ಷೇತ್ರಕ್ಕೆ ಸಂಬಂಧಿಸಿ ಆಸಿಯಾನ್ ಸದಸ್ಯ ರಾಷ್ಟ್ರಗಳ ನಡುವೆ ಸಹಕಾರ ಕೂಡ ಹೆಚ್ಚುತ್ತಿದೆ. ಈ ಎಲ್ಲ ಕಾರಣಗಳಿಂದ ಈ ಘೋಷಣೆ ಮಾಡಲಾಗುತ್ತದೆ ಎಂದು ವಿವರಿಸಿದರು. ಮಲೇಷ್ಯಾದ ಕ್ವಾಲಾಲಂ ಪುರದಲ್ಲಿ ಆರಂಭವಾದ ಮೂರು ದಿನಗಳ ಆಸಿಯಾನ್ ಶೃಂಗಸಭೆಯನ್ನು ವರ್ಚುವಲ್ ಮೂಲಕ ಉದ್ದೇಶಿಸಿ ಅವರು ಮಾತನಾಡಿದರು.
- ‘ವಿಶ್ವದ ಹಲವೆಡೆ ಈಗ ಅನಿಶ್ಚಿತ ಸ್ಥಿತಿ ಇದೆ. ಈ ಪರಿಸ್ಥಿತಿಯಲ್ಲಿಯೂ ಭಾರತ ಮತ್ತು ಆಸಿಯಾನ್ ನಡುವಿನ ಪಾಲುದಾರಿಕೆಯಲ್ಲಿ ಗಮನಾರ್ಹ ಪ್ರಗತಿ ಸಾಧಿಸಲಾಗಿದೆ’ ಎಂದರು.
- ‘ಶಿಕ್ಷಣ, ಪ್ರವಾಸ, ವಿಜ್ಞಾನ ಮತ್ತು ತಂತ್ರಜ್ಞಾನ, ಆರೋಗ್ಯ, ಹಸಿರು ಇಂಧನ, ಸೈಬರ್ ಭದ್ರತೆ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ಆಸಿಯಾನ್ ಸದಸ್ಯ ರಾಷ್ಟ್ರಗಳ ಮಧ್ಯೆ ಸಹಕಾರ ಹೆಚ್ಚುತ್ತಿದೆ. ಸದಸ್ಯ ರಾಷ್ಟ್ರಗಳ ಜನರ ನಡುವಿನ ಸಂಬಂಧ ಬಲಪಡಿಸುವುದು, ಸಾಂಸ್ಕೃತಿಕ ಪರಂಪರೆ ಸಂರಕ್ಷಣೆ ಕಾರ್ಯವನ್ನು ಮುಂದುವರಿಸಲಾಗುವುದು’ ಎಂದು ಮೋದಿ ಹೇಳಿದರು.

## ❖ ‘ಭಾರತದ ಕಾಫಿ ವಿಶ್ವ ಪ್ರಸಿದ್ದ’

**ಸಂದರ್ಭ: ಮನದ ಮಾತಿನಲ್ಲಿ ಕರ್ನಾಟಕದ ಕಾಫಿ ಉಲ್ಲೇಖಿಸಿದ ಪ್ರಧಾನಿ: ‘ಕರ್ನಾಟಕ ಸೇರಿದಂತೆ ದೇಶದ ವಿವಿಧ ರಾಜ್ಯಗಳಲ್ಲಿ ಬೆಳೆಯುವ ಕಾಫಿ ವಿಶ್ವದಲ್ಲಿ ಪ್ರಸಿದ್ಧವಾಗುತ್ತಿದೆ’ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಹೇಳಿದ್ದಾರೆ.**

- ಮನದ ಮಾತು 127ನೇ ಆವೃತ್ತಿಯಲ್ಲಿ ಮಾತನಾಡಿದ ಅವರು, ‘ಕರ್ನಾಟಕ, ತಮಿಳುನಾಡು ಮತ್ತು ಕೇರಳದಲ್ಲಿ ಬೆಳೆಯುತ್ತಿರುವ ಕಾಫಿ ಹೆಚ್ಚು ಜನಪ್ರಿಯತೆ ಪಡೆಯುತ್ತಿದೆ. ಇದು ಭಾರತದ ಕಾಫಿಯನ್ನು ಜಗತ್ತಿನಾದ್ಯಂತ ಗುರುತಿಸುವಂತೆ ಮಾಡಿದೆ. ಇತ್ತೀಚೆಗೆ ಈಶಾನ್ಯ ಭಾರತದಲ್ಲೂ ಕಾಫಿ ಬೆಳೆಯಲಾಗುತ್ತಿದೆ’ ಎಂದು ಹೇಳಿದ್ದಾರೆ.
- ಕರ್ನಾಟಕದ ಚಿಕ್ಕಮಗಳೂರು, ಕೊಡಗು ಮತ್ತು ಹಾಸನ, ತಮಿಳುನಾಡಿನ ಪುಲ್ನಿ, ಶೆವರಾಯ್, ನೀಲಗಿರಿ ಮತ್ತು ಅಣ್ಣಾಮಲೈ, ಕೇರಳದ ವಯನಾಡ್, ತಿರುವಾಂಕೂರು ಮತ್ತು ಮಲಬಾರ್‌ನಲ್ಲಿ ಕಾಫಿ ಬೆಳೆಯಲಾಗುತ್ತಿದೆ ಎಂದಿದ್ದಾರೆ.
- ಒಡಿಶಾದ ಕೊರಾ ಪುಟ್ ಕಾಫಿಯೂ ಜನಪ್ರಿಯತೆ ಪಡೆಯುತ್ತಿದೆ. ದೇಶದ ವಿವಿಧೆಡೆ ಬೆಳೆಯುವ ಕಾಫಿಯ ವೈವಿಧ್ಯ ನಿಜಕ್ಕೂ ಗಮನಾರ್ಹ ಎಂದು ಅವರು ಹೇಳಿದ್ದಾರೆ.



**ಕೆರೆಗಳ ಪುನರುಜ್ಜೀವನ ಬೆಂಗಳೂರಿನ ಟೆಕಿಗೆ ಮೆಚ್ಚುಗೆ**

ಪ್ರಜಾವಾಣಿ ವಾರ್ತೆ

ನವದೆಹಲಿ: ಕೆರೆಗಳ ಪುನರುಜ್ಜೀವನಗೊಳಿಸುವ ಕೆಲಸ ಮಾಡುತ್ತಿರುವ ಬೆಂಗಳೂರಿನ ಐಟಿ ಉದ್ಯೋಗಿ ಕಪಿಲ್ ಶರ್ಮಾ ಅವರ ಕುರಿತು ಪ್ರಧಾನಿ ಮೋದಿ ಅವರು ಶ್ಲಾಘಿಸಿದ್ದಾರೆ. ಅವರ ‘ಸೇಟ್ರೀಸ್’ ಎಂಬ ಸಂಸ್ಥೆಯ ಬಗ್ಗೆಯೂ ಹೊಗಳಿಕೆಯ ಮಾತುಗಳನ್ನಾಡಿದ್ದಾರೆ.

‘ಎಂಜಿನಿಯರ್ ಕಪಿಲ್ ಶರ್ಮಾ ಅವರ ಬೆಂಗಳೂರಿನಲ್ಲಿ ಗಮನಾರ್ಹವಾಗಿರುವ ಕಾರ್ಯ ಸಾಧಿಸಿದ್ದಾರೆ. ಬೆಂಗಳೂರನ್ನು ಕೆರೆಗಳ ನಗರ ಎನ್ನಲಾಗುತ್ತದೆ. ಇಲ್ಲಿನ ಕೆರೆಗಳಿಗೆ ಮರುಹುಟ್ಟು ನೀಡುವ ಅಭಿಯಾನವನ್ನೇ ಕಪಿಲ್ ಅವರು ಆರಂಭಿಸಿದ್ದಾರೆ. ಕಪಿಲ್ ಅವರ ತಂಡವು ನಗರದ 40 ಬಾವಿಗಳು, 6 ಕೆರೆಗಳನ್ನು ಪುನರುಜ್ಜೀವನಗೊಳಿಸಿದ್ದಾರೆ. ಇದರಲ್ಲಿ ಗಮನಿಸಬೇಕಾದ ಅಂಶವೇನೆಂದರೆ, ಈ ಅಭಿಯಾನದಲ್ಲಿ ಉದ್ಯಮಿಗಳನ್ನೂ ಸ್ಥಳೀಯರನ್ನೂ ಸೇರಿಸಿಕೊಂಡಿದ್ದಾರೆ’ ಎಂದು ಪ್ರಧಾನಿ ಮೋದಿ ಹೇಳಿದರು.

ಶರ್ಮಾ ಅವರ ‘ಸೇಟ್ರೀಸ್’ ಎಂಬ ಸರ್ಕಾರೇತರ ಸಂಸ್ಥೆಯ ಕುರಿತೂ ಪ್ರಧಾನಿ ಅವರು ಪ್ರಸ್ತಾಪಿಸಿದರು. ತಾನು 50 ಲಕ್ಷ ಸಸಿಗಳನ್ನು ನೆಟ್ಟಿರುವುದಾಗಿ ಮತ್ತು ದೇಶದಾದ್ಯಂತ ಸುಮಾರು 50 ಕೆರೆಗಳನ್ನು ಪುನರುಜ್ಜೀವನಗೊಳಿಸಿರುವುದಾಗಿ ಈ ಸಂಸ್ಥೆ ಹೇಳಿಕೊಂಡಿದೆ.

ಕಪಿಲ್ ಶರ್ಮಾ



**ವಂದೇ ಮಾತರಂ ಗೀತೆಗೆ 150 ವರ್ಷ**

- ಬಂಕಿಮ್ ಚಂದ್ರ ಚಟ್ಟೋಪಾಧ್ಯಾಯ ಅವರು ಬರೆದ ‘ವಂದೇ ಮಾತರಂ’ ಗೀತೆಗೆ 150 ವರ್ಷ ತುಂಬುತ್ತಿದೆ. ಈ ಗೀತೆಯು ದೇಶವನ್ನು ಅತ್ಯದ್ಭುತವಾಗಿ ಚಿತ್ರಿಸಿದೆ. ಈ ಗೀತೆಯ ಮೌಲ್ಯಗಳನ್ನು ನಾವು ಮುಂದುವರಿಸಿಕೊಂಡು ಹೋಗಬೇಕಾಗಿದೆ. ಇದಕ್ಕಾಗಿ ದೇಶದಾದ್ಯಂತ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ಪ್ರಧಾನಿ ಹೇಳಿದ್ದಾರೆ.
- ಬಿಎಸ್‌ಎಫ್ ಮತ್ತು ಸಿಆರ್‌ಪಿಎಫ್‌ನಲ್ಲಿ ಮುಧೋಳ ತಳಿಯ ಶ್ವಾನಗಳು ಹೆಚ್ಚಿನ ಸಂಖ್ಯೆಯಲ್ಲಿ ಬಳಕೆಯಾಗುತ್ತಿರುವುದರ ಬಗ್ಗೆ ಪ್ರಧಾನಿ ಸಂತಸ ವ್ಯಕ್ತಪಡಿಸಿದ್ದಾರೆ.
- ಆಪರೇಷನ್ ಸಿಂಧೂರದ ಯಶಸ್ಸು ಹಾಗೂ ನಕ್ಸಲರ ಭಯ ಕಡಿಮೆಯಾಗಿರುವುದರಿಂದ ಈ ಬಾರಿ ದೇಶದಲ್ಲಿ ಜನರು ಹಬ್ಬಗಳನ್ನು ವಿಜೃಂಭಣೆಯಿಂದ ಆಚರಿಸುತ್ತಿದ್ದಾರೆ ಎಂದು ಪ್ರಧಾನಿ ಹೇಳಿದ್ದಾರೆ.
- ನಮ್ಮ ಬುಡಕಟ್ಟು ಸಮುದಾಯಗಳಲ್ಲಿ ಭಗವಾನ್ ಬಿರ್ಸಾ ಮುಂಡಾ ಮತ್ತು ಕೋಮರಾಮ್ ಭೀಮ್ ಅವರಂತೆಯೇ ಹಲವಾರು ಶ್ರೇಷ್ಠ ಸಾಧಕರು ಆಗಿ ಹೋಗಿದ್ದಾರೆ. ಈ ಎಲ್ಲ ಬಗ್ಗೆಯೂ ನೀವು ಖಂಡಿತವಾಗಿಯೂ ಓದಲೇಬೇಕು ಎಂದು ನಾನು ಒತ್ತಾಯಿಸುತ್ತೇನೆ ಎಂದು ಪ್ರಧಾನಿ ಹೇಳಿದ್ದಾರೆ.

Dr Rajkumar IAS/KAS Academy

- ಕೆಲವರು, ಕಾಫಿ ಕೃಷಿ ಮೇಲಿನ ಒಲವಿನ ಕಾರಣದಿಂದಾಗಿ ಖಾಸಗಿ ಕಂಪನಿಗಳಲ್ಲಿನ ತಮ್ಮ ಲಾಭದಾಯಕ ಉದ್ಯೋಗ ತೊರೆದು ಕಾಫಿ ಕೃಷಿಗೆ ಮುಂದಾಗಿ, ಯಶಸ್ವಿಯಾಗುತ್ತಿದ್ದಾರೆ. ಕಾಫಿ ಬೆಳೆಯಿಂದ ಹಲವಾರು ಮಹಿಳೆಯರ ಜೀವನವೂ ಹಸನಾಗಿದೆ ಎಂದು ಅವರು ಹೇಳಿದ್ದಾರೆ.
- ದೇಶದ ಒಟ್ಟು ಕಾಫಿ ಉತ್ಪಾದನೆಯಲ್ಲಿ ಕರ್ನಾಟಕದ ಪಾಲು ಶೇ 70ರಷ್ಟಿದೆ. ನಂತರದ ಸ್ಥಾನದಲ್ಲಿ ಕೇರಳ ಮತ್ತು ತಮಿಳುನಾಡು ಇವೆ.


## ❖ ಪ್ರೀತಿಸ್ಮಿತಾ ವಿಶ್ವದಾಖಲೆ

**ಸಂದರ್ಭ: ಭಾರತದ 16 ವರ್ಷ ವಯಸ್ಸಿನ ವೇಟ್‌ಲಿಫ್ಟರ್ ಪ್ರೀತಿಸ್ಮಿತಾ ಭೋಯಿ ಅವರು ಏಷ್ಯನ್ ಯೂತ್ ಗೇಮ್ಸ್‌ನಲ್ಲಿ 158 ಕೆ.ಜಿ. ಭಾರ (66 ಕೆ.ಜಿ. + 92 ಕೆ.ಜಿ.) ಎತ್ತಿ ಚಿನ್ನ ಗೆದ್ದರಲ್ಲದೇ, ಆ ಹಾದಿಯಲ್ಲಿ ಕ್ಲೀನ್ ಆ್ಯಂಡ್ ಜರ್ಕ್ ವಿಭಾಗದಲ್ಲಿ ನೂತನ ವಿಶ್ವ ದಾಖಲೆಯನ್ನು ಸ್ಥಾಪಿಸಿದರು.**

- 44 ಕೆ.ಜಿ.ಯೊಳಗಿನ ಬಾಲಕಿಯರ ವಿಭಾಗದಲ್ಲಿ ಪ್ರೀತಿಸ್ಮಿತಾ ಅವರು ಸ್ನಾಚ್‌ನಲ್ಲಿ 66 ಕೆ.ಜಿ. ಮತ್ತು ಕ್ಲೀನ್ ಮತ್ತು ಜರ್ಕ್‌ನಲ್ಲಿ 92 ಕೆ.ಜಿ. ಎತ್ತಿದರು. ಮೊದಲೆರಡು ಯತ್ನಗಳಲ್ಲಿ ಕ್ರಮವಾಗಿ 87 ಕೆ.ಜಿ. ಹಾಗೂ 90 ಕೆ.ಜಿ. ಭಾರ ಎತ್ತಿದ್ದ ಅವರು ಮೂರನೇ ಯತ್ನದಲ್ಲಿ ಈ ಸಾಧನೆ ಮಾಡಿದರು.
- 60 ಕೆ.ಜಿ.ಯೊಳಗಿನ ಬಾಲಕರ ಸ್ಪರ್ಧೆಯಲ್ಲಿ ಮಹಾರಾಜನ್ ಆರುಮುಗಪಾಂಡ್ಯನ್ ಅವರು ಒಟ್ಟು 256 ಕೆ.ಜಿ. (114 ಕೆ.ಜಿ. + 142 ಕೆ.ಜಿ.) ಭಾರ ಎತ್ತಿ, ಬೆಳ್ಳಿ ಪದಕಕ್ಕೆ ಕೊರಳೊಡ್ಡಿದರು.
- ಚೀನಾದ ಶೆನ್ ಝುವಾನ್ವಾ (261 ಕೆ.ಜಿ.) ಸ್ವರ್ಣದ ಪದಕ ತಮ್ಮದಾಗಿಸಿಕೊಂಡರು.



ಪ್ರೀತಿಸ್ಮಿತಾ ಭೋಯಿ

## ❖ ಎಸ್‌ಐಆರ್: ವೇಳಾಪಟ್ಟಿ ಪ್ರಕಟ

**ಸಂದರ್ಭ: 12 ರಾಜ್ಯಗಳು, ಕೇಂದ್ರಾಡಳಿತ ಪ್ರದೇಶದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ದಿನಾಂಕ ಘೋಷಿಸಿದ ಚುನಾವಣಾ ಆಯೋಗ. ದೇಶದಾದ್ಯಂತ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕೈಗೊಳ್ಳಲು ಕೇಂದ್ರ ಚುನಾವಣಾ ಆಯೋಗ ಮುಂದಡಿಯಿಟ್ಟಿದ್ದು, ಎರಡನೇ ಹಂತದಲ್ಲಿ 12 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಈ ಪ್ರಕ್ರಿಯೆ ನಡೆಸುವುದಾಗಿ ಘೋಷಿಸಿದೆ.**

- ಸುದ್ದಿಗೋಷ್ಠಿಯಲ್ಲಿ ವೇಳಾಪಟ್ಟಿ ಪ್ರಕಟಿಸಿದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, 'ಈಗ ಕೈಗೊಂಡಿರುವ ವಿಶೇಷ ಸಮಗ್ರ ಪರಿಷ್ಕರಣೆಯು ಸ್ವಾತಂತ್ರ್ಯದ ಬಳಿಕ ನಡೆಯುತ್ತಿರುವ ಒಂಬತ್ತನೇ ಪ್ರಕ್ರಿಯೆಯಾಗಿದೆ. **2002–04ರಲ್ಲಿ ಕೊನೆಯದಾಗಿ ಎಸ್‌ಐಆರ್ ನಡೆದಿತ್ತು**' ಎಂದರು.
- **2ನೇ ಹಂತದಲ್ಲಿ ಎಸ್‌ಐಆರ್ ನಡೆಯಲಿರುವ ತಮಿಳುನಾಡು, ಪುದುಚೇರಿ, ಕೇರಳ, ಪಶ್ಚಿಮ ಬಂಗಾಳದಲ್ಲಿ 2026ರಲ್ಲಿ ವಿಧಾನಸಭಾ ಚುನಾವಣೆ ನಡೆಯಲಿದೆ. ಅಸ್ಸಾಂನಲ್ಲೂ ಮುಂದಿನ ವರ್ಷ ಚುನಾವಣೆ ನಡೆಯಲಿದ್ದು, ಅಲ್ಲಿನ ಎಸ್‌ಐಆರ್ ಪ್ರಕ್ರಿಯೆಯ ವೇಳಾಪಟ್ಟಿಯನ್ನು ಪ್ರತ್ಯೇಕವಾಗಿ ಘೋಷಿಸಲಾಗುವುದು ಎಂದು ಸ್ಪಷ್ಟಪಡಿಸಿದರು.**

**ಮೊದಲ ಹಂತದಲ್ಲಿ...**

- ಎಸ್‌ಐಆರ್ ನಡೆದ ಬಿಹಾರದಲ್ಲಿ ಪ್ರಕ್ರಿಯೆ ಪೂರ್ಣಗೊಂಡಿದ್ದು, ಅಂತಿಮ ಪಟ್ಟಿಗೆ ಸಂಬಂಧಿಸಿದಂತೆ ಅಲ್ಲಿ ಯಾವುದೇ ಮೇಲ್ಮನವಿ ಸಲ್ಲಿಕೆಯಾಗಿಲ್ಲ ಎಂಬುದನ್ನು ಅವರು ಒತ್ತಿ ಹೇಳಿದರು.
- 'ಯಾವುದೇ ಅರ್ಹ ಮತದಾರ ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಮತ್ತು ಯಾವುದೇ ಅನರ್ಹ ಮತದಾರರು ಮತದಾರರ ಪಟ್ಟಿಯಲ್ಲಿ ಸ್ಥಾನ ಪಡೆಯದಂತೆ ಎಸ್‌ಐಆರ್ ಖಚಿತಪಡಿಸುತ್ತದೆ' ಎಂದರು.

***ಎರಡನೇ ಹಂತ ಎಲ್ಲೆಲ್ಲಿ?***

- **ಅಂಡಮಾನ್ ಮತ್ತು ನಿಕೋಬಾರ್, ಲಕ್ಷದ್ವೀಪ, ಛತ್ತೀಸಗಢ, ಗೋವಾ, ಗುಜರಾತ್, ಕೇರಳ, ಮಧ್ಯ ಪ್ರದೇಶ, ಪುದುಚೇರಿ, ರಾಜಸ್ಥಾನ, ತಮಿಳುನಾಡು, ಉತ್ತರ ಪ್ರದೇಶ ಮತ್ತು ಪಶ್ಚಿಮ ಬಂಗಾಳ.**

***ಬಿಹಾರದಲ್ಲಿ ಪ್ರಕ್ರಿಯೆ ಪೂರ್ಣ***

- ಬಿಹಾರದಲ್ಲಿ ಎಸ್‌ಐಆರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಸೆಪ್ಟೆಂಬರ್ 30ರಂದು ಪ್ರಕಟಿಸಿದ ಅಂತಿಮ ಪಟ್ಟಿಯಲ್ಲಿ 7.42 ಕೋಟಿ ಮತದಾರರ ಹೆಸರುಗಳು ಇವೆ. ವಿಶೇಷ ಪರಿಷ್ಕರಣೆ ಬಳಿಕ 3.66 ಲಕ್ಷ ಮತದಾರರನ್ನು ಪಟ್ಟಿಯಿಂದ ಕೈಬಿಡಲಾಗಿದೆ. ಬಿಹಾರದ ಎಸ್‌ಐಆರ್ ಪ್ರಶ್ನಿಸಿ ಸಲ್ಲಿಕೆಯಾಗಿರುವ ಅರ್ಜಿಗಳ ವಿಚಾರಣೆ ಸುಪ್ರೀಂ ಕೋರ್ಟ್‌ನಲ್ಲಿ ನಡೆಯುತ್ತಿದೆ.
- ಮತದಾರರ ಪಟ್ಟಿಯಿಂದ ಕೈಬಿಡಲಾದ ಮತದಾರರಿಗೆ ಚುನಾವಣಾ ಆಯೋಗಕ್ಕೆ ಮೇಲ್ಮನವಿ ಸಲ್ಲಿಸಲು ನೆರವಾಗುವಂತೆ ಬಿಹಾರ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಸುಪ್ರೀಂ ಕೋರ್ಟ್ ಸೂಚಿಸಿದೆ. ಇದುವರೆಗೂ ಯಾವುದೇ ಮೇಲ್ಮನವಿ ಸಲ್ಲಿಕೆಯಾಗಿಲ್ಲ ಎಂದು ಚುನಾವಣಾ ಆಯೋಗ ಹೇಳುತ್ತಿದೆ.
- ಬಿಹಾರದಲ್ಲಿ ವಿಧಾನಸಭಾ ಚುನಾವಣೆ ಘೋಷಣೆಯಾಗಿದ್ದು, ನವೆಂಬರ್ 6 ಹಾಗೂ 11ರಂದು ಮತದಾನ ಹಾಗೂ ನವೆಂಬರ್ 14ರಂದು ಮತ ಎಣಿಕೆ ನಡೆಯಲಿದೆ.
- ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಯಲಿರುವ ಕೇರಳದಲ್ಲಿ ಎಸ್‌ಐಆರ್‌ಅನ್ನು ಮುಂದೂಡಬೇಕೆಂಬ ಮನವಿಯ ಕುರಿತ ಪ್ರಶ್ನೆಗೆ ಅವರು, 'ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಲು ಇದುವರೆಗೆ ಯಾವುದೇ ಅಧಿಸೂಚನೆ ಹೊರಡಿಸಲಾಗಿಲ್ಲ. ಆದ್ದರಿಂದ ಕೇರಳದಲ್ಲಿ ಎರಡನೇ ಹಂತದಲ್ಲಿ ಎಸ್‌ಐಆರ್ ನಡೆಸಲು ಆಯೋಗ ಮುಂದಾಗಿದೆ' ಎಂದು ಹೇಳಿದರು.

Dr. Rajkumar IAS/KAS Academy

- ಎಸ್‌ಐಆರ್ ಕುರಿತು ವಿವಿಧ ರಾಜ್ಯಗಳ ಮುಖ್ಯ ಚುನಾವಣಾ ಅಧಿಕಾರಿಗಳೊಂದಿಗೆ (ಸಿಇಒ) ಕೇಂದ್ರ ಚುನಾವಣಾ ಆಯೋಗದ ಹಿರಿಯ ಅಧಿಕಾರಿಗಳು ಈಚೆಗೆ ಸಭೆ ನಡೆಸಿದ್ದರು. ತಮ್ಮ ತಮ್ಮ ರಾಜ್ಯಗಳಲ್ಲಿ ಕೊನೆಯದಾಗಿ ಎಸ್‌ಐಆರ್ ಪ್ರಕ್ರಿಯೆ ನಡೆದ ಬಳಿಕ ಪ್ರಕಟಿಸಲಾಗಿರುವ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವಂತೆ ಸೂಚಿಸಿದ್ದರು.
- ಹಲವು ರಾಜ್ಯಗಳ ಚುನಾವಣಾಧಿಕಾರಿಗಳು ತಮ್ಮ ಕೊನೆಯ ಎಸ್‌ಐಆರ್ ನಂತರ ಪ್ರಕಟವಾದ ಮತದಾರರ ಪಟ್ಟಿಗಳನ್ನು ಈಗಾಗಲೇ ವೆಬ್‌ಸೈಟ್‌ಗಳಲ್ಲಿ ಲಭ್ಯವಾಗುವಂತೆ ಮಾಡಿದ್ದಾರೆ. ಬಹುತೇಕ ರಾಜ್ಯಗಳಲ್ಲಿ 2002 ಮತ್ತು 2004ರ ನಡುವೆ ಕೊನೆಯದಾಗಿ ಎಸ್‌ಐಆರ್ ನಡೆದಿತ್ತು.

***<u>‘ಬಂಗಾಳ: ಅಡ್ಡಿ ಎದುರಾಗದು’</u>***

- ‘ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ ನಡೆಸಲು ಯಾವುದೇ ಅಡ್ಡಿ ಎದುರಾಗದು’ ಎಂಬುದನ್ನು ಚುನಾವಣಾ ಆಯೋಗ (ಇ.ಸಿ) ಪುನರುಚ್ಚರಿಸಿದೆ. ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ ನಡೆದರೆ ಅಲ್ಲಿ ‘ರಕ್ತಪಾತ’ ಆಗಲಿದೆ ಎಂದು ವರದಿಯಾಗಿರುವ ಬಗ್ಗೆ ಎದುರಾದ ಪ್ರಶ್ನೆಗೆ ಜ್ಞಾನೇಶ್ ಕುಮಾರ್ ಈ ರೀತಿ ಪ್ರತಿಕ್ರಿಯಿಸಿದ್ದಾರೆ.
- ‘ಇ.ಸಿ ತನ್ನ ಕರ್ತವ್ಯ ನಿರ್ವಹಿಸುತ್ತಿದೆ ಮತ್ತು ರಾಜ್ಯ ಸರ್ಕಾರಗಳು ಸಾಂವಿಧಾನಿಕವಾಗಿ ತಮ್ಮ ಕರ್ತವ್ಯಗಳನ್ನು ನಿರ್ವಹಿಸಲು ಬದ್ಧವಾಗಿವೆ. ಎಲ್ಲಾ ಸಾಂವಿಧಾನಿಕ ಸಂಸ್ಥೆಗಳು ಸಂವಿಧಾನದಲ್ಲಿ ತಿಳಿಸಿರುವಂತೆ ತಮ್ಮ ಜವಾಬ್ದಾರಿ ನಿರ್ವಹಿಸುತ್ತವೆ’ ಎಂದು ಹೇಳಿದರು.
- ‘ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳುವುದು ರಾಜ್ಯ ಸರ್ಕಾರದ ಜವಾಬ್ದಾರಿಯಾಗಿದೆ. ಮತದಾರರ ಪಟ್ಟಿ ಸಿದ್ಧಪಡಿಸಲು ಮತ್ತು ಚುನಾವಣೆ ನಡೆಸಲು ಇ.ಸಿಗೆ ಅಗತ್ಯವಿರುವ ಸಿಬ್ಬಂದಿಯನ್ನು ಒದಗಿಸಲು ರಾಜ್ಯಗಳು ಬದ್ಧವಾಗಿವೆ’ ಎಂದರು.

## ❖ ಮುಂದಿನ ಸಿಜೆಐ ನ್ಯಾ. ಸೂರ್ಯಕಾಂತ್ ಹೆಸರು ಶಿಫಾರಸು

**ಸಂದರ್ಭ: ನ್ಯಾಯಮೂರ್ತಿ ಸೂರ್ಯಕಾಂತ್ ಅವರನ್ನು ಸುಪ್ರೀಂ ಕೋರ್ಟ್‌ನ ಮುಂದಿನ ಮುಖ್ಯ ನ್ಯಾಯಮೂರ್ತಿಯ ನ್ನಾಗಿ ನೇಮಕ ಮಾಡುವಂತೆ ಮುಖ್ಯ ನ್ಯಾಯಮೂರ್ತಿ (ಸಿಜೆಐ) ಬಿ.ಆರ್. ಗವಾಯಿ ಅವರು ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಿದ್ದಾರೆ.**

- ಸಿಜೆಐ ಗವಾಯಿ ಅವರ ಬಳಿಕ ನ್ಯಾ. ಸೂರ್ಯಕಾಂತ್ ಅವರೇ ಹಿರಿಯ ನ್ಯಾಯಮೂರ್ತಿಯಾಗಿದ್ದಾರೆ. ಗವಾಯಿ ಅವರು ನ. 23ರಂದು ನಿವೃತ್ತಿಯಾಗಲಿದ್ದಾರೆ. **ಈ ಬಳಿಕ ಸೂರ್ಯಕಾಂತ್ 53ನೇ ಸಿಜೆಐ ಆಗಲಿದ್ದಾರೆ.**
- ಸುಪ್ರೀಂ ಕೋರ್ಟ್‌ನ ನ್ಯಾಯ ಮೂರ್ತಿಯಾಗಿ ನ್ಯಾ. ಸೂರ್ಯಕಾಂತ್ ಅವರು 2019ರ ಮೇ 24ರಂದು ಬಡ್ತಿ ಪಡೆದಿದ್ದರು. ಇವರು 2027ರ ಫೆ. 9ರಂದು ನಿವೃತ್ತಿಯಾಗಲಿದ್ದಾರೆ. ಇವರು ಸುಮಾರು 15 ತಿಂಗಳವರೆಗೆ ಸಿಜೆಐ ಆಗಿ ಕಾರ್ಯನಿರ್ವಹಿಸಲಿದ್ದಾರೆ. ಸಿಜೆಐ ಆಗಿದ್ದವರು ತಮ್ಮ ನಿವೃತ್ತಿಗೆ ಒಂದು ತಿಂಗಳು ಇರುವಂತೆ ಮುಂದಿನ ಸಿಜೆಐ ಆಗುವವರ ಹೆಸರನ್ನು ಶಿಫಾರಸು ಮಾಡಬೇಕಾಗುತ್ತದೆ.



**ನ್ಯಾ. ಸೂರ್ಯ ಕಾಂತ್**

Dr. Rajkumar IAS/KAS Academy

## ❖ ಸರ್ಕಾರಿ ಬ್ಯಾಂಕ್‌ನಲ್ಲಿ ಶೇ 49ರಷ್ಟು ಎಫ್‌ಡಿಐ?

**ಸಂದರ್ಭ: ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳಲ್ಲಿ ಗರಿಷ್ಠ ಶೇಕಡ 49ರಷ್ಟು ವಿದೇಶಿ ನೇರ ಹೂಡಿಕೆಗೆ (ಎಫ್‌ಡಿಐ) ಅವಕಾಶ ಕಲ್ಪಿಸಲು ಕೇಂದ್ರ ಸರ್ಕಾರ ಆಲೋಚಿಸಿದೆ ಎಂದು ಮೂಲಗಳು ತಿಳಿಸಿವೆ.**

- ಈ ವಿಚಾರವಾಗಿ ಕೇಂದ್ರ ಹಣಕಾಸು ಸಚಿವಾಲಯವು ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಜೊತೆ ಚರ್ಚೆ ನಡೆಸಿದೆ. ಕಳೆದ ಎರಡು ತಿಂಗಳುಗಳಿಂದ ಚರ್ಚೆ ನಡೆಯುತ್ತಿದೆ ಎಂದು ಮೂಲವೊಂದು ಹೇಳಿದೆ. ಆದರೆ ಈ ವಿಚಾರವಾಗಿ ಅಂತಿಮ ತೀರ್ಮಾನ ಇನ್ನೂ ಆಗಿಲ್ಲ.
- ಭಾರತದ ಬ್ಯಾಂಕಿಂಗ್ ಉದ್ಯಮದಲ್ಲಿ ವಿದೇಶಿ ಕಂಪನಿಗಳು ಹೆಚ್ಚಿನ ಮಟ್ಟದ ಆಸಕ್ತಿ ತೋರಿಸಿವೆ. ದುಬೈ ಮೂಲದ ಎಮಿರೇಟ್ಸ್ ಎನ್‌ಬಿಡಿ ಸಂಸ್ಥೆಯು ಖಾಸಗಿ ವಲಯದ ಆರ್‌ಬಿಎಲ್ ಬ್ಯಾಂಕ್‌ನ ಶೇಕಡ 60ರಷ್ಟು ಪಾಲನ್ನು ಖರೀದಿಸಿದೆ. ಯೆಸ್ ಬ್ಯಾಂಕ್‌ನ ಶೇ 20ರಷ್ಟು ಪಾಲನ್ನು ಜಪಾನ್‌ನ ಸುಮಿಟೊಮೊ ಮಿಟ್ಸುಯಿ ಬ್ಯಾಂಕಿಂಗ್ ಕಾರ್ಪ್ ಖರೀದಿಸಿ, ನಂತರ ಹೆಚ್ಚುವರಿಯಾಗಿ ಶೇ 4.99ರಷ್ಟು ಪಾಲು ಖರೀದಿಸಿದೆ.
- ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳ ಬಗ್ಗೆಯೂ ವಿದೇಶಿ ಹೂಡಿಕೆದಾರರು ಆಸಕ್ತಿ ವಹಿಸಿದ್ದಾರೆ. ಈ ಬ್ಯಾಂಕ್‌ಗಳಲ್ಲಿ ವಿದೇಶಿ ನೇರ ಹೂಡಿಕೆಗೆ ಇರುವ ಮಿತಿಯನ್ನು ಹೆಚ್ಚಿಸಿದರೆ ಅವುಗಳಿಗೆ ಭವಿಷ್ಯದಲ್ಲಿ ಹೆಚ್ಚಿನ ಬಂಡವಾಳ ಹೊಂದಲು ಆಗುತ್ತದೆ ಎಂದು ಮೂಲಗಳು ವಿವರಿಸಿವೆ.

## ❖ ಏಷ್ಯನ್ ಯೂತ್ ಗೇಮ್ಸ್‌ಗೆ ಚರಿತಾ

**ಸಂದರ್ಭ: ಬಹ್ರೇನ್‌ನಲ್ಲಿ ನಡೆಯಲಿರುವ ಮೂರನೇ ಏಷ್ಯನ್ ಯೂತ್ ಗೇಮ್ಸ್ ಈಜು ಸ್ಪರ್ಧೆ ವಿಭಾಗದಲ್ಲಿ ಶೆಟ್ಟಿಹಳ್ಳಿಯ ಸರ್.ಎಂ. ವಿಶ್ವೇಶ್ವರಯ್ಯ ವಿದ್ಯಾನಿಕೇತನ ಶಾಲೆಯ 10ನೇ ತರಗತಿಯ ವಿದ್ಯಾರ್ಥಿನಿ ಚರಿತ ಪಣೀಂದ್ರನಾಥ್ ಭಾರತವನ್ನು ಪ್ರತಿನಿಧಿಸಲಿದ್ದಾರೆ.**

- ಶಾಲೆಯ ಆಡಳಿತಾಧಿಕಾರಿ ಆರೋಗ್ಯಪ್ಪ ಮಾತನಾಡಿ, 'ನಮ್ಮ ಶಾಲೆಯ ವಿದ್ಯಾರ್ಥಿನಿ ಅಂತರ ರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಲು ಆಯ್ಕೆಯಾಗಿರುವುದು ಹೆಮ್ಮೆಯ ಸಂಗತಿಯಾಗಿದೆ. ಕಠಿಣ ಶ್ರಮದಿಂದ ಅಮೋಘ ಸಾಧನೆ ಮಾಡುವ ಮೂಲಕ ಚರಿತಾ ಪದಕ ಗೆದ್ದು ಬರಲಿ' ಎಂದು ಹಾರೈಸಿದರು.



## ❖ ಆರೋಗ್ಯ ಸಂಜೀವಿನಿ: 4.83 ಲಕ್ಷ ನೌಕರರ ಸಮ್ಮತಿ

**ಸಂದರ್ಭ: ಯೋಜನೆಗೆ ನೌಕರರ ಅವಲಂಬಿತರ ಸೇರ್ಪಡೆ ಕಾರ್ಯ ಪ್ರಗತಿಯಲ್ಲಿದೆ. ಕೇಂದ್ರ ಆರೋಗ್ಯ ಯೋಜನೆ ಪರಿಷ್ಕೃತ ಚಿಕಿತ್ಸಾ ವೆಚ್ಚ ಪ್ರಕಟವಾಗಿದ್ದು, ರಾಜ್ಯವೂ ಅದನ್ನು ಅಳವಡಿಸಿಕೊಳ್ಳುವಂತೆ ಮನವಿ ಮಾಡಿದ್ದೇವೆಸಿ.ಎಸ್.ಷಡಾಕ್ಷರಿ, ಅಧ್ಯಕ್ಷ, ರಾಜ್ಯ ಸರ್ಕಾರಿ ನೌಕರರ ಸಂಘ.**

- ರಾಜ್ಯ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನಗದು ರಹಿತ ಚಿಕಿತ್ಸೆ ಒದಗಿಸುವ 'ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ' (ಕೆಎಎಸ್‌ಎಸ್) ಅ.1 ರಿಂದ ಜಾರಿಯಾಗಿದ್ದು, ಇದುವರೆಗೆ 4.83 ಲಕ್ಷ ನೌಕರರು ಸಮ್ಮತಿ ಸೂಚಿಸಿದ್ದಾರೆ.
- ಹಲವು ವರ್ಷಗಳ ಹಿಂದೆಯೇ ಯೋಜನೆ ರೂಪಿಸಲಾಗಿತ್ತಾದರೂ ಕೆಲ ತಾಂತ್ರಿಕ ಕಾರಣಗಳಿಂದ ಅನುಷ್ಠಾನ ವಿಳಂಬವಾಗಿತ್ತು. ಅಂತಿಮವಾಗಿ ಅ.1 ರಿಂದ ಅನುಷ್ಠಾನಗೊಳಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಆದೇಶ ಹೊರಡಿಸಿತ್ತು.
- **ಸುವರ್ಣ ಕರ್ನಾಟಕ ಆರೋಗ್ಯ ಸುರಕ್ಷಾ ಟ್ರಸ್ಟ್ (ಎಸ್‌ಎಎಸ್‌ಟಿ) ಯೋಜನೆಯ ಅನುಷ್ಠಾನದ ಸಂಸ್ಥೆಯಾಗಿ ಹೊಣೆ ನಿರ್ವಹಿಸುತ್ತಿದೆ.**

- **ಎಲ್ಲ ವರ್ಗದ ನೌಕರರು ಪ್ರತಿ ತಿಂಗಳು ತಮ್ಮ ಪಾಲಿನ ಕಂತು ಪಾವತಿಸಬೇಕಿದೆ. ಪತಿ–ಪತ್ನಿ ಇಬ್ಬರೂ ಸರ್ಕಾರಿ ನೌಕರರಾಗಿ ದ್ದಲ್ಲಿ ಯಾರಾದರೂ ಒಬ್ಬರ ವೇತನದಿಂದ ಮಾತ್ರ ಒಂದು ಕಂತು ಪಾವತಿಸಬಹುದು. ಎಚ್‌ಆರ್‌ಎಂಎಸ್ ವ್ಯಾಪ್ತಿಯಲ್ಲಿ ಇರದ ಇತರೆ ಸರ್ಕಾರಿ ಸಂಸ್ಥೆಗಳ ನೌಕರರ ಕಂತಿನ ಮೊತ್ತವನ್ನು ಆಯಾ ಸಂಸ್ಥೆಗಳು ಹಿಡಿದು ಕೊಂಡು ಟ್ರಸ್ಟ್ ಖಾತೆಗೆ ಜಮೆ ಮಾಡಬೇಕು.** ಯೋಜನೆ ವ್ಯಾಪ್ತಿಗೆ ಒಳಪಡುವ ಎಲ್ಲ ನೌಕರರ ಕಂತನ್ನು ಅಕ್ಟೋಬರ್ ತಿಂಗಳ ವೇತನದಿಂದಲೇ ಕಡಿತ ಮಾಡಲಾಗುತ್ತದೆ. ನಂತರ ಒಟ್ಟು ಮೊತ್ತವನ್ನು ಖಜಾನೆ–2 ಮೂಲಕ ಟ್ರಸ್ಟ್ ಖಾತೆಗೆ ಜಮೆ ಮಾಡಲಾಗುತ್ತದೆ.
- **ಆರಂಭಿಕ ತೊಡಕು, ಮರುಪಾವತಿ ಸೌಲಭ್ಯ ವಿಸ್ತರಣೆ:** ಸರ್ಕಾರಿ ನೌಕರರು ಯಾವುದೇ ಸಾರ್ವಜನಿಕ ಆಸ್ಪತ್ರೆಗಳು, ಬೋಧನಾ ಆಸ್ಪತ್ರೆಗಳು, ಸ್ಥಳೀಯ ಸಂಸ್ಥೆಗಳ ಆಸ್ಪತ್ರೆಗಳು ಹಾಗೂ ಯೋಜನೆಗೆ ನೋಂದಾಯಿಸಿಕೊಂಡ ಖಾಸಗಿ ಆಸ್ಪತ್ರೆ ಗಳಲ್ಲಿ ನಗದು ರಹಿತ ಚಿಕಿತ್ಸಾ ಸೌಲಭ್ಯ ಪಡೆಯಬಹುದು. ಸರ್ಕಾರಿ ನೌಕರರ ಹೆಸರು ಎಚ್‌ಆರ್‌ಎಂಎಸ್‌ನಲ್ಲೇ ದಾಖಲಾಗಿ ರುತ್ತದೆ. ಆರೋಗ್ಯ ಸಮಸ್ಯೆಯಿಂದ ಆಸ್ಪತ್ರೆಗೆ ದಾಖಲಾದರೆ ನಗದುರಹಿತ ಚಿಕಿತ್ಸೆಗೆ ಸಮಸ್ಯೆ ಯಾಗದು. ಜ್ಯೋತಿ ಸಂಜೀವಿನಿ ಯೋಜನೆಯಲ್ಲಿ ಪುರುಷ ನೌಕರರ ತಂದೆ–ತಾಯಿಗೆ ಮಾತ್ರ ಸಿಗುತ್ತಿದ್ದ ಆರೋಗ್ಯ ಸೌಲಭ್ಯವನ್ನು ಈ ಬಾರಿ ಮಹಿಳಾ ನೌಕರರ ತಂದೆ– ತಾಯಿಗೂ ವಿಸ್ತರಿಸಲಾಗಿದೆ. ಈ ಎಲ್ಲ ಅವಲಂಬಿತರ ಹೆಸರು ಸೇರ್ಪಡೆ ಕಾರ್ಯವನ್ನು ಹಲವು ನೌಕರರು ಪೂರ್ಣಗೊಳಿಸಿಲ್ಲ. ಇದರಿಂದ ಅವಲಂಬಿತರನ್ನು ಆಸ್ಪತ್ರೆಗೆ ದಾಖಲಿಸಿದಾಗ ಸಮಸ್ಯೆ ಎದುರಿಸು ವಂತಾಗಿದೆ. ಇಂತಹ ತಾಂತ್ರಿಕ ಕಾರಣಗಳಿಂದಾಗಿ ನಗದು ಚಿಕಿತ್ಸಾ ಸೌಲಭ್ಯ ಆರಂಭವಾಗಿ ದ್ದರೂ, ವೈದ್ಯಕೀಯ ವೆಚ್ಚ ಮರು ಪಾವತಿ ಸೌಲಭ್ಯವನ್ನೂ ಸರ್ಕಾರ 6 ತಿಂಗಳ ವರೆಗೆ ವಿಸ್ತರಿಸಿದೆ. ಮುಂಗಡ ಪಾವತಿಸಿ, ಚಿಕಿತ್ಸೆ ಪಡೆದ ನೌಕರರು ತಾವು ಮಾಡಿದ ವೆಚ್ಚದ ಮೊತ್ತವನ್ನು ಮರಳಿ ಪಡೆಯಬಹುದು.
- ‘ಯೋಜನೆ ವ್ಯಾಪ್ತಿಗೆ ಇನ್ನಷ್ಟು ಆಸ್ಪತ್ರೆಗಳನ್ನು ಸೇರ್ಪಡೆ ಮಾಡುವ ಕೆಲಸ ನಡೆದಿದೆ. ಚಿಕಿತ್ಸಾ ವೆಚ್ಚಗಳ ದರ ಪರಿಷ್ಕರಣೆಗೆ ರಾಜ್ಯ ಸರ್ಕಾರ ಸಮ್ಮತಿ ನೀಡುವ ಭರವಸೆ ಇದೆ. ಅವಲಂಬಿತ ಹೆಸರು ಸೇರ್ಪಡೆ ಕಾರ್ಯವೂ ಪ್ರಗತಿಯಲ್ಲಿದೆ. ಯೋಜನೆಯಿಂದ ನೌಕರರ ಕುಟುಂಬಗಳಿಗೆ ಹೆಚ್ಚಿನ ಪ್ರಯೋಜನವಾಗಲಿದೆ ’ ಎನ್ನುತ್ತಾರೆ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್.ಷಡಾಕ್ಷರಿ.


## ❖ ಆಂಧ್ರಪ್ರದೇಶಕ್ಕೆ ಅಪ್ಪಳಿಸಲಿದೆ ‘ಮೊಂಥಾ’

**ಸಂದರ್ಭ: ಬಂಗಾಳಕೊಲ್ಲಿಯಲ್ಲಿ ಎದ್ದಿರುವ ‘ಮೊಂಥಾ’ ಚಂಡಮಾರುತ ಮಂಗಳವಾರ ಆಂಧ್ರ ಪ್ರದೇಶದ ಕರಾವಳಿಗೆ ಅಪ್ಪಳಿಸಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮೊಂಥಾದ ಪ್ರಭಾವವು ತಮಿಳುನಾಡು, ಒಡಿಶಾ, ಪಶ್ಚಿಮ ಬಂಗಾಳದ ಮೇಲೂ ಆಗಲಿದೆ ಎಂದು ಹೇಳಿದೆ.**

- ಆಂಧ್ರ ಪ್ರದೇಶ ಹಾಗೂ ಒಡಿಶಾ ಸರ್ಕಾರಗಳು ಮುನ್ನೆಚ್ಚರಿಕಾ ಕ್ರಮವಾಗಿ ಹಲವು ಸಿದ್ಧತೆಗಳನ್ನು ಮಾಡಿಕೊಂಡಿವೆ. ಆಂಧ್ರ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರು ಸಿದ್ಧತಾ ಕಾರ್ಯಗಳ ಬಗ್ಗೆ ಅಧಿಕಾರಿಗಳ ಜೊತೆ ಸಭೆ ನಡೆಸಿದರು. ಕೇಂದ್ರ ಸರ್ಕಾರದಿಂದ ಎಲ್ಲ ರೀತಿಯ ಸಹಕಾರ ನೀಡುವುದಾಗಿ ಪ್ರಧಾನಿ ನರೇಂದ್ರ ಮೋದಿ ಅವರು ನಾಯ್ಡು ಅವರಿಗೆ ಭರವಸೆ ನೀಡಿದ್ದಾರೆ.
- ಪ್ರತಿ ಗಂಟೆಗೆ 90 ಕಿ.ಮೀನಿಂದ 100 ಕಿ.ಮೀವರೆಗೂ ಗಾಳಿ ಬೀಸಲಿದೆ. ಗಾಳಿಯ ವೇಗವು ಗಂಟೆಗೆ 110 ಕಿ.ಮೀವರೆಗೂ ತಲುಪಬಹುದು ಎಂದು ಹವಾಮಾನ ಇಲಾಖೆ ಅಂದಾಜಿಸಿದೆ. ಚಂಡಮಾರುತದ ಪ್ರಭಾವವು ಆಂಧ್ರದಲ್ಲಿ ಈಗಾಗಲೇ ಆರಂಭವಾಗಿದ್ದು, ಸೋಮವಾರ ಬೆಳಿಗ್ಗೆಯಿಂದ ಕರಾವಳಿ ಭಾಗದಲ್ಲಿ ಮಳೆಯಾಗುತ್ತಿದೆ. ಮಂಗಳವಾರದಿಂದ ಶುಕ್ರವಾರದವರೆಗೆ ಪಶ್ಚಿಮ ಬಂಗಾಳ ದಲ್ಲಿ ಮಳೆಯಾಗಲಿದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ.

- ಒಡಿಶಾದ ದಕ್ಷಿಣ ಭಾಗದ ಎಂಟು ಜಿಲ್ಲೆಗಳಲ್ಲಿ ಹವಾಮಾನ ಇಲಾಖೆಯು ರೆಡ್ ಅಲರ್ಟ್ ಘೋಷಿಸಿದೆ. ಈ ಭಾಗದ ಜನರನ್ನು ಸ್ಥಳಾಂತರಿಸುವ ಕಾರ್ಯವನ್ನು ಸರ್ಕಾರ ಆರಂಭಿಸಿದೆ.
- ಆಂಧ್ರದಲ್ಲಿ ಸರ್ಕಾರಿ ನೌಕರರ ರಜೆಗಳನ್ನು ರದ್ದು ಮಾಡಲಾಗಿದ್ದು, ಮುನ್ನೆಚ್ಚರಿಕಾ ಕಾರ್ಯದಲ್ಲಿ ತೊಡಗಿಕೊಳ್ಳುವಂತೆ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರು ಸೂಚಿಸಿದ್ದಾರೆ.
- ಮುಂದಿನ ಎರಡು ದಿನಗಳಲ್ಲಿ ತೆಲಂಗಾಣದ ಕೆಲವು ಪ್ರದೇಶ ಗಳಲ್ಲಿಯೂ ಭಾರಿ ಮಳೆಯಾಗಲಿದೆ.
- **ಮೊಂಥಾ ಎಂದರೆ?: ಥಾಯ್ ಭಾಷೆಯಲ್ಲಿ ಮೊಂಥಾ ಎಂದರೆ ಸುಂದರ ಹೂವು ಅಥವಾ ಸುವಾಸನೆ ಭರಿತ ಹೂವು ಎಂದರ್ಥ.**

## ❖ ಹಿಂದುಳಿದ ಪ್ರದೇಶ ತಲುಪದ ಸಿಎಸ್‌ಆರ್



# ಹಿಂದುಳಿದ ಪ್ರದೇಶ ತಲುಪದ ಸಿಎಸ್‌ಆರ್

• ಬಿ.ವಿ.ಶ್ರೀನಾಥ್, ಸೂರ್ಯನಾರಾಯಣ ವಿ.

ಕರ್ನಾಟಕವು ಕಂಪನಿಗಳಿಂದ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (ಸಿಎಸ್‌ಆರ್) ನಿಧಿ ಪಡೆಯುವ ರಾಜ್ಯಗಳ ಪಟ್ಟಿಯಲ್ಲಿ (2023–24ನೇ ಸಾಲಿನಲ್ಲಿ) ದೇಶದಲ್ಲಿ ಮೂರನೇ ಸ್ಥಾನದಲ್ಲಿದೆ. ಮೊದಲ ಸ್ಥಾನದಲ್ಲಿ ಮಹಾರಾಷ್ಟ್ರ, ನಂತರದ ಸ್ಥಾನದಲ್ಲಿ ಗುಜರಾತ್ ಇವೆ. ಕಂಪನಿಗಳು ಸಿಎಸ್‌ಆರ್ ನಿಧಿಯನ್ನು ನೀಡುವಾಗ ಮುಂದುವರಿದ ರಾಜ್ಯಗಳತ್ತಲೇ ಹೆಚ್ಚು ಗಮನ ಹರಿಸುತ್ತಿವೆ; ನೆರವಿನ ಅಗತ್ಯ ಇರುವ ರಾಜ್ಯಗಳತ್ತ, ಹಿಂದುಳಿದ ಪ್ರದೇಶಗಳತ್ತ, ಸೂಕ್ಷ್ಮ ವಲಯಗಳತ್ತ ಚಿತ್ತ ಹರಿಸುತ್ತಿಲ್ಲ ಎನ್ನುವ ದೂರು ಇದೆ. ಅಂಕಿಅಂಶಗಳೂ ಅದನ್ನೇ ಹೇಳುತ್ತಿವೆ

ಬೆಂಗಳೂರಿನ ರಸ್ತೆ ಗುಂಡಿಗಳು ಸೇರಿದಂತೆ ಬೆಂಗಳೂರಿನಲ್ಲಿ ಮೂಲಸೌಕರ್ಯದ ಸಮಸ್ಯೆಗಳ ಬಗ್ಗೆ ಇತ್ತೀಚೆಗೆ ಕೆಲವು ಉದ್ಯಮಿಗಳು ಬಹಿರಂಗವಾಗಿಯೇ ಆಕ್ಷೇಪಿಸಿದ್ದರು. ಅದಕ್ಕೆ ತೀಕ್ಷ್ಣ ಪ್ರತಿಕ್ರಿಯೆ ನೀಡಿದ್ದ ರಾಜ್ಯದ ಸಚಿವರು, ಕಂಪನಿಗಳು ತಮ್ಮ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆಯ (ಸಿಎಸ್‌ಆರ್) ನಿಧಿಯಿಂದ ಮೂಲಸೌಕರ್ಯ ಅಭಿವೃದ್ಧಿಪಡಿಸಲಿ ಎಂದು ಪ್ರತಿಕ್ರಿಯಿಸಿದ್ದರು. ಈ ವಿದ್ಯಮಾನದಿಂದ ಕಂಪನಿಗಳು ನೀಡುವ ಸಿಎಸ್‌ಆರ್ ನಿಧಿಯು ಯಾವ ವಲಯಗಳಿಗೆ ಹೆಚ್ಚು ವೆಚ್ಚವಾಗುತ್ತಿದೆ ಎನ್ನುವ ಪ್ರಶ್ನೆಗಳೂ ಹುಟ್ಟಿಕೊಂಡಿದ್ದವು.

ಭಾರತದಲ್ಲಿ ವರ್ಷದಿಂದ ವರ್ಷಕ್ಕೆ ಸಿಎಸ್‌ಆರ್ ನಿಧಿ ಹೆಚ್ಚುತ್ತಲೇ ಸಾಗುತ್ತಿದೆ. 2023–24ನೇ ಸಾಲಿನಲ್ಲಿ ಈ ಹಣದಲ್ಲಿ ದೇಶದಾದ್ಯಂತ 59,634 ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಪ್ರತಿ ಯೋಜನೆಯ ಸರಾಸರಿ ವೆಚ್ಚ ₹58.5 ಲಕ್ಷ. ಅಗ್ರ 10 ಕಂಪನಿಗಳನ್ನು ಹೊರತುಪಡಿಸಿದರೆ, ಉಳಿದ ಕಂಪನಿಗಳು ಸರಾಸರಿಯಾಗಿ ತಲಾ ₹1.07 ಕೋಟಿ ಕೊಡುಗೆ ನೀಡಿವೆ. ನಿಧಿಯಲ್ಲಿ ಶೇ 60ರಷ್ಟು ಹಣವನ್ನು ವಿವಿಧ ವಲಯಗಳಲ್ಲಿ ಮೂಲಸೌಕರ್ಯ ವೃದ್ಧಿಗೆ ಬಳಸಲಾಗಿದೆ.

### ದೇಶದಲ್ಲಿ ಸಿಎಸ್‌ಆರ್ (2023-24)

**27,188** ಸಿಎಸ್‌ಆರ್ ನಿಧಿಗೆ ಕೊಡುಗೆ ನೀಡಿದ ಕಂಪನಿಗಳು

**₹34,909 ಕೋಟಿ** ಮಾಡಲಾದ ಒಟ್ಟು ವೆಚ್ಚ

**59,633** ಕೈಗೆತ್ತಿಕೊಂಡ ಅಭಿವೃದ್ಧಿ ಯೋಜನೆಗಗಳು



### ವರ್ಷವಾರು ವೆಚ್ಚ (ಕೋಟಿಗಳಲ್ಲಿ)

| | 2019-20 | 2020-21 | 2021-22 | 2022-23 | 2023-24 |
|---|---|---|---|---|---|
| ಭಾರತ | ₹24,966 | ₹26,211 | ₹27,141 | ₹30,932 | ₹34,909 |
| ಕರ್ನಾಟಕ | ₹1,448 | ₹1,278 | ₹1,850 | ₹2,059 | ₹2,255 |

### 2023–24ರಲ್ಲಿ ಗರಿಷ್ಠ ನೆರವು ಪಡೆದ ರಾಜ್ಯಗಳು (ಕೋಟಿಗಳಲ್ಲಿ)

| | |
|---|---|
| ಮಹಾರಾಷ್ಟ್ರ | ₹6,066 |
| ಗುಜರಾತ್ | ₹2,708 |
| ಕರ್ನಾಟಕ | ₹2,255 |
| ತಮಿಳುನಾಡು | ₹1,969 |
| ದೆಹಲಿ | ₹1,950 |
| ಉತ್ತರ ಪ್ರದೇಶ | ₹1,545 |
| ಒಡಿಶಾ | ₹1,389 |
| ರಾಜಸ್ಥಾನ | ₹1,146 |
| ಆಂಧ್ರ ಪ್ರದೇಶ | ₹1,130 |
| ತೆಲಂಗಾಣ | ₹1,055 |

### ಪ್ರಾದೇಶಿಕ ವ್ಯತ್ಯಾಸ

2014ರಲ್ಲಿ ಕಂಪನಿಗಳು ಸಿಎಸ್‌ಆರ್ ನಿಧಿಗೆ ₹10 ಸಾವಿರ ಕೋಟಿ ಕೊಡುಗೆ ನೀಡಿದ್ದವು. 2023–24ರಲ್ಲಿ ಈ ಮೊತ್ತವು ದಾಖಲೆಯ ₹34,909 ಕೋಟಿಗೆ ಏರಿದ್ದು, ಹಿಂದಿನ ವರ್ಷಕ್ಕಿಂತ (2022–23) ಶೇ 13ರಷ್ಟು ಹೆಚ್ಚಳವಾಗಿದೆ. ಆದರೆ, ಹೆಚ್ಚು ಉದ್ದಿಮೆಗಳು ಇರುವ, ಆರ್ಥಿಕ ಅಭಿವೃದ್ಧಿಯಲ್ಲಿ ಮುಂದೆ ಇರುವ ಆರು ರಾಜ್ಯಗಳಿಗೆ ಶೇ 60ರಷ್ಟು ಸಿಎಸ್‌ಆರ್ ನಿಧಿ ಸಂದಾಯವಾಗುತ್ತಿದೆ. ಮಹಾರಾಷ್ಟ್ರ, ಗುಜರಾತ್, ಕರ್ನಾಟಕ, ತಮಿಳುನಾಡು, ದೆಹಲಿ ರಾಜ್ಯಗಳಿಗೆ ಹೆಚ್ಚು ಸಿಎಸ್‌ಆರ್ ನಿಧಿ ಸಿಕ್ಕಿದೆ. ಹಿಂದುಳಿದ ಮಿಜೋರಾಂ (₹4.48 ಕೋಟಿ), ಮೇಘಾಲಯ (₹38 ಕೋಟಿ), ಡಿಯು ಮತ್ತು ದಮನ್ (₹13 ಕೋಟಿ), ತ್ರಿಪುರಾ (₹9.45 ಕೋಟಿ), ಪುದುಚೇರಿ (₹32.68 ಕೋಟಿ), ನಾಗಾಲ್ಯಾಂಡ್ (₹15.41 ಕೋಟಿ) ರಾಜ್ಯಗಳಿಗೆ ಕಡಿಮೆ ಕೊಡುಗೆ ಸಂದಾಯವಾಗಿದೆ.

ಕರ್ನಾಟಕದಲ್ಲಿಯೂ ಇದೇ ಪ್ರವೃತ್ತಿ ಕಂಡುಬಂದಿದೆ. ಗದಗ (₹4.15 ಕೋಟಿ), ಕೊಪ್ಪಳ (₹10.76 ಕೋಟಿ), ಬೀದರ್‌ನಂತಹ (₹13 ಕೋಟಿ) ಹಿಂದುಳಿದ ಜಿಲ್ಲೆಗಳಿಗಿಂತ ಮೈಸೂರು, ಬೆಂಗಳೂರು ಗ್ರಾಮಾಂತರ, ದಕ್ಷಿಣ ಕನ್ನಡ, ಧಾರವಾಡ ಜಿಲ್ಲೆಗಳಿಗೆ ಹೆಚ್ಚು ಸಿಎಸ್‌ಆರ್ ನಿಧಿ ಸಿಕ್ಕಿದೆ.

ಕಂಪನಿಗಳು, ತಾವು ಕಾರ್ಯಾಚರಿಸುತ್ತಿರುವ ರಾಜ್ಯ/ಪ್ರದೇಶದಲ್ಲಿಯೇ ಹೆಚ್ಚು ಹಣ ವೆಚ್ಚ ಮಾಡುತ್ತಿವೆ. ನಿಯಮಗಳ ಪ್ರಕಾರ ಇದು ಕಡ್ಡಾಯವೇನಲ್ಲ. ಹಾಗಾಗಿ ಹಿಂದುಳಿದಿರುವ ರಾಜ್ಯ, ಜಿಲ್ಲೆ, ಪ್ರದೇಶಗಳಿಗೆ ಹೆಚ್ಚು ಹಣವನ್ನು ಕೊಡುಗೆಯಾಗಿ ನೀಡಬೇಕು ಎಂದು ಅಧ್ಯಯನಗಳು ಶಿಫಾರಸು ಮಾಡಿವೆ.

ವಲಯವಾರು ಕೊಡುಗೆಯನ್ನು ಗಮನಿಸಿದರೆ, ರಾಜ್ಯದಲ್ಲಿ ಶಿಕ್ಷಣ, ಆರೋಗ್ಯ, ಸುಸ್ಥಿರತೆ, ಗ್ರಾಮೀಣಾಭಿವೃದ್ಧಿ ಮತ್ತು ಕ್ರೀಡೆಗಳಿಗೆ ಹೆಚ್ಚು ಆದ್ಯತೆ ನೀಡಲಾಗಿದೆ. ಆದರೆ, ಹಿರಿಯ ನಾಗರಿಕರ ಯೋಗಕ್ಷೇಮ, ಕೊಳೆಗೇರಿ ಅಭಿವೃದ್ಧಿ, ಲಿಂಗ ಸಮಾನತೆಯಂಥ ಕ್ಷೇತ್ರಗಳಿಗೆ ಹೆಚ್ಚಿನ ಆದ್ಯತೆ ಸಿಕ್ಕಿಲ್ಲ.

### ಹೆಚ್ಚು ನೆರವು ಸಿಕ್ಕ ಜಿಲ್ಲೆಗಳು (ಕೋಟಿಗಳಲ್ಲಿ)

| | |
|---|---|
| ಮೈಸೂರು | ₹156 |
| ಬೆಂ. ಗ್ರಾಮಾಂತರ | ₹150 |
| ಬಳ್ಳಾರಿ | ₹71 |
| ಕೋಲಾರ | ₹52 |
| ದಕ್ಷಿಣ ಕನ್ನಡ | ₹51 |
| ಧಾರವಾಡ | ₹39 |
| ತುಮಕೂರು | ₹29 |
| ಉಡುಪಿ | ₹27 |
| ಬೆಳಗಾವಿ | ₹22 |
| ರಾಯಚೂರು | ₹22 |

### ಏನಿದು ಸಿಎಸ್‌ಆರ್ ನಿಧಿ?

ಕಂಪನಿಗಳ ಕಾಯ್ದೆ–2013ರ 135ನೇ ಸೆಕ್ಷನ್ ಪ್ರಕಾರ, ₹500 ಕೋಟಿ ಅಥವಾ ಅದಕ್ಕಿಂತ ಹೆಚ್ಚು ಮಾರುಕಟ್ಟೆ ಮೌಲ್ಯ ಹೊಂದಿರುವ ಕಂಪನಿಗಳು ಅಥವಾ ₹1,000 ಕೋಟಿ ವಹಿವಾಟು ನಡೆಸುವ ಕಂಪನಿಗಳು ಅಥವಾ ಹಣಕಾಸು ವರ್ಷದಲ್ಲಿ ₹5 ಕೋಟಿ ನಿವ್ವಳ ಲಾಭ ಮಾಡಿದ ಕಂಪನಿಗಳು ತಮ್ಮ ಮೂರು ವರ್ಷಗಳ ಸರಾಸರಿ ಲಾಭಾಂಶದಲ್ಲಿ ಕನಿಷ್ಠ ಶೇ 2ರಷ್ಟು ಮೊತ್ತವನ್ನು ಸಿಎಸ್‌ಆರ್ ಚಟುವಟಿಕೆಗಳಿಗೆ ನೀಡುವುದು ಕಡ್ಡಾಯವಾಗಿದೆ. ಸಿಎಸ್‌ಆರ್ ಹಣವನ್ನು ನೀಡಬಹುದಾದ 24 ಅಭಿವೃದ್ಧಿ ವಲಯಗಳನ್ನೂ ಕಾಯ್ದೆಯಲ್ಲಿ ಉಲ್ಲೇಖಿಸಲಾಗಿದೆ.

ಆಧಾರ: ನ್ಯಾಷನಲ್ ಸಿಎಸ್‌ಆರ್ ಪೋರ್ಟಲ್, ಭಾರತ್ ಸಿಎಸ್‌ಆರ್ ಪರ್ಫಾರ್ಮೆನ್ಸ್ ರಿಪೋರ್ಟ್ (2018–2023)

### 2023–24ರಲ್ಲಿ ಸಿಎಸ್‌ಆರ್ ಹಣವನ್ನು ಹೆಚ್ಚು ವ್ಯಯಿಸಿದ ಕಂಪನಿಗಳು (ಕೋಟಿಗಳಲ್ಲಿ)

| | |
|---|---|
| 1. ಎಚ್‌ಡಿಎಫ್‌ಸಿ ಬ್ಯಾಂಕ್ | ₹922 |
| 2. ರಿಲಯನ್ಸ್ ಇಂಡಸ್ಟ್ರೀಸ್ | ₹899 |
| 3. ಟಿಸಿಎಸ್ | ₹813 |
| 4. ಒಎನ್‌ಜಿಸಿ | ₹612 |
| 5. ಟಾಟಾ ಸ್ಟೀಲ್ | ₹573 |
| 6. ಇನ್ಫೊಸಿಸ್ | ₹451 |
| 7. ಐಒಸಿ | ₹436 |
| 8. ರಿಲಯನ್ಸ್ ಜಿಯೊ | ₹403 |
| 9. ಐಟಿಸಿ | ₹380 |
| 10. ಐಸಿಐಸಿಐ ಬ್ಯಾಂಕ್ | ₹368 |

| | |
|---|---|
| 1. ಇನ್ಫೊಸಿಸ್ | ₹211 |
| 2. ವಿಪ್ರೊ | ₹175 |
| 3. ಝಿರೋಧಾ | ₹84 |
| 4. ಎಚ್‌ಡಿಎಫ್‌ಸಿ | ₹29 |
| 5. ಮೈಕ್ರೊ ಲ್ಯಾಬ್ಸ್ | ₹24 |
| 6. ಕೆಪಿಟಿಸಿಎಲ್ | ₹23 |
| 7. ನವರತನ್ ಜ್ಯುವೆಲ್ಲರ್ಸ್ | ₹22 |
| 8. ಇಂಟೆಲ್ ಟೆಕ್ನಾಲಜಿ | ₹22 |
| 9. ಎಂಆರ್‌ಪಿಎಲ್ | ₹20 |
| 10. ಬಾಗ್ಮನೆ ಡೆವಲಪರ್ಸ್ | ₹18 |

### ಶಿಕ್ಷಣ, ಆರೋಗ್ಯಕ್ಕೆ ಒತ್ತು

ಪ್ರತಿ ವರ್ಷ ಕಂಪನಿಗಳು ತಮ್ಮ ಸಿಎಸ್‌ಆರ್ ಚಟುವಟಿಕೆಯಲ್ಲಿ ಶಿಕ್ಷಣ, ಅಂಗವಿಕಲರಿಗೆ ನೆರವು ಮತ್ತು ಜೀವನೋಪಾಯಕ್ಕೆ ಹೆಚ್ಚು ಒತ್ತು ನೀಡುತ್ತಾ ಬಂದಿವೆ. 2023–24ರಲ್ಲಿ ಈ ಉದ್ದೇಶಕ್ಕೆ ವ್ಯಯಿಸಿದ ಮೊತ್ತ ₹16,288 ಕೋಟಿ. ಕರ್ನಾಟಕದಲ್ಲಿ ಈ ಉದ್ದೇಶಕ್ಕೆ ₹1,162 ಕೋಟಿ ಬಳಸಲಾಗಿದೆ. ಆರೋಗ್ಯ, ಹಸಿವು–ಬಡತನ ನಿವಾರಣೆ, ಶುದ್ಧ ಕುಡಿಯುವ ನೀರು, ಅಪೌಷ್ಟಿಕತೆ ನಿವಾರಣೆ ಮತ್ತು ಸ್ವಚ್ಛತೆಗೆ ದೇಶದಲ್ಲಿ ₹9,087 ಕೋಟಿ ಖರ್ಚು ಮಾಡಲಾಗಿದೆ. ರಾಜ್ಯದಲ್ಲಿ ಈ ಮೊತ್ತ ₹428 ಕೋಟಿ. ಪರಿಸರ, ಪ್ರಾಣಿಗಳು ಮತ್ತು ಸಂಪನ್ಮೂಲಗಳ ಸಂರಕ್ಷಣೆಗಾಗಿ ದೇಶದಲ್ಲಿ ₹3,459 ಕೋಟಿಯಷ್ಟು ಖರ್ಚು ಮಾಡಲಾಗಿದೆ. ಗ್ರಾಮೀಣ ಅಭಿವೃದ್ಧಿಗೆ ₹2,408 ಕೋಟಿ, ಲಿಂಗಸಮಾನತೆ, ಮಹಿಳಾ ಸಬಲೀಕರಣ, ವೃದ್ಧಾಶ್ರಮಗಳ ನೆರವಿಗಾಗಿ ₹1,092 ಕೋಟಿಯಷ್ಟು ಹಣವನ್ನು ಬಳಸಲಾಗಿದೆ. ಪಾರಂಪರಿಕ ಕಲೆ ಮತ್ತು ಸಂಸ್ಕೃತಿಗಾಗಿ ₹704 ಕೋಟಿ ಖರ್ಚು ಮಾಡಲಾಗಿದೆ.

## ❖ ಅಮೆರಿಕದಿಂದ ತೈಲ ಖರೀದಿ ಹೆಚ್ಚಳ

**ಸಂದರ್ಭ: ಆಮದು ಪ್ರಮಾಣ ದಿನವೊಂದಕ್ಕೆ 5.40 ಲಕ್ಷ ಬ್ಯಾರಲ್‌ಗೆ ಏರಿಕೆ: ಭಾರತವು ಅಮೆರಿಕದಿಂದ ಆಮದು ಮಾಡಿಕೊಳ್ಳುವ ಕಚ್ಚಾ ತೈಲದ ಪ್ರಮಾಣವು ಅಕ್ಟೋಬರ್‌ನಲ್ಲಿ ಹೆಚ್ಚಳ ಕಂಡಿದೆ. ಇದು 2022ರ ನಂತರದ ಗರಿಷ್ಠ ಮಟ್ಟ.**

- ಕಚ್ಚಾ ತೈಲದ ಆಮದು ಪ್ರಮಾಣವನ್ನು ರಷ್ಯಾ ಹೊರಗೂ ಹೆಚ್ಚಿಸಿಕೊಳ್ಳುವ, ಅಮೆರಿಕದ ಜೊತೆ ವ್ಯಾಪಾರ ವಹಿವಾಟುಗಳಿಗೆ ಸಂಬಂಧಿಸಿದಂತೆ ಮೂಡಿರುವ ಬಿಕ್ಕಟ್ಟನ್ನು ಸುಧಾರಿಸುವ ಪ್ರಯತ್ನದ ಭಾಗವಾಗಿ ಭಾರತವು ಈ ಹೆಜ್ಜೆ ಇರಿಸಿದೆ ಎನ್ನಲಾಗಿದೆ.
- ಅಕ್ಟೋಬರ್ 27, ಹೊತ್ತಿಗೆ ಭಾರತವು ಅಮೆರಿಕದಿಂದ ಆಮದು ಮಾಡಿಕೊಳ್ಳುವ ಕಚ್ಚಾ ತೈಲದ ಪ್ರಮಾಣವು ದಿನವೊಂದಕ್ಕೆ 5.40 ಲಕ್ಷ ಬ್ಯಾರಲ್‌ಗೆ ತಲುಪಿದೆ ಎಂದು ದತ್ತಾಂಶಗಳ ಮೇಲೆ ಗಮನ ಇರಿಸುವ ಕೆಪ್ಲರ್ ಸಂಸ್ಥೆ ಹೇಳಿದೆ.
- ಅಕ್ಟೋಬರ್ ಅಂತ್ಯದ ಹೊತ್ತಿಗೆ ಆಮದು ಪ್ರಮಾಣವು ದಿನವೊಂದಕ್ಕೆ 5.75 ಲಕ್ಷ ಬ್ಯಾರಲ್‌ಗೆ ತಲುಪಬಹುದು. ನವೆಂಬರ್‌ನಲ್ಲಿ ಆಮದು ಪ್ರಮಾಣವು ದಿನವೊಂದಕ್ಕೆ 4 ಲಕ್ಷದಿಂದ 4.5 ಲಕ್ಷ ಬ್ಯಾರಲ್ ವರೆಗೆ ಇರಬಹುದು ಎಂದು ಅಂದಾಜು ಮಾಡಲಾಗಿದೆ. ಈ ವರ್ಷದಲ್ಲಿ ಇದುವರೆಗೆ ಅಮೆರಿಕದಿಂದ ಆಮದು ಮಾಡಿಕೊಳ್ಳುತ್ತಿದ್ದ ಕಚ್ಚಾ ತೈಲದ ಸರಾಸರಿ ಪ್ರಮಾಣಕ್ಕೆ (ದಿನವೊಂದಕ್ಕೆ 3 ಲಕ್ಷ ಬ್ಯಾರಲ್) ಹೋಲಿಸಿದರೆ ಇದು ಹೆಚ್ಚು.
- ಹಣಕಾಸಿನ ಲೆಕ್ಕಾಚಾರ ಆಧರಿಸಿ ಅಮೆರಿಕದಿಂದ ಆಮದು ಪ್ರಮಾಣ ಹೆಚ್ಚಿಸಲಾಗಿದೆ. ಬ್ರೆಂಟ್ ಕಚ್ಚಾ ತೈಲಕ್ಕಿಂತ ಡಬ್ಲ್ಯುಟಿಐ ಮಿಡ್‌ಲ್ಯಾಂಡ್ ಕಚ್ಚಾ ತೈಲವು ಭಾರತದ ಕಚ್ಚಾ ತೈಲ ಸಂಸ್ಕರಣಾ ಕಂಪನಿಗಳಿಗೆ ಕಡಿಮೆ ದರಕ್ಕೆ ಸಿಕ್ಕಿದೆ ಎಂದು ಕೆಪ್ಲರ್ ಸಂಸ್ಥೆಯ ಸಂಶೋಧನಾ ವಿಶ್ಲೇಷಕ ಸುಮಿತ್ ರಿತೋಲಿಯಾ ಹೇಳಿದ್ದಾರೆ.
- **ಅಮೆರಿಕದಿಂದ ಆಮದು ಹೆಚ್ಚಾಗಿದ್ದರೂ, ಭಾರತಕ್ಕೆ ಕಚ್ಚಾ ತೈಲ ಪೂರೈಸುವ ದೇಶಗಳ ಪಟ್ಟಿಯಲ್ಲಿ ಮೊದಲ ಸ್ಥಾನದಲ್ಲಿ ಈಗಲೂ ರಷ್ಯಾ ಇದೆ. ಎರಡನೆಯ ಸ್ಥಾನದಲ್ಲಿ ಇರಾಕ್ ಹಾಗೂ ಮೂರನೆಯ ಸ್ಥಾನದಲ್ಲಿ ಸೌದಿ ಅರೇಬಿಯಾ ಇದೆ.**
- ಭಾರತದ ಕಚ್ಚಾ ತೈಲ ಸಂಸ್ಕರಣಾ ಕಂಪನಿಗಳು ಅಮೆರಿಕದ ಕಚ್ಚಾ ತೈಲವನ್ನು ಹೆಚ್ಚಿನ ಪ್ರಮಾಣದಲ್ಲಿ ಖರೀದಿಸಲು ಮುಂದಾಗಿವೆ. ತಮ್ಮ ಪೂರೈಕೆ ಜಾಲವನ್ನು ವಿಸ್ತರಿಸಿಕೊಳ್ಳುವ ಜೊತೆಗೆ, ಅಮೆರಿಕದ ಜೊತೆ ಸಹಕರಿಸಲು ಸಿದ್ಧ ಎಂಬ ಸಂದೇಶ ರವಾನಿಸುವ ಉದ್ದೇಶವೂ ಇದರ ಹಿಂದಿದೆ ಎಂದು ಸರ್ಕಾರ ಹಾಗೂ ವರ್ತಕರ ವಲಯದ ಮೂಲಗಳು ಹೇಳಿವೆ.
- ಆದರೆ ಅಮೆರಿಕದಿಂದ ಕಚ್ಚಾ ತೈಲ ಆಮದು ಇನ್ನೂ ಹೆಚ್ಚಾಗುವ ಸಾಧ್ಯತೆ ಕಡಿಮೆ ಎಂದು ರಿತೊಲಿಯಾ ಅಭಿಪ್ರಾಯಪಟ್ಟಿದ್ದಾರೆ. ‘ಈಗ ಭಾರತವು ಅಮೆರಿಕದಿಂದ ಹೆಚ್ಚಿನ ಪ್ರಮಾಣದಲ್ಲಿ ಕಚ್ಚಾ ತೈಲ ಖರೀದಿಸಿರುವುದಕ್ಕೆ ಒಂದು ಕಾರಣ ಒಳ್ಳೆಯ ಬೆಲೆಗೆ ಅದು ಸಿಕ್ಕಿರುವುದು. ಅಲ್ಲಿಂದ ಭಾರತಕ್ಕೆ ಕಚ್ಚಾ ತೈಲ ತರಲು ಹೆಚ್ಚಿನ ಸಮಯ ಬೇಕು, ಸಾಗಣೆ ವೆಚ್ಚ ಹೆಚ್ಚಾಗಿರುತ್ತದೆ. ಹೀಗಾಗಿ ಅಲ್ಲಿಂದ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಕಚ್ಚಾ ತೈಲ ಖರೀದಿ ಆಗಲಿಕ್ಕಿಲ್ಲ’ ಎಂದು ಅವರು ಹೇಳಿದ್ದಾರೆ.

### ಐಒಸಿ ಲಾಭ ಹಲವು ಪಟ್ಟು ಏರಿಕೆ

- ಸರ್ಕಾರಿ ಸ್ವಾಮ್ಯದ ಇಂಡಿಯನ್ ಆಯಿಲ್ ಕಾರ್ಪೊರೇಷನ್‌ನ (ಐಒಸಿ) ಸೆಪ್ಟೆಂಬರ್ ತ್ರೈಮಾಸಿಕದ ಲಾಭವು ಹಲವು ಪಟ್ಟು ಹೆಚ್ಚಾಗಿ ₹7,610 ಕೋಟಿಗೆ ತಲುಪಿದೆ. ಹಿಂದಿನ ವರ್ಷದ ಇದೇ ಅವಧಿಯಲ್ಲಿ ಕಂಪನಿಯ ಲಾಭವು ₹180 ಕೋಟಿ ಆಗಿತ್ತು.

Dr. Rajkumar IAS/KAS Academy

### ❖ ಶೇ 6ರಷ್ಟು ಹೆಚ್ಚಾಗಿದೆ. ಕಚ್ಚಾ ತೈಲ ಸಂಸ್ಕರಣೆಯ ಪ್ರಮಾಣವು ಶೇ 5ರಷ್ಟು ಹೆಚ್ಚಾಗಿದೆ.

**ಸಂದರ್ಭ: 'ಎಲ್ಲ ಬಗೆಯ ನಿರ್ಬಂಧಗಳನ್ನು ಪಾಲಿಸಲಾಗುವುದು' ಎಂದು ಐಒಸಿ ಅಧ್ಯಕ್ಷ ಅರವಿಂದರ್ ಸಿಂಗ್ ಸಾಹ್ನಿ ಹೇಳಿದ್ದಾರೆ. ಆದರೆ, ರಷ್ಯಾದಿಂದ ಕಚ್ಚಾ ತೈಲ ಆಮದು ಮಾಡಿಕೊಳ್ಳುವುದರ ಕುರಿತ ಪ್ರಶ್ನೆಗೆ ಅವರು ಪ್ರತಿಕ್ರಿಯೆ ನೀಡಲು ನಿರಾಕರಿಸಿದ್ದಾರೆ.**

- **ಐಒಸಿ ದೇಶದ ಅತಿದೊಡ್ಡ ತೈಲ ಕಂಪನಿ**. ಏಪ್ರಿಲ್–ಸೆಪ್ಟೆಂಬರ್ ಅವಧಿಯಲ್ಲಿ ಐಒಸಿ ಆಮದು ಮಾಡಿಕೊಂಡ ಕಚ್ಚಾ ತೈಲದಲ್ಲಿ ರಷ್ಯಾದಿಂದ ಬಂದ ಕಚ್ಚಾ ತೈಲದ ಪಾಲು ಶೇ 21ರಷ್ಟಿದೆ.
- ಭಾರತದ ಕಚ್ಚಾ ತೈಲ ಸಂಸ್ಕರಣಾ ಕಂಪನಿಗಳು ಆಮದು ಮೂಲವನ್ನು ಹೆಚ್ಚಿಸಿಕೊಳ್ಳಲು ಸೆಪ್ಟೆಂಬರ್ ತ್ರೈಮಾಸಿಕದಲ್ಲಿ ಆರಂಭಿಸಿವೆ. ಅವು ಕೊಲಂಬಿಯಾ, ಕೆನಡಾ ಮತ್ತು ಪಶ್ಚಿಮ ಏಷ್ಯಾದಿಂದ ಆಮದು ಮಾಡಿಕೊಳ್ಳುವುದನ್ನು ಹೆಚ್ಚಿಸಿವೆ.
- ಭಾರತದ ಕಂಪನಿಗಳು ರಷ್ಯಾದಿಂದ ಆಮದು ಮಾಡಿಕೊಳ್ಳುವ ಕಚ್ಚಾ ತೈಲದ ಪ್ರಮಾಣವು ಸೆಪ್ಟೆಂಬರ್ ತ್ರೈಮಾಸಿಕದಲ್ಲಿ ಪ್ರತಿದಿನ 16.8 ಲಕ್ಷ ಬ್ಯಾರಲ್ ಆಗಿತ್ತು. ಇದು ಜೂನ್ ತ್ರೈಮಾಸಿಕದ ಆಮದು ಪ್ರಮಾಣಕ್ಕೆ ಹೋಲಿಸಿದರೆ ಶೇ 13ರಷ್ಟು ಕಡಿಮೆ.

### ❖ ಮಾಲಿಯಲ್ಲಿ ಇಂಧನ ಬಿಕ್ಕಟ್ಟು ಶಾಲೆ, ಕಾಲೇಜುಗಳು ಬಂದ್

**ಸಂದರ್ಭ: ಇಂಧನ ಆಮದಿನ ಮೇಲೆ ಜಿಹಾದಿ ಭಯೋತ್ಪಾದಕರು ಹೇರಿರುವ ನಿರ್ಬಂಧದಿಂದ ಪಶ್ಚಿಮ ಆಫ್ರಿಕಾದ ಮಾಲಿ ದೇಶದಲ್ಲಿ ಬಿಕ್ಕಟ್ಟು ಎದುರಾಗಿದೆ. ಹೀಗಾಗಿ ಮುಂದಿನ ಎರಡು ವಾರಗಳವರೆಗೆ ದೇಶದಾದ್ಯಂತ ಎಲ್ಲಾ ಶಾಲೆ ಹಾಗೂ ವಿಶ್ವವಿದ್ಯಾಲಯಗಳನ್ನು ಮುಚ್ಚುವುದಾಗಿ ಸರ್ಕಾರ ಘೋಷಿಸಿದೆ.**

- ಶಿಕ್ಷಣ ಸಚಿವ ಅಮಡೌ ಸೈ ಸವಾನೆ ಈ ಬಗ್ಗೆ ಮಾಹಿತಿ ನೀಡಿದ್ದು, 'ಇಂಧನ ಪೂರೈಕೆಯಲ್ಲಿನ ವ್ಯತ್ಯಯದಿಂದಾಗಿ ಶಾಲಾ–ಕಾಲೇಜುಗಳ ಸಿಬ್ಬಂದಿಯ ಸಂಚಾರಕ್ಕೂ ತೊಡಕಾಗುತ್ತಿದೆ. ಹೀಗಾಗಿ ಈ ನಿರ್ಧಾರ ಕೈಗೊಳ್ಳಲಾಗಿದೆ' ಎಂದಿದ್ದಾರೆ.
- ಅಲ್ಲದೇ, ನವೆಂಬರ್ 10ರಂದು ಶಾಲೆಗಳನ್ನು ಮತ್ತೆ ತೆರೆಯಲಾಗುವುದು. ಅಷ್ಟರೊಳಗೆ ಸಹಜ ಸ್ಥಿತಿಯನ್ನು ಮರುಸ್ಥಾಪಿಸಲು ಆಡಳಿತ ಎಲ್ಲಾ ರೀತಿಯ ಪ್ರಯತ್ನಗಳನ್ನು ಮಾಡುತ್ತಿದೆ ಎಂದೂ ಹೇಳಿದ್ದಾರೆ.
- ಅಲ್–ಖೈದಾ ಬೆಂಬಲಿತ ಜಮಾತ್ ನುಸ್ರತ್ ಅಲ್–ಇಸ್ಲಾಮ್ ವಲ್–ಮುಸ್ಲಿಮೀನ್ ಎಂಬ ಭಯೋತ್ಪಾದಕ ಸಂಘಟನೆಯು ಮಾಲಿಯ ಸುತ್ತ ಮುತ್ತಲಿನ ದೇಶಗಳಿಂದ ಇಂಧನ ಆಮದು ಮಾಡಿಕೊಳ್ಳದಂತೆ ಸೆಪ್ಟೆಂಬರ್‌ನಲ್ಲಿ ನಿರ್ಬಂಧ ಹೇರಿದೆ.
- ಇಂಧನ ಹೊತ್ತು ತರುವ ಟ್ಯಾಂಕರ್‌ಗಳನ್ನು ಗಡಿಯಲ್ಲೇ ತಡೆದು, ಅವುಗಳ ಮೇಲೆ ದಾಳಿ ನಡೆಸಿ, ಇಂಧನ ಪೂರೈಕೆಗೆ ಭಯೋತ್ಪಾದಕರು ತಡೆ ಒಡ್ಡಿದ್ದಾರೆ. ಇದು ಮಾಲಿಯಲ್ಲಿ ಆರ್ಥಿಕ, ಸಾಮಾಜಿಕ ಬಿಕ್ಕಟ್ಟಿಗೆ ಕಾರಣವಾಗಿದೆ.

### ❖ ಇರಾಕ್, ಇರಾನ್‌ಗೆ ಬಸರಕೋಡದ ಬಾಳೆ

**ಸಂದರ್ಭ: ಅತಿವೃಷ್ಟಿ ಸಮಯದಲ್ಲೂ ಲಾಭ ಕಂಡುಕೊಂಡ ರೈತ: ತಾಲ್ಲೂಕಿನ ಬಸರಕೋಡ ಗ್ರಾಮದ ರೈತ ಹೇಮರೆಡ್ಡಿ ಬ.ಮೇಟಿ ಅವರು ಬೆಳೆದ ಬಾಳೆ (ಜಿ– 9) ಬೆಳೆಗೆ ಹೊರದೇಶದಲ್ಲಿ ಮಾರುಕಟ್ಟೆ ಲಭಿಸಿದೆ.**

- ರೈತ ಹೇಮರೆಡ್ಡಿ ಬ.ಮೇಟಿ ಬಾಳೆಯನ್ನು ಇರಾಕ್, ಇರಾನ್ ದೇಶಗಳಿಗೆ ರಫ್ತು ಮಾಡಲು ಮುಂದಾಗಿದ್ದಾರೆ. 20 ಎಕರೆ ಜಮೀನಿನಲ್ಲಿ ಬೆಳೆದಿರುವ ಬಾಳೆ ಭಾಗಶಃ ಕಟಾವಿಗೆ ಬಂದಿದೆ. ಅವರ ಪುತ್ರ ಬಾಪುಗೌಡ ಮೇಟಿ ವಿದೇಶಿ ಮಾರುಕಟ್ಟೆಯ ಸಂಪರ್ಕ ಸಾಧಿಸಿದ್ದಾರೆ.

- 'ಮಧ್ಯಪ್ರದೇಶ, ಗುಜರಾತ್‌ದಿಂದ ಸಸಿಗಳನ್ನು ತರಿಸಿಕೊಂಡಿದ್ದೆವು. ಸ್ಥಳೀಯ ಮಾರುಕಟ್ಟೆಯಲ್ಲಿ ಕೆ.ಜಿಗೆ ₹3ರಿಂದ ₹4ಕ್ಕೆ ಕೇಳುತ್ತಾರೆ. ಇಷ್ಟು ಕಡಿಮೆಗೆ ನೀಡಿದರೆ ನಷ್ಟ ಖಂಡಿತ. ಎಕರೆಗೆ ತಲಾ ₹1.15 ಲಕ್ಷದಂತೆ ಖರ್ಚು ಮಾಡಿದ್ದು, 20 ಎಕರೆಗೆ 1 ಸಾವಿರ ಟನ್ ಬಾಳೆ ಬರುವ ನಿರೀಕ್ಷೆ ಇದೆ' ಎಂದು ಹೇಮರೆಡ್ಡಿ ಮೇಟಿ ತಿಳಿಸಿದರು.
- 'ಅಂತರರಾಷ್ಟ್ರೀಯ ಮಾರುಕಟ್ಟೆಗೆ ಬೆಳೆ ತಲುಪಿಸಲು ಮೀರಜ್‌ನ ಚಾಂದ್ ಫ್ರೂಟ್ಸ್ ಅವರನ್ನು ಸಂಪರ್ಕಿಸಲಾಗಿತ್ತು. ಅವರು ಖರೀದಿಗೆ ಒಪ್ಪಿದರು. ಕಂಟೇನರ್‌ಗಳಲ್ಲಿ ಬಾಳೆ ಕಾಯಿಗಳನ್ನು ಸಂಗ್ರಹಿಸಿ ಹಡಗುಗಳ ಮೂಲಕ ಇರಾಕ್, ಇರಾನ್‌ಗೆ ಕಳುಹಿಸು ತ್ತಿದ್ದೇವೆ. ಕೆ.ಜಿಗೆ ₹13ರಂತೆ ಈವರೆಗೆ 35 ಟನ್ ಬಾಳೆಕಾಯಿ ಕಳುಹಿಸಲಾಗಿದೆ' ಎಂದು ತಿಳಿಸಿದರು.
- ಪಶ್ಚಿಮ ಬಂಗಾಳದ ಕಾರ್ಮಿಕರು: ಬಾಳೆ ಗೊನೆಯನ್ನು ಕತ್ತರಿಸಿ, ಅದು ಕೆಡದಂತೆ ವೈಜ್ಞಾನಿಕ ಕ್ರಮದಲ್ಲಿ ಪ್ಯಾಕಿಂಗ್ ಮಾಡಲು ಪಶ್ಚಿಮ ಬಂಗಾಳದ 25 ಕಾರ್ಮಿಕರು ನಾಲ್ಕು ದಿನಗಳಿಂದ ಕೆಲಸ ಮಾಡುತ್ತಿದ್ದಾರೆ ಎಂದು ತಿಳಿಸಿದರು.
- 'ಗ್ರಾಮದ ರೈತರೊಬ್ಬರು ಬೆಳೆದಿರುವ ಬಾಳೆ ಅನ್ಯ ದೇಶಕ್ಕೆ ಹೋಗುತ್ತಿದೆ. ನಮ್ಮಲ್ಲೂ ಉತ್ಕೃಷ್ಟ ದರ್ಜೆಯ ಬಾಳೆ ಕೃಷಿ ನಡೆದಿರುವುದು ಹೆಮ್ಮೆಯ ಸಂಗತಿ' ಎಂದು ಸ್ಥಳೀಯ ರೈತರು ಹೇಳುತ್ತಾರೆ.

### ***ಗುಣಮಟ್ಟದ ಬಾಳೆ***

- 'ದೇವರ ನಿಂಬರಗಿಯ ಯಂಕಣ್ಣ ಬಿರಾದಾರ ಅವರು ಬಸರಕೋಡದಲ್ಲಿ ಗುಣಮಟ್ಟದ ಬಾಳೆ ಇದೆ ಎಂದು ತಿಳಿಸಿದ್ದರು. ಹೇಮರೆಡ್ಡಿ ಅವರು ಬೆಳೆದ ಬಾಳೆ ರಫ್ತು ಮಾಡಲು ಯೋಗ್ಯ ವಾಗಿದೆ. ಖರೀದಿ ಒಪ್ಪಂದ ಆಗಿದೆ. ಈ ಬಾಳೆಯು ನ. 1ರಂದು ಗುಣಮಟ್ಟದ ಪ್ಯಾಕಿಂಗ್‌ನಲ್ಲಿ ಇರಾನ್, ಇರಾಕ್, ಸೌದಿ ಅರೇಬಿಯಾಕ್ಕೆ ರವಾನೆಯಾಗ ಲಿದೆ' ಎನ್ನುತ್ತಾರೆ ಬಾಳೆ ಖರೀದಿ ದಾರ ಅಬೂಬಕರ ಖರೋಷಿ.

## ❖ ಎಫ್‌ಡಿಐ ಏರಿಕೆ: ಜಿಗಿದ ಪಿಎಸ್‌ಯು ಬ್ಯಾಂಕ್ ಸೂಚ್ಯಂಕ

**ಸಂದರ್ಭ: ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳಲ್ಲಿ ವಿದೇಶಿ ನೇರ ಹೂಡಿಕೆಗೆ (ಎಫ್‌ಡಿಐ) ಇರುವ ಶೇಕಡ 20ರ ಮಿತಿಯನ್ನು, ಶೇ 49ಕ್ಕೆ ಹೆಚ್ಚಿಸುವ ಚಿಂತನೆ ನಡೆದಿದೆ ಎಂಬ ಸುದ್ದಿಯು ಬಿತ್ತರವಾದ ನಂತರದಲ್ಲಿ ಬ್ಯಾಂಕಿಂಗ್ ವಲಯದ 'ನಿಫ್ಟಿ ಪಿಎಸ್‌ಯು ಬ್ಯಾಂಕ್' ಸೂಚ್ಯಂಕವು ಶೇಕಡ 3ರವರೆಗೆ ಜಿಗಿದಿದೆ.**

- ಸರ್ಕಾರಿ ಬ್ಯಾಂಕ್‌ಗಳಲ್ಲಿ ಎಫ್‌ಡಿಐ ಹೆಚ್ಚಳವು, ನಿಯಮಗಳ ವಿಚಾರದಲ್ಲಿ ಸರ್ಕಾರಿ ಹಾಗೂ ಖಾಸಗಿ ಬ್ಯಾಂಕ್‌ಗಳ ನಡುವಿನ ಅಂತರವನ್ನು ತಗ್ಗಿಸುವ ಪ್ರಯತ್ನದ ಭಾಗವೂ ಆಗಿದೆ ಎಂದು ಮೂಲಗಳು ಹೇಳಿವೆ. ಖಾಸಗಿ ವಲಯದ ಬ್ಯಾಂಕ್‌ಗಳಲ್ಲಿ ಶೇ 74ರಷ್ಟು ಎಫ್‌ಡಿಐಗೆ ಅವಕಾಶ ಇದೆ.
- ಈ ವಿಚಾರವಾಗಿ ಆರ್‌ಬಿಐ ಹಾಗೂ ಹಣಕಾಸು ಸಚಿವಾಲಯದಿಂದ ಪ್ರತಿಕ್ರಿಯೆ ಲಭ್ಯವಾಗಿಲ್ಲ.
- ದೇಶದ ಆರ್ಥಿಕ ಬೆಳವಣಿಗೆ ದರವು ಕಳೆದ ಮೂರು ವರ್ಷಗಳಿಂದ ಸರಾಸರಿ ಶೇ 8ರಷ್ಟಿದೆ. ಇದರಿಂದಾಗಿ ಸಾಲಕ್ಕೆ ಬೇಡಿಕೆ ಹೆಚ್ಚಾಗಿದೆ, ದೇಶದ ಬ್ಯಾಂಕ್‌ಗಳು ಹೂಡಿಕೆಗೆ ಆಕರ್ಷಕವಾಗುತ್ತಿವೆ.
- ದೇಶದಲ್ಲಿ 12 ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳಿವೆ. ಈ ಬ್ಯಾಂಕ್‌ಗಳಲ್ಲಿ ಕನಿಷ್ಠ ಶೇ 51ರಷ್ಟು ಪಾಲನ್ನು ಉಳಿಸಿಕೊಳ್ಳುವ ಉದ್ದೇಶವನ್ನು ಸರ್ಕಾರ ಹೊಂದಿದೆ. ಈಗ ದೇಶದ ಸರ್ಕಾರಿ ಬ್ಯಾಂಕ್‌ಗಳಲ್ಲಿ ಎಫ್‌ಡಿಐ ಪ್ರಮಾಣವು ಒಂದೊಂದು ಬ್ಯಾಂಕ್‌ನಲ್ಲಿ ಒಂದೊಂದು ಮಟ್ಟದಲ್ಲಿದೆ. ಕೆನರಾ ಬ್ಯಾಂಕ್‌ನಲ್ಲಿ ಅದು ಶೇ 12ರಷ್ಟಿದೆ.
- ಸಮಾಜದ ದುರ್ಬಲ ವರ್ಗಗಳಿಗೂ ಸಾಲ ನೀಡುವ ಹೊಣೆಯು ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳ ಮೇಲೆ ಇರುವ ಕಾರಣ ಹೂಡಿಕೆಯ ದೃಷ್ಟಿಯಿಂದ ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳು ಖಾಸಗಿ ವಲಯದ ಬ್ಯಾಂಕ್‌ಗಳಷ್ಟು ಬಲಿಷ್ಠವಲ್ಲ ಎಂಬ ನಂಬಿಕೆ ಇದೆ.

Dr. RAJKUMAR IAS/KAS Academy

## ❖ ವಿಶ್ವ ಕುಸ್ತಿ: ಸ್ವರ್ಣ ಜಯಿಸಿದ ಸುಜೀತ್

**ಸಂದರ್ಭ: ಭಾರತದ ಉದಯೋನ್ಮುಖ ಕುಸ್ತಿಪಟು ಸುಜೀತ್ ಕಲ್ಕಲ್ ಅವರು 23 ವರ್ಷದೊಳಗಿನವರ ವಿಶ್ವ ಕುಸ್ತಿ ಚಾಂಪಿಯನ್‌ಷಿಪ್‌ನಲ್ಲಿ ಚಿನ್ನದ ಪದಕ ಜಯಿಸಿದರು.**



- ಪುರುಷರ 65 ಕೆ.ಜಿ. ಫ್ರೀಸ್ಟೈಲ್ ವಿಭಾಗದಲ್ಲಿ ಕಣಕ್ಕಿಳಿದಿರುವ ಸುಜೀತ್ ಅವರು ಸೋಮವಾರ ನಡೆದ ಫೈನಲ್ ಹಣಾಹಣಿಯಲ್ಲಿ 10–0ಯಿಂದ ಉಜ್ಬೇಕಿಸ್ತಾನದ ಉಮಿಜೊನ್ ಜಲಲೊವ್ ಅವರನ್ನು ಅಧಿಕಾರಯುತವಾಗಿ ಮಣಿಸಿದರು. 22 ವರ್ಷ ವಯಸ್ಸಿನ ಸುಜೀತ್ ಕಳೆದ ಬಾರಿ ಈ ಟೂರ್ನಿಯಲ್ಲಿ ಕಂಚಿನ ಪದಕ ಜಯಿಸಿದ್ದರು.

IAS/KAS Academy



## ❖ ಸರ್ಕಾರದ ನಡೆಗೆ ಕೋರ್ಟ್ ಅಂಕುಶ

**ಸಂದರ್ಭ: ಸರ್ಕಾರಿ ಸ್ಥಳಗಳಲ್ಲಿ 10ಕ್ಕೂ ಹೆಚ್ಚು ಜನರ ಜಮಾವಣೆಗೆ ಪೂರ್ವಾನುಮತಿ ಕಡ್ಡಾಯ ನಿಯಮ: ಸರ್ಕಾರದ ಆದೇಶವು ಸಂವಿಧಾನದ ಅಧ್ಯಾಯ IIIರಲ್ಲಿ ಪ್ರತಿಪಾದಿಸಲಾದ ಹಕ್ಕುಗಳನ್ನು, ಅದರಲ್ಲೂ ನಿರ್ದಿಷ್ಟವಾಗಿ 19(1)(ಎ) ಮತ್ತು (ಬಿ) ಅಡಿಯಲ್ಲಿ ಕೊಡಮಾಡಲಾಗಿರುವ ಸ್ವಾತಂತ್ರ್ಯಗಳನ್ನು ಉಲ್ಲಂಘಿಸುತ್ತದೆಎಂ.ನಾಗಪ್ರಸನ್ನ, ನ್ಯಾಯಮೂರ್ತಿ.**

- ‘ಖಾಸಗಿ ಸಂಘ ಸಂಸ್ಥೆಗಳು, ಸಂಘಟನೆ ಗಳು ಸರ್ಕಾರದ ಸ್ಥಳ, ಆವರಣ ಹಾಗೂ ಸಾರ್ವಜನಿಕ ಆಸ್ತಿಗಳನ್ನು ಬಳಸುವ ಮುನ್ನ ಕಡ್ಡಾಯವಾಗಿ ಪೂರ್ವಾನುಮತಿ ಪಡೆಯಬೇಕು’ ಎಂಬ ರಾಜ್ಯ ಸರ್ಕಾರದ ಆದೇಶ ಅನುಷ್ಠಾನಕ್ಕೆ ಹೈಕೋರ್ಟ್ ತಡೆ ನೀಡಿದೆ.
- ರಾಜ್ಯ ಸಚಿವ ಸಂಪುಟದ ಈ ನಿರ್ಣಯವನ್ನು ಪ್ರಶ್ನಿಸಿ ಹುಬ್ಬಳ್ಳಿಯ, ‘ಪುನಶ್ಚೇತನ ಸೇವಾ ಸಂಸ್ಥೆ’ ಅಧ್ಯಕ್ಷ ವಿನಾಯಕ ಮತ್ತು ‘ವಿ ಕೇರ್ ಫೌಂಡೇಶನ್’ ಅಧ್ಯಕ್ಷ ಗಂಗಾಧರಯ್ಯ, ಧಾರವಾಡದ ರಾಜೀವ ಮಲ್ಹಾರ ಕುಲಕರ್ಣಿ ಹಾಗೂ ಬೆಳಗಾವಿಯ ಉಮಾ ಸತ್ಯಜಿತ್ ಚವಾಣ್ ಸಲ್ಲಿಸಿದ್ದ ರಿಟ್ ಅರ್ಜಿಯನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ (ಧಾರವಾಡ) ಈ ಕುರಿತಂತೆ ಆದೇಶಿಸಿದೆ.
- ಅರ್ಜಿದಾರರ ಪರ ಹಿರಿಯ ವಕೀಲ ಅಶೋಕ ಹಾರನಹಳ್ಳಿ ಅವರ ವಾದ ಆಲಿಸಿದ ನ್ಯಾಯಪೀಠ, ‘ಸರ್ಕಾರದ ಈ ಆದೇಶವು ಸಂವಿಧಾನದ 13(2)ನೇ ವಿಧಿಯ ಸ್ಪಷ್ಟ ಉಲ್ಲಂಘನೆಯಾಗಿದೆ. ಹಾಗಾಗಿ, ಈ ಆಕ್ಷೇಪಾರ್ಹ ಆದೇಶದ ಕಾರ್ಯಾಚರಣೆ ಮತ್ತು ಅದರಿಂದ ಈಗಾಗಲೇ ಹೊರಹೊಮ್ಮಿರುವ ಎಲ್ಲಾ ಪರಿಣಾಮಗಳ ಪ್ರಕ್ರಿಯೆಗಳನ್ನು ಮುಂದಿನ ವಿಚಾರಣೆ ಯವರೆಗೆ ತಡೆಹಿಡಿಯುವುದು ಸೂಕ್ತವೆಂದು ಪರಿಗಣಿಸಿ ಈ ಆದೇಶ ನೀಡಲಾಗುತ್ತಿದೆ’ ಎಂದು ಸ್ಪಷ್ಟಪಡಿಸಿತು.
- ‘ಆಕ್ಷೇಪಾರ್ಹ ಆದೇಶವು ಸಂವಿಧಾನದ 13(2)ನೇ ವಿಧಿಗೆ ವಿರುದ್ಧವಾಗಿದೆ ಮತ್ತು ಈ ಮೂಲಕ 19(1)(ಎ) ಮತ್ತು (ಬಿ) ವಿಧಿಯ ಅಡಿಯಲ್ಲಿ ಪ್ರತಿಯೊಬ್ಬ ನಾಗರಿಕರಿಗೆ ಕೊಡಮಾಡಲಾಗಿರುವ ಮೂಲಭೂತ ಹಕ್ಕನ್ನು ಕಸಿದುಕೊಳ್ಳುತ್ತದೆ. ಮೂಲಭೂತ ಹಕ್ಕುಗಳನ್ನು ಕಾರ್ಯಕಾರಿ ಆದೇಶಗಳಿಂದ ಮೊಟಕುಗೊಳಿಸಲು ಸಾಧ್ಯವಿಲ್ಲ’ ಎಂದು ನ್ಯಾಯಪೀಠ ಆದೇಶದಲ್ಲಿ ವಿವರಿಸಿದೆ.
- ‘ಸಾರ್ವಜನಿಕ ಸಭೆಗಳು ಮತ್ತು ಮೆರವಣಿಗೆಗಳನ್ನು ನಿಯಂತ್ರಿಸುವ ಬಗ್ಗೆ, ಕರ್ನಾಟಕ ಪೊಲೀಸ್ ಕಾಯ್ದೆ–1963ರ ಕಲಂ 31ರಲ್ಲಿ ಈಗಾಗಲೇ ವಿಶೇಷವಾಗಿ ವಿವರಿಸಲಾಗಿದೆ. ಇಂತಹ ಸಂದರ್ಭಗಳ ನಿಯಂತ್ರಣದ ಬಗ್ಗೆ ಕಲಂ 31ರ ಉಪ ವಿಭಾಗ (6)ರಲ್ಲಿ ಏನೆಲ್ಲಾ ವಿಧಾನಗಳನ್ನು ಅನುಸರಿಸ ಬೇಕೆಂಬುದನ್ನು ನಿಖರವಾಗಿ ಸೂಚಿಸಲಾಗಿದೆ. ಇಂತಹುದೊಂದು ಶಾಸನಬದ್ಧ ಕಲಂ ಅಸ್ತಿತ್ವದಲ್ಲಿ ಇರುವಾಗ ಸರ್ಕಾರದ ಹೊಸ ಆದೇಶ ಸಂವಿಧಾನ ವಿರೋಧಿ’ ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ.
- **ನೋಟಿಸ್:** ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ಗೃಹ ಇಲಾಖೆ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ ಕಾರ್ಯದರ್ಶಿ, ಡಿಜಿ-ಐಜಿಪಿ ಹಾಗೂ ಹುಬ್ಬಳ್ಳಿ-ಧಾರವಾಡ ಪೊಲೀಸ್ ಕಮಿಶನರ್ ಸೇರಿದಂತೆ ಪ್ರಕರಣದ ಎಲ್ಲ ಪ್ರತಿವಾದಿಗಳಿಗೆ ನೋಟಿಸ್ ಜಾರಿಗೊಳಿಸಲು ಆದೇಶಿಸಿದ ನ್ಯಾಯಪೀಠ, ವಿಚಾರಣೆಯನ್ನು ನವೆಂಬರ್ 17ರ ಮಧ್ಯಾಹ್ನ 2:30ಕ್ಕೆ ನಿಗದಿ ಮಾಡಿದೆ. ಅರ್ಜಿದಾರರ ಪರ ಹೈಕೋರ್ಟ್ ವಕೀಲ ಮಲ್ಲಿಕಾರ್ಜುನ ಹಿರೇಮಠ ವಕಾಲತ್ತು ವಹಿಸಿದ್ದಾರೆ.

Dr. Rajkumar IAS/KAS Academy

**ಅಶೋಕ ಹಾರನಹಳ್ಳಿ ವಾದಾಂಶ**

- । ಕರ್ನಾಟಕ ರಾಜ್ಯದಾದ್ಯಂತ ನಾಗರಿಕ ಮತ್ತು ಸಾಂಸ್ಕೃತಿಕ ಸಂಘಟನೆಗಳು, ನಡಿಗೆದಾರರ ಸಂಘಗಳು, ಯೋಗ ಕ್ಲಬ್‌ಗಳು ಮತ್ತು ಓಟಗಾರರ ಗುಂಪುಗಳು, ಸಾರ್ವಜನಿಕ ಸ್ಥಳಗಳಲ್ಲಿ ತಮ್ಮ ನಿಯಮಿತ ಚಟುವಟಿಕೆಗಳನ್ನು ನಡೆಸಿಕೊಂಡು ಬರುತ್ತಿವೆ. ಆದರೆ, ಸರ್ಕಾರ ಹೊರಡಿಸಿರುವ ಆದೇಶದ ಅನುಸಾರ ಪೂರ್ವಾನುಮತಿ ಕೊರತೆಯಿಂದಾಗಿ ಕ್ರಿಮಿನಲ್ ಕ್ರಮಕ್ಕೆ ಗುರಿಯಾಗಬಹುದು.
- ।ಯಾವುದೇ ವ್ಯಕ್ತಿ ಅಥವಾ ವ್ಯಕ್ತಿಗಳಿಂದ ಕೂಡಿದ ಸಂಘ, ಸಂಸ್ಥೆಗಳು, ಅಥವಾ ವ್ಯಕ್ತಿಗಳ ಗುಂಪು ಅಥವಾ ಅವರ ಪರವಾಗಿ ಯಾವುದೇ ಇತರ ವ್ಯಕ್ತಿಯ ಸಂಸ್ಥೆಯು ಈ ಸರ್ಕಾರಿ ಆದೇಶವನ್ನು ಉಲ್ಲಂಘಿಸಿ ಸರ್ಕಾರಿ ಆಸ್ತಿಗಳಲ್ಲಿ ಯಾವುದೇ ಕಾರ್ಯಕ್ರಮ ಅಥವಾ ಮೆರವಣಿಗೆಯನ್ನು ನಡೆಸಿದರೆ, ಅಂತಹುದನ್ನು ಕಾನೂನುಬಾಹಿರ ಎಂದು ಪರಿಗಣಿಸಲಾಗುತ್ತದೆ ಮತ್ತು ಭಾರತೀಯ ನ್ಯಾಯ ಸಂಹಿತೆ–2023ರ (ಬಿಎನ್ ಎಸ್) ಕಲಂಗಳ ಪ್ರಕಾರ ಸಭೆ ಸೇರುವುದನ್ನು ಕಾನೂನುಬಾಹಿರ ಸಭೆ ಎಂದು ಪರಿಗಣಿಸಲಾಗುತ್ತದೆ.
- । ಸರ್ಕಾರಿ ಆಸ್ತಿ ಎಂದರೆ: ಸ್ಥಳೀಯ ಪ್ರಾಧಿಕಾರ ಅಥವಾ ಇಲಾಖೆ, ಮಂಡಳಿಗಳು, ಬೆಳೆಗಾರರ ಒಡೆತನದಲ್ಲಿರುವ ಮತ್ತು ನಿರ್ವಹಿಸುವ ಯಾವುದೇ ಭೂಮಿ, ಕಟ್ಟಡ, ರಚನೆ, ರಸ್ತೆ, ಉದ್ಯಾನವನ, ಆಟದ ಮೈದಾನ, ಜಲಮೂಲ ಅಥವಾ ಕರ್ನಾಟಕ ಸರ್ಕಾರದ ನಿಯಂತ್ರಣದಲ್ಲಿರುವ ಅಥವಾ ನಿಹಿತವಾಗಿರುವ, ವಹಿಸಲಾಗಿರುವ ಅಥವಾ ನಿರ್ವಹಿಸುವ ಯಾವುದೇ ಇತರ ಸ್ಥಿರ ಆಸ್ತಿ.

**ಅರ್ಜಿದಾರರ ಪ್ರಶ್ನೆಯ ಮುಖ್ಯಾಂಶಗಳು**

- ।16.10.2025: ಖಾಸಗಿ ಸಂಸ್ಥೆಗಳು ಸಾರ್ವಜನಿಕ ಸ್ಥಳಗಳನ್ನು ದುರುಪಯೋಗ ಮಾಡಿಕೊಳ್ಳುವುದನ್ನು ತಡೆಗಟ್ಟುವ ಸಲುವಾಗಿ 'ಪರಿಹಾರ ಮತ್ತು ನಿಯಂತ್ರಣ'ಕ್ಕಾಗಿ ಸಂಪುಟ ಸಭೆ ಕೈಗೊಂಡ ನಿರ್ಧಾರ
- । ಇದಕ್ಕೆ ಅನುಗುಣವಾಗಿ 18.10.2025ರಂದು ರಾಜ್ಯ ಗೃಹ ಇಲಾಖೆಯ ಕಾರ್ಯದರ್ಶಿ ಹೊರಡಿಸಿದ ಆದೇಶ.
- ।19.10.2025 ಮತ್ತು 20.10.2025ರಂದು ಕೆಲವು ಸಚಿವರು ಮಾಧ್ಯಮಗಳೊಂದಿಗೆ ಮಾತನಾಡುತ್ತಾ ಸಂಪುಟದ ನಿರ್ಧಾರವನ್ನು ಸಮರ್ಥಿಸಿಕೊಂಡರು
- ।ಅದರಲ್ಲೂ ಐ.ಟಿ–ಬಿ.ಟಿ ಸಚಿವ ಪ್ರಿಯಾಂಕ್ ಖರ್ಗೆ ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್ ) ಶಾಖೆಗಳಿಗೆ ಮತ್ತು ಖಾಸಗಿ ಸಂಸ್ಥೆಗಳಿಗೆ ಸರ್ಕಾರದ ಜಾಗ ಬಳಸಲು ಅನುಮತಿ ನೀಡಲಾಗುವುದಿಲ್ಲ ಎಂದು ಉಚ್ಚರಿಸಿದರು. ಈ ಮಾತುಗಳಲ್ಲಿ ಅವರು ಯಾರನ್ನು ಉದ್ದೇಶಿಸಿ ಈ ನಿರ್ಧಾರ ಕೈಗೊಂಡರು ಎಂಬುದು ಸ್ಪಷ್ಟವಾಗಿದೆ
- **।ಕೋರಿಕೆ ಏನು?: ಸರ್ಕಾರಿ ಸ್ಥಳಗಳಲ್ಲಿ ಅನುಮತಿಯಿಲ್ಲದ ಮೆರವಣಿಗೆ, ಸಭೆ ನಡೆಸುವುದನ್ನು ನಿರ್ಬಂಧಿಸಿ ಸರ್ಕಾರ ಇದೇ 18ರಂದು ಹೊರಡಿಸಿರುವ ಆದೇಶವು ಸಂವಿಧಾನದ 13, 14 ಮತ್ತು 19ನೇ ವಿಧಿಗಳ ಸ್ಪಷ್ಟ ಉಲ್ಲಂಘನೆಯಾಗಿದೆ. ಆದ್ದರಿಂದ, ಈ ಆದೇಶವನ್ನು ರದ್ದುಗೊಳಿಸಬೇಕು**

**ಸರ್ಕಾರಿ ಸ್ಥಳದಲ್ಲಿ ಜನ ಜಮಾವಣೆ ಸ್ವರೂಪ**

- ।'ಮೆರವಣಿಗೆ ಅಥವಾ ರ್‌ಯಾಲಿ' ಎಂದರೆ ಮದುವೆ ಮತ್ತು ಅಂತ್ಯಕ್ರಿಯೆ ಸಭೆಗಳು ಮತ್ತು ಚಳವಳಿಗಳನ್ನು ಹೊರತುಪಡಿಸಿ, ಸಂಗೀತ ಅಥವಾ ಇತರ ರೀತಿಯಲ್ಲಿ, ಸರ್ಕಾರಿ ಆಸ್ತಿಯ ಮೂಲಕ ಹಾದುಹೋಗುವ ಸಾಮಾನ್ಯ ಚಳವಳಿ ಅಥವಾ ಮಾರ್ಗ ಮೆರವಣಿಗೆಯನ್ನು ನಡೆಸಲು ಸಾಮಾನ್ಯ ಉದ್ದೇಶ ಹೊಂದಿರುವ ಅಥವಾ ಯಾವುದೇ ಇತರ ಚಟುವಟಿಕೆಯೊಂದಿಗೆ ಯಾವುದೇ ಹೆಸರಿನಿಂದ ಕರೆಯಲಾಗುವ 10ಕ್ಕೂ ಹೆಚ್ಚು ಜನರ ಸಭೆ.
- ।ಪೂರ್ವಾನುಮತಿ ಇಲ್ಲದೆ 10ಕ್ಕೂ ಹೆಚ್ಚು ವ್ಯಕ್ತಿಗಳು ಸಭೆ ಸೇರುವುದನ್ನು ಸರ್ಕಾರದ ಹೊಸ ಆದೇಶ ನಿಷೇಧಿಸುತ್ತದೆ. ಅಂತಹ ಸಭೆಯನ್ನು ಕಾನೂನುಬಾಹಿರ ಸಭೆ ಎಂದು ಘೋಷಿಸುತ್ತದೆ. ಇದರಿಂದಾಗಿ ಈ ರೀತಿ ಸಭೆಯಲ್ಲಿ ಭಾಗವಹಿಸು ವವರು ಬಿಎನ್‌ಎಸ್ ಕಾಯ್ದೆಯ ಅಡಿಯಲ್ಲಿ ದಂಡದ ಪರಿಣಾಮಗಳಿಗೆ ಗುರಿಯಾಗುತ್ತಾರೆ. ಅನುಮತಿ ಉಲ್ಲಂಘಿಸಿ ನಡೆಸುವ ಅಪರಾಧಗಳನ್ನು ತಡೆಗಟ್ಟಲು ಅಥವಾ ವಿಚಾರಣೆಗೆ ಒಳಪಡಿಸಲು ನ್ಯಾಯವ್ಯಾಪ್ತಿಯ ಅನುಸಾರ ಆದೇಶವು ಪೊಲೀಸರಿಗೆ ಅಧಿಕಾರ ನೀಡಲಾಗಿದೆ.

Dr. Rajkumar IAS/KAS Academy

## ❖ 8ನೇ ವೇತನ ಆಯೋಗ: ಸಂಪುಟ ಒಪ್ಪಿಗೆ : 2026ರ ಜನವರಿ 1ರಿಂದ ಜಾರಿ ಸಾಧ್ಯತೆ

**ಸಂದರ್ಭ: 8ನೇ ವೇತನ ಆಯೋಗದ ಶಿಫಾರಸು ಜಾರಿಯು ಮಧ್ಯಂತರ ವರದಿ ಬಂದ ನಂತರ ಖಚಿತವಾಗುತ್ತದೆ. ಆದರೂ, ಇದು 2026ರ ಜ.1ರಿಂದಲೇ ಜಾರಿಗೆ ಬರಬಹುದುಅಶ್ವಿನಿ ವೈಷ್ಣವ್, ಕೇಂದ್ರ ಸಚಿವ 8ನೇ ವೇತನ ಆಯೋಗ ರಚನೆಯ ನಿಯಮ ಮತ್ತು ನಿಬಂಧನೆಗಳಿಗೆ (ಟಿಒಆರ್) ಕೇಂದ್ರ ಸಚಿವ ಸಂಪುಟವು ಮಂಗಳವಾರ ಅನುಮೋದನೆ ನೀಡಿದೆ.**

- ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ರಂಜನಾ ಪ್ರಕಾಶ್ ದೇಸಾಯಿ ಅಧ್ಯಕ್ಷತೆಯಲ್ಲಿ 8ನೇ ವೇತನ ಆಯೋಗ ರಚಿಸಲಾಗಿದೆ. ಆಯೋಗಕ್ಕೆ ತಾತ್ವಿಕ ಒಪ್ಪಿಗೆ ಲಭಿಸಿ ಒಂಬತ್ತು ತಿಂಗಳಾದ ಬಳಿಕ, ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿನ ಕೇಂದ್ರ ಸಚಿವ ಸಂಪುಟ 'ಟಿಒಆರ್‌ಗೆ' ಅನುಮೋದನೆ ನೀಡಿದೆ.
- ಮುಂದಿನ ತಿಂಗಳು ನಡೆಯಲಿರುವ ಬಿಹಾರ ವಿಧಾನಸಭೆ ಚುನಾವಣೆಗೆ ಮುನ್ನ ಸಚಿವ ಸಂಪುಟ ಈ ನಿರ್ಧಾರ ಕೈಗೊಂಡಿದೆ.
- ಆಯೋಗ ರಚನೆಯಾದ ದಿನದಿಂದ 18 ತಿಂಗಳ ಒಳಗಾಗಿ ಅಂತಿಮ ವರದಿ ಸಲ್ಲಿಸಬೇಕಿದೆ. ಆಯೋಗದ ಶಿಫಾರಸುಗಳು 2026ರ ಜನವರಿ 1ರಿಂದಲೇ ಪೂರ್ವಾನ್ವಯವಾಗುವಂತೆ ಜಾರಿಯಾಗುವ ಸಾಧ್ಯತೆ ಇದೆ.
- 'ಕೇಂದ್ರ ಸರ್ಕಾರದ ಸುಮಾರು 50 ಲಕ್ಷದಷ್ಟು ನೌಕರರಿಗೆ, 69 ಲಕ್ಷದಷ್ಟು ಪಿಂಚಣಿದಾರರಿಗೆ 8ನೇ ವೇತನ ಆಯೋಗದ ಶಿಫಾರಸಿನ ಪ್ರಯೋಜನ ಗಳು ದೊರೆಯಲಿವೆ. ಆಯೋಗವು ಕೇಂದ್ರ ಸರ್ಕಾರ ಮತ್ತು ಖಾಸಗಿ ವಲಯದ ನೌಕರರಿಗೆ ಈಗಿರುವ ವೇತನ, ಭತ್ಯೆ ಮತ್ತಿತರೆ ಸೌಲಭ್ಯಗಳು ಹಾಗೂ ದೇಶದ ಆರ್ಥಿಕ ಪರಿಸ್ಥಿತಿ ಮತ್ತು ಅಭಿವೃದ್ಧಿ ಕಾರ್ಯಗಳಿಗೆ ಲಭ್ಯ ಇರುವ ಸಂಪನ್ಮೂಲಗಳನ್ನು ಗಮನಕ್ಕೆ ತೆಗೆದುಕೊಳ್ಳಲಿದೆ. ಈ ಎಲ್ಲ ಅಂಶಗಳನ್ನು ಪರಿಶೀಲಿಸಿ, ಅಗತ್ಯ ಬದಲಾವಣೆಗಳನ್ನು ಶಿಫಾರಸು ಮಾಡಲಿದೆ.
- 8ನೇ ವೇತನ ಆಯೋಗದಲ್ಲಿ ಬೆಂಗಳೂರಿನ ಐಐಎಂನ ಪ್ರೊ. ಪುಲಕ್ ಘೋಷ್ ಅರೆಕಾಲಿಕ ಸದಸ್ಯರಾಗಿ ಹಾಗೂ ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಕಾರ್ಯದರ್ಶಿ ಪಂಕಜ್ ಜೈನ್ ಅವರು ಸದಸ್ಯ ಕಾರ್ಯದರ್ಶಿಯಾಗಿಯೂ ಕಾರ್ಯನಿರ್ವಹಿಸಲಿದ್ದಾರೆ.
- ರಂಜನಾ ಪ್ರಕಾಶ್ ದೇಸಾಯಿ ಅವರು ಭಾರತೀಯ ಪತ್ರಿಕಾ ಮಂಡಳಿಯ ಅಧ್ಯಕ್ಷೆಯೂ ಆಗಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಕ್ಷೇತ್ರ ಪುನರ್‌ವಿಂಗಡಣಾ ಆಯೋಗ ಮತ್ತು ಉತ್ತರಾಖಂಡದಲ್ಲಿ ಏಕರೂಪ ನಾಗರಿಕ ಸಂಹಿತೆ (ಯುಸಿಸಿ) ಜಾರಿಯ ತಜ್ಞರ ಸಮಿತಿ ಅಧ್ಯಕ್ಷೆಯಾಗಿಯೂ ಅವರು ಕಾರ್ಯನಿರ್ವಹಿಸಿದ್ದಾರೆ. ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿ ಹುದ್ದೆಯಿಂದ ನಿವೃತ್ತರಾದ ನಂತರ ಅವರು ವಹಿಸಿಕೊಳ್ಳುತ್ತಿರುವ ನಾಲ್ಕನೆಯ ಮಹತ್ವದ ಹೊಣೆಗಾರಿಕೆ ಇದಾಗಿದೆ.

### <u>ರಸಗೊಬ್ಬರ ಸಬ್ಸಿಡಿ ಏರಿಕೆ</u>

- 2025–26ನೇ ಸಾಲಿನ ಹಿಂಗಾರು ಹಂಗಾಮಿಗೆ ಯೂರಿಯಾ ಹೊರತು ಪಡಿಸಿ, ರಂಜಕ –ಪಿ ಮತ್ತು ಗಂಧಕ–ಎಸ್ (ಡಿಎಪಿ, ಎಂಒಪಿ, ಎಸ್‌ಎಸ್‌ಪಿ, ಎನ್‌ಪಿಕೆ, ಕಾಂಪ್ಲೆಕ್ಸ್) ರಸಗೊಬ್ಬರಗಳ ಮೇಲಿನ ಸಬ್ಸಿಡಿಯನ್ನು ₹37,952 ಕೋಟಿಗೆ ಹೆಚ್ಚಿಸಲು ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ.
- ಹಿಂಗಾರು ಹಂಗಾಮು ಅಕ್ಟೋಬರ್ 10ರಿಂದ ಆರಂಭಗೊಂಡಿದ್ದು, ಮುಂದಿನ ವರ್ಷದ ಮಾರ್ಚ್ 31ಕ್ಕೆ ಕೊನೆಗೊಳ್ಳಲಿದೆ. 2025ರ ಮುಂಗಾರು ಹಂಗಾಮಿನ ರಸಗೊಬ್ಬರ ಸಬ್ಸಿಡಿಗೆ ಹೋಲಿಸಿದರೆ ಈ ಮೊತ್ತವು ₹736 ಕೋಟಿಯಷ್ಟು ಹೆಚ್ಚಿದೆ.
- ಕೆ.ಜಿಗೆ ₹43.60 ಇದ್ದ ರಂಜಕದ ಸಬ್ಸಿಡಿಯು ಈಗ ₹47.96ಕ್ಕೆ ಏರಿಕೆಯಾಗಿದೆ. ಗಂಧಕದ ಸಬ್ಸಿಡಿ ಕೆ.ಜಿಗೆ ₹1.77ರಿಂದ ₹2.87ಕ್ಕೆ ಏರಿಕೆಯಾಗಿದೆ. ನೈಟ್ರೋಜನ್ ಮತ್ತು ಪೊಟ್ಯಾಶ್ ರಸಗೊಬ್ಬರದ ಸಬ್ಸಿಡಿಯಲ್ಲಿ ಯಾವುದೇ ವ್ಯತ್ಯಾಸವಾಗಿಲ್ಲ. ಇವು ಕ್ರಮವಾಗಿ ಕೆ.ಜಿಗೆ ₹43.02 ಮತ್ತು ₹2.38 ಇವೆ. ಡಿಎಪಿ ಮತ್ತು ಟಿಎಸ್‌ಪಿ ರಸಗೊಬ್ಬರದ ದರದಲ್ಲಿ ಸರ್ಕಾರ ಪರಿಷ್ಕರಣೆ ಮಾಡಿಲ್ಲ.

**10 ವರ್ಷಗಳಿಗೊಮ್ಮೆ ಶಿಫಾರಸು ಜಾರಿ**

- ಸಾಮಾನ್ಯವಾಗಿ ವೇತನ ಆಯೋಗದ ಶಿಫಾರಸುಗಳನ್ನು ಪ್ರತಿ 10 ವರ್ಷಗಳಿಗೊಮ್ಮೆ ಜಾರಿಗೊಳಿಸಲಾಗುತ್ತದೆ. ಇದೇ ಸಂಪ್ರದಾಯದಂತೆ 8ನೇ ವೇತನ ಆಯೋಗದ ಶಿಫಾರಸುಗಳು 2026ರ ಜ.1ರಿಂದ ಜಾರಿಗೆ ಬರಲಿದೆ ಎಂದು ಸರ್ಕಾರ ಪ್ರಕಟಣೆಯಲ್ಲಿ ತಿಳಿಸಿದೆ.
- 7ನೇ ವೇತನ ಆಯೋಗವನ್ನು 2014ರ ಫೆಬ್ರುವರಿಯಲ್ಲಿ ರಚಿಸಲಾಗಿತ್ತು. ಆಯೋಗದ ಶಿಫಾರಸುಗಳು 2016ರ ಜನವರಿ 1ರಿಂದ ಜಾರಿಗೆ ಬಂದಿದ್ದವು.

## ❖ ಆಂಧ್ರಕ್ಕೆ ಅಪ್ಪಳಿಸಿದ 'ಮೊಂಥಾ'

**ಸಂದರ್ಭ: ಮೊಂಥಾ ಚಂಡಮಾರುತವು ತೀವ್ರ ಸ್ವರೂಪ ಪಡೆದುಕೊಂಡಿದ್ದು, ಆಂಧ್ರ ಪ್ರದೇಶದ ಮಚಲಿಪಟ್ಟಣ ಮತ್ತು ಕಾಕಿನಾಡ ನಡುವೆ ರಾತ್ರಿ 7ರ ಹೊತ್ತಿಗೆ ಅಪ್ಪಳಿಸಿದೆ. ಈ ವೇಳೆ ಗಾಳಿಯ ವೇಗವು ಗಂಟೆಗೆ 110 ಕಿ.ಮೀನಷ್ಟು ಇತ್ತು ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.**

- 'ರಾತ್ರಿ 7.23ರ ಸುಮಾರಿಗೆ ಚಂಡಮಾರುತ ಅಪ್ಪಳಿಸುವ ಪ್ರಕ್ರಿಯೆ ಆರಂಭಗೊಂಡಿದ್ದು, ನಂತರದ 6 ತಾಸು ಮುಂದುವರಿದಿದೆ' ಎಂದು ಇಲಾಖೆ 'ಎಕ್ಸ್'ನಲ್ಲಿ ಪೋಸ್ಟ್ ಹಂಚಿಕೊಂಡಿದೆ. ಆಂಧ್ರ ಪ್ರದೇಶ ಮತ್ತು ಒಡಿಶಾದ ಮೇಲೆಯೇ ಚಂಡ ಮಾರುತವು ಹೆಚ್ಚು ಪರಿಣಾಮ ಬೀರಲಿದೆ.
- 'ಯಾವುದೇ ಸಾವು ನೋವು ಸಂಭವಿಸದಂತೆ ನೋಡಿಕೊಳ್ಳುವುದೇ ಸರ್ಕಾರದ ಗುರಿ' ಎಂದು ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಂಝಿ ಹೇಳಿದರು. ತೀವ್ರ ಮಳೆಯಾಗುವ ಪ್ರದೇಶಗಳು, ತಗ್ಗು ಪ್ರದೇಶಗಳ ಜನರನ್ನು ಸ್ಥಳಾಂತರಿಸುವ ಕಾರ್ಯವನ್ನು ಈ ರಾಜ್ಯಗಳಲ್ಲಿ ನಡೆಸಲಾಗುತ್ತಿದೆ. ಶಾಲೆಗಳು, ಅಂಗನ ವಾಡಿಗಳಿಗೆ ಅ.30ರವರೆಗೆ ಇಲ್ಲಿ ರಜೆ ಘೋಷಿಸಲಾಗಿದೆ.

**ಒಡಿಶಾ: ಭೂಕುಸಿತ**

- 'ಮೊಂಥಾ'ದಿಂದ ಒಡಿಶಾದ ಕರಾವಳಿ ಮತ್ತು ದಕ್ಷಿಣ ಭಾಗದ 8 ಜಿಲ್ಲೆಗಳಲ್ಲಿ ಭಾರಿ ಮಳೆಯಾಗುತ್ತಿದ್ದು, ಭೂಕುಸಿತ ಸಂಭವಿಸಿದೆ. ಹಲವು ಮರಗಳು ಧರೆಗೆ ಉರುಳಿದ್ದು, ಕೆಲವು ಮನೆಗಳು ನೆಲಸಮವಾಗಿವೆ.
- ಗಜಪತಿ ಜಿಲ್ಲೆಯ ಅನಕ ಗ್ರಾ.ಪಂ.ನಲ್ಲಿ ಗುಡ್ಡಗಳಿಂದ ದೊಡ್ಡ ಗಾತ್ರದ ಬಂಡೆಗಳು ರಸ್ತೆಗೆ ಉರುಳಿವೆ. ಇದರಿಂದ ಈ ಭಾಗದ ಐದು ಗ್ರಾಮಗಳ ಸಂಪರ್ಕ ಕಡಿತಗೊಂಡಿದೆ. ಇದೇ ಜಿಲ್ಲೆಯ ಮತ್ತೊಂದು ಪಂಚಾಯಿತಿ ವ್ಯಾಪ್ತಿಯಲ್ಲಿಯೂ ಭೂಕುಸಿತ ವಾಗಿದೆ. ಇದೇ ಜಿಲ್ಲೆಯಲ್ಲಿ ಮಣ್ಣಿನ ಮನೆಯೊಂದು ಕುಸಿದು ಬಿದ್ದು, ವ್ಯಕ್ತಿಗೆ ಗಾಯವಾಗಿದೆ.
- ಆಂಧ್ರದ ನೆಲ್ಲೂರು ಜಿಲ್ಲೆಯ ಸುತ್ತಮುತ್ತಲ ಜಿಲ್ಲೆಗಳಲ್ಲಿ ಮಂಗಳವಾರ ಬೆಳಿಗ್ಗೆಯಿಂದಲೇ ಮಳೆ ಸುರಿದಿದೆ. ಒಡಿಶಾದ ಎಂಟು ಜಿಲ್ಲೆಗಳಲ್ಲಿ ಭಾರಿ ಮಳೆಯಾಗಿದೆ. ಮೊಂಥಾ ಪರಿಣಾಮವು ರಾಜಸ್ಥಾನದವರೆಗೂ ಹಬ್ಬಿಕೊಂಡಿದ್ದು, ಬೂಂದಿ ಜಿಲ್ಲೆಯಲ್ಲಿ 13 ಸೆಂ.ಮೀ ಮಳೆ ಸುರಿದಿದೆ. ಅ.13ರಂದು ಪಶ್ಚಿಮ ಬಂಗಾಳದ ಹಲವು ಜಿಲ್ಲೆಗಳಲ್ಲಿ ಭಾರಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.
- ಆಂಧ್ರದಲ್ಲಿ ಬೆಳೆ ನಾಶ: 'ತೀವ್ರ ಮಳೆಯ ಕಾರಣ ಆಂಧ್ರಪ್ರದೇಶದ 38 ಸಾವಿರ ಹೆಕ್ಟೇರ್ ವಿಸ್ತೀರ್ಣದಲ್ಲಿ ಬೆಳೆ ನಾಶವಾಗಿದೆ ಮತ್ತು 1.38 ಲಕ್ಷ ಹೆಕ್ಟೇರ್ ನಲ್ಲಿನ ತೋಟಗಾರಿಕಾ ಬೆಳೆ ನಾಶವಾಗಿದೆ' ಎಂದು ಮುಖ್ಯಮಂತ್ರಿಗಳ ಕಚೇರಿ ತಿಳಿಸಿದೆ.

## ❖ ನೆರೆ ರಾಜ್ಯಗಳ ಜವಳಿ ನೀತಿ ಅಧ್ಯಯನ

**ಸಂದರ್ಭ: ಮಧ್ಯಪ್ರದೇಶ, ತಮಿಳುನಾಡು ಸೇರಿದಂತೆ ವಿವಿಧ ರಾಜ್ಯಗಳ ಜವಳಿ ನೀತಿಯನ್ನು ಅಧ್ಯಯನ ಮಾಡಿ, ಸಮಗ್ರ ವರದಿ ಸಿದ್ಧಪಡಿಸಲು ಜವಳಿ ಸಚಿವ ಶಿವಾನಂದ ಪಾಟೀಲ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.**

Dr. Rajkumar IAS/KAS Academy

- ಕರ್ನಾಟಕ ನೂತನ ಜವಳಿ ಮತ್ತು ಸಿದ್ದ ಉಡುಪು ನೀತಿ ಅನುಷ್ಠಾನ ಕುರಿತ ಉನ್ನತ ಮಟ್ಟದ ಸಬಲೀಕರಣ ಸಮಿತಿ ಸಭೆಯ ನಂತರ ಈ ಕುರಿತು ಮಾಹಿತಿ ನೀಡಿದ ಅವರು, 'ನೆರೆ ರಾಜ್ಯಗಳ ಜವಳಿ ಉದ್ಯಮಿಗಳನ್ನು ಆಕರ್ಷಿಸಲು ಅಧ್ಯಯನ ವರದಿ ಅಗತ್ಯವಿದೆ. ಇತರೆ ರಾಜ್ಯಗಳು ಉದ್ಯಮಿಗಳಿಗೆ ಯಾವ ಸವಲತ್ತುಗಳನ್ನು ನೀಡುತ್ತಿವೆ ಎಂಬ ಮಾಹಿತಿಯ ಆಧಾರದಲ್ಲಿ ರಾಜ್ಯದ ನೀತಿಗಳನ್ನು ಬದಲಾವಣೆ ಮಾಡಲಾಗುವುದು' ಎಂದರು.
- 'ಬಾಂಗ್ಲಾದೇಶದ ಪ್ರತಿಕೂಲ ಪರಿಸ್ಥಿತಿ ಪರಿಣಾಮ ಅಲ್ಲಿನ ಜವಳಿ ಉದ್ಯಮ ಬೇರೆಡೆಗೆ ಸ್ಥಳಾಂತರವಾಗುತ್ತಿದೆ. ಅಲ್ಲಿನ ಉದ್ಯಮಿಗಳನ್ನು ಕರ್ನಾಟಕಕ್ಕೆ ಸೆಳೆಯಲು ಯೋಜನೆ ರೂಪಿಸಲಾಗುತ್ತಿದೆ. ತಮಿಳುನಾಡಿನಲ್ಲಿ ಉದ್ಯಮ ಸುಸ್ಥಿತಿಯಲ್ಲಿದೆ. ಬಹುತೇಕ ಉದ್ಯಮಿಗಳು ತಮಿಳುನಾಡಿನಲ್ಲಿ ಹೂಡಿಕೆಗೆ ಆಸಕ್ತಿ ತೋರುತ್ತಿದ್ದಾರೆ. ಅವರನ್ನು ಕರ್ನಾಟಕ ರಾಜ್ಯದತ್ತ ಸೆಳೆಯಲು ಏನು ಮಾಡಬೇಕು ಎನ್ನುವ ಕುರಿತು ಅಧ್ಯಯನ ಮಾಡಬೇಕಿದೆ. ಮಹಾರಾಷ್ಟ್ರ ಸರ್ಕಾರ ವಿದ್ಯುತ್ ಬಿಲ್‌ನಲ್ಲೇ ಸಹಾಯಧನ ನೀಡುತ್ತಿದೆ. ನಮ್ಮಲ್ಲಿಯೂ ಈ ಪದ್ಧತಿ ಅನುಸರಿಸಿದರೆ ಮಹಾರಾಷ್ಟ್ರದ ಜವಳಿ ಉದ್ಯಮಿಗಳು ರಾಜ್ಯದಲ್ಲಿ ಬಂಡವಾಳ ಹೂಡಲು ಸಿದ್ಧರಿದ್ದಾರೆ' ಎಂದು ಮಾಹಿತಿ ನೀಡಿದರು.

***<u>'ಪಿಎಂ ಮಿತ್ರ ಪಾರ್ಕ್'ಗೆ ಸಾವಿರ ಎಕರೆ</u>***

- 'ಪಿಎಂ ಮಿತ್ರ ಪಾರ್ಕ್' ಯೋಜನೆಗೆ ರಾಜ್ಯ ಸರ್ಕಾರ ಒಂದು ಸಾವಿರ ಎಕರೆ ಭೂಮಿ ಜಮೀನು ನೀಡಿದ್ದು, ಮೂಲಸೌಕರ್ಯ ಕಲ್ಪಿಸಲು ಅನುದಾನ ಬಿಡುಗಡೆ ಮಾಡಿದೆ. ಇತರ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಕಾಮಗಾರಿಗಳನ್ನು ತ್ವರಿತವಾಗಿ ಮುಗಿಸಲು ಸೂಚಿಸಲಾಗಿದೆ' ಎಂದು ಶಿವಾನಂದ ಪಾಟೀಲ ಹೇಳಿದರು.
- 'ನೂರಾರು ವರ್ಷಗಳಿಂದ ಮನೆಯಲ್ಲೇ ಕೈಮಗ್ಗ ಹಾಕಿಕೊಂಡವರಿಗೆ, ಪೂರ್ಣ ಪ್ರಮಾಣದಲ್ಲಿ ಇರುವ ನೇಕಾರರ ಕಾಲೊನಿಗಳಿಗೆ ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ವಿನಾಯಿತಿ ಕೊಡಿಸುವ ಪ್ರಯತ್ನ ಆಗಬೇಕಿದೆ. ಬೆಂಗಳೂರಿನ ಕಬ್ಬನ್ ಪೇಟೆ, ಕಾಟನ್ ಪೇಟೆ ಮತ್ತಿತರ ಕಡೆ ಇರುವ ನೇಕಾರರಿಗೆ ಸಮಸ್ಯೆಯಾಗಿದ್ದು, ಶಾಶ್ವತ ಪರಿಹಾರ ಕಂಡುಕೊಳ್ಳಲಾಗುತ್ತಿದೆ' ಎಂದು ಹೇಳಿದರು.

## ❖ ವಿಮಾನ ತಯಾರಿಕೆ: ರಷ್ಯಾ–ಎಚ್‌ಎಎಲ್ ಒಪ್ಪಂದಕ್ಕೆ ಸಹಿ

**ಸಂದರ್ಭ: ಪ್ರಾದೇಶಿಕ ಸಂಪರ್ಕ ಯೋಜನೆಗಳ ವಿಸ್ತರಣೆಯೊಂದಿಗೆ ಭಾರತದಲ್ಲಿ ವಿಮಾನಯಾನ ಮಾರುಕಟ್ಟೆ ವೃದ್ಧಿಯಾಗುವ ಹಿನ್ನೆಲೆಯಲ್ಲಿ ನಾಗರಿಕ ವಿಮಾನದ ವಾಣಿಜ್ಯ ತಯಾರಿಕೆಗಾಗಿ ಸರ್ಕಾರಿ ಸ್ವಾಮ್ಯದ ಹಿಂದೂಸ್ತಾನ್ ಏರೊನಾಟಿಕ್ಸ್ ಲಿಮಿಟೆಡ್(ಎಚ್‌ಎಲ್), ರಷ್ಯಾದ ಪ್ರಮುಖ ವಾಣಿಜ್ಯ ವಿಮಾನ ಉತ್ಪಾದಕ ಸಂಸ್ಥೆಯೊಂದಿಗೆ ಒಪ್ಪಂದಕ್ಕೆ ಸಹಿ ಹಾಕಿದೆ.**

- ಮಾಸ್ಕೊದ ಯುನೈಟೆಡ್ ಏರ್ ಕಾರ್ಪೊರೇಷನ್‌ನೊಂದಿಗೆ ಎಚ್‌ಎಎಲ್ ಸಂಸ್ಥೆ ಸೋಮವಾರ ಈ ಒಪ್ಪಂದಕ್ಕೆ ಸಹಿ ಹಾಕಿದೆ. ಎಚ್‌ಎಎಲ್ ಸಿಎಂಡಿ ಡಿ.ಕೆ ಸುನೀಲ್ ಮತ್ತು ಯುಎಸಿ ಕಂಪನಿಯ ಮಹಾನಿರ್ದೇಶಕ ವಾಡಿಮ್ ಬಡೇಖಾ ಅವರ ಸಮ್ಮುಖದಲ್ಲಿ ಎಚ್‌ಎಲ್‌ನ ಪ್ರಭಾತ್ ರಂಜನ್ ಮತ್ತು ಯುಎಸಿ ಕಂಪನಿಯ ಒಲೆಗ್ ಬೊಗೊಮೊಲೊವ್ ಈ ಒಪ್ಪಂದಕ್ಕೆ ಸಹಿ ಹಾಕಿದರು.
- ಈ ಒಪ್ಪಂದದ ಪ್ರಕಾರ ಎಚ್‌ಎಲ್, ದೇಶೀಯ ಗ್ರಾಹಕರಿಗಾಗಿ ಡಬ್ಬಲ್ ಎಂಜಿನ್ ಹೊಂದಿರುವ, ಸಣ್ಣ ಗಾತ್ರದ, ಎಸ್–ಜೆ 100(SJ-100) ವಿಮಾನವನ್ನು ತಯಾರಿಸಲಿದೆ. ಈಗಾಗಲೇ 200 ಕ್ಕೂ ಹೆಚ್ಚು ಎಸ್‌ಜೆ–100 ವಿಮಾನಗಳನ್ನು ತಯಾರಿಸಲಾಗಿದ್ದು, ವಿಶ್ವದ 16 ಕ್ಕೂ ಹೆಚ್ಚು ವಾಣಿಜ್ಯ ವಿಮಾನಯಾನ ಕಂಪನಿಗಳು ಇವುಗಳನ್ನು ಬಳಸುತ್ತಿವೆ.

- 'ಎಸ್‌ಜೆ–100 ವಿಮಾನವು, ಭಾರತದಲ್ಲಿ 'ಉಡಾನ್' ಯೋಜನೆಯಡಿಯಲ್ಲಿ ಕಡಿಮೆ ದೂರ ಸಂಪರ್ಕದಲ್ಲಿ ಗೇಮ್ ಚೇಂಜರ್ ಆಗಲಿದೆ' ಎಂದು ಎಚ್‌ಎಎಲ್ ಪ್ರಕಟಣೆಯಲ್ಲಿ ತಿಳಿಸಿದೆ.
- ಈ ವಿಮಾನವು ರಷ್ಯಾದ ಮಾರುಕಟ್ಟೆಯಲ್ಲಿ ಬೇಡಿಕೆಯಲ್ಲಿದ್ದು, ಅಲ್ಲಿನ ಒಂಬತ್ತು ವಿಮಾನಯಾನ ಸಂಸ್ಥೆಗಳು ಈ ಇವುಗಳನ್ನು ಬಳಕೆ ಮಾಡುತ್ತಿವೆ. ಇದು ಗರಿಷ್ಠ 103 ಆಸನಗಳ ಸಾಮರ್ಥ್ಯ ವನ್ನು ಹೊಂದಿದ್ದು, 3500 ಕಿ.ಮೀ.ಗಿಂತ ಹೆಚ್ಚಿನ ವ್ಯಾಪ್ತಿಯ ರೇಂಜ್ ಹೊಂದಿದೆ.
- 'ಎಸ್‌ಜೆ–100 ವಿಮಾನಗಳ ತಯಾರಿಕೆಯು ಭಾರತೀಯ ವಾಯುಯಾನ ಉದ್ಯಮದ ಇತಿಹಾಸದಲ್ಲಿ ಹೊಸ ಅಧ್ಯಾಯದ ಆರಂಭದ ಸೂಚನೆಯಾಗಿದೆ. ಇದು ಖಾಸಗಿ ವಲಯವನ್ನು ಬಲಪಡಿಸುತ್ತದೆ. ಮಾತ್ರವಲ್ಲ, ವಾಯುಯಾನ ಉದ್ಯಮದಲ್ಲಿ ಪ್ರತ್ಯಕ್ಷ ಮತ್ತು ಪರೋಕ್ಷ ಉದ್ಯೋಗಗಳನ್ನು ಸೃಷ್ಟಿಸುತ್ತದೆ' ಎಂದು ಎಚ್‌ಎಎಲ್ ಹೇಳಿದೆ.

## ❖ ಇಸ್ರೇಲ್–ಹಮಾಸ್ ಮಧ್ಯೆ ಮತ್ತೆ ಸಂಘರ್ಷ

**ಸಂದರ್ಭ: ಗಾಜಾ ಮೇಲೆ ಕೂಡಲೇ 'ಪ್ರಬಲವಾದ ದಾಳಿ' ನಡೆಸಲು ಸೇನೆಗೆ ಆದೇಶ ನೀಡಿರುವುದಾಗಿ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ಹೇಳಿದ್ದಾರೆ.**

- ಇದಕ್ಕೆ ಪ್ರತಿಕ್ರಿಯಿಸಿರುವ ಹಮಾಸ್, ಒತ್ತೆಯಾಳುಗಳ ಮೃತದೇಹ ಹಸ್ತಾಂತರ ಪ್ರಕ್ರಿಯೆಯನ್ನು ವಿಳಂಬ ಮಾಡುವುದಾಗಿ ಹೇಳಿದೆ.
- ಈ ಹಠಾತ್ ಬೆಳವಣಿಗೆಯು ಅಮೆರಿಕ ಮಧ್ಯಸ್ಥಿಕೆಯಲ್ಲಿ ನಡೆದಿದ್ದ ಇಸ್ರೇಲ್–ಹಮಾಸ್ ಕದನ ವಿರಾಮ ಒಪ್ಪಂದ ಮುರಿಯಲು ಕಾರಣವಾಗುವ ಸಾಧ್ಯತೆ ಇದೆ. ಗಾಜಾ ನಗರ ಮತ್ತು ದೀರ್ ಅಲ್–ಬಲಾಹ್ ಸೇರಿದಂತೆ ಗಾಜಾದ ಹಲವೆಡೆ ಟ್ಯಾಂಕರ್ ದಾಳಿ ಮತ್ತು ಸ್ಫೋಟದ ಸದ್ದು ಕೇಳಿಬಂದಿದೆ.
- ಹಮಾಸ್ ಬಂಡುಕೋರರು ದಕ್ಷಿಣ ಗಾಜಾದಲ್ಲಿ ಇಸ್ರೇಲ್ ಸೇನಾಪಡೆಗಳ ಮೇಲೆ ದಾಳಿ ನಡೆಸಿದ್ದಾಗಿ ಇಸ್ರೇಲ್ ಅಧಿಕಾರಿಗಳು ಹೇಳಿದ ಬೆನ್ನಲ್ಲೇ ನೆತನ್ಯಾಹು ಅವರು ಈ ಆದೇಶ ನೀಡಿದ್ದಾರೆ.

## ❖ ಬನ್ನೇರುಘಟ್ಟ ಉದ್ಯಾನದಲ್ಲಿ ಸೌರ ಪಾರ್ಕ್

**ಸಂದರ್ಭ: ಪ್ರಾಣಿಗಳ ತಾಣದಲ್ಲಿ ವಿದ್ಯುತ್ ಸ್ವಾವಲಂಬಿ ಯೋಜನೆ ಜಾರಿಗೆ ಸಿದ್ಧತೆ: ಬನ್ನೇರುಘಟ್ಟ ಜೈವಿಕ ಉದ್ಯಾನದ ಭವಿಷ್ಯದ ಇಂಧನ ಅಗತ್ಯವನ್ನು ಸೌರ ವಿದ್ಯುತ್‌ನಿಂದಲೇ ಪೂರೈಸುವ ಯೋಜನೆಗೆ ಮುಂದಿನ ವಾರ ಚಾಲನೆ ನೀಡಲಾಗುವುದುಈಶ್ವರ ಬಿ. ಖಂಡ್ರೆ, ಅರಣ್ಯ ಸಚಿವ.**

- ರಾಜಧಾನಿಯ ಹೊರವಲಯದಲ್ಲಿರುವ ಬನ್ನೇರುಘಟ್ಟ ಜೈವಿಕ ಉದ್ಯಾನವು ವಿದ್ಯುತ್ ಸ್ವಾವಲಂಬಿಯಾಗುವ ನಿಟ್ಟಿನಲ್ಲಿ ಸೌರ ವಿದ್ಯುತ್ ಸ್ಥಾವರ ಸ್ಥಾಪಿಸಲು ಮುಂದಾಗಿದೆ.
- ಸೌರ ವಿದ್ಯುತ್ ಒದಗಿಸುವ ವಾಹನ ಮತ್ತು ಉಪಕರಣಗಳನ್ನು ಮೃಗಾಲಯಗಳಲ್ಲಿ ಬಳಸುತ್ತಿದ್ದರೂ ಹೆಚ್ಚಿನ ಪ್ರಮಾಣದಲ್ಲಿ ವಿದ್ಯುತ್ ಉತ್ಪಾದಿಸುವ ಘಟಕ ಇರಲಿಲ್ಲ. ಇದಕ್ಕಾಗಿ ಯೋಜನೆ ರೂಪಿಸಲಾಗಿದ್ದು, ಮುಂದಿನ ವಾರ ಸೌರ ವಿದ್ಯುತ್ ಘಟಕಕ್ಕೆ ಚಾಲನೆ ಸಿಗಲಿದೆ. ಐದಾರು ತಿಂಗಳಲ್ಲಿ ಸುಸಜ್ಜಿತ ವಿದ್ಯುತ್ ಘಟಕ ಸೇವೆಗೆ ಅಣಿಯಾಗಲಿದೆ. ಬಳಕೆ ಪ್ರಮಾಣ ನೋಡಿಕೊಂಡು ಘಟಕದ ಸಾಮರ್ಥ್ಯ ಹೆಚ್ಚಿಸಲು ಬನ್ನೇರುಘಟ್ಟ ಜೈವಿಕ ಉದ್ಯಾನದ ಆಡಳಿತ ಮಂಡಳಿ ನಿರ್ಧರಿಸಿದೆ.
- ಸಾಮಾಜಿಕ ಹೊಣೆಗಾರಿಕೆ ನಿಧಿ (ಸಿಎಸ್‌ಆರ್) ಬಳಸಿಕೊಂಡು ಈ ಯೋಜನೆಯನ್ನು ಜಾರಿ ಮಾಡಲಾಗುತ್ತಿದೆ. ಇದರ ಅನುಷ್ಠಾನದ ಜವಾಬ್ದಾರಿ ಯನ್ನು ಐಸಿಐಸಿಐ ಫೌಂಡೇಷನ್ ಹೊತ್ತುಕೊಂಡಿದೆ. ಉದ್ಯಾನದ ಒಳಗೆ ಮೂರು ಎಕರೆ ವಿಶಾಲ ಪ್ರದೇಶದಲ್ಲಿ ವಿದ್ಯುತ್ ಉತ್ಪಾದನೆ ಘಟಕವನ್ನು ಆರಂಭಿಸಲಾಗುತ್ತಿದೆ.

- ಬನ್ನೇರುಘಟ್ಟ ಜೈವಿಕ ಉದ್ಯಾನವೇ ವಿದ್ಯುತ್ ವಿತರಣೆಗೆ ಬೇಕಾದ ಗ್ರಿಡ್ ಅನ್ನು ನಿರ್ಮಿಸಿಕೊಳ್ಳಲಿದೆ. ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ (ಬೆಸ್ಕಾಂ) ವಿದ್ಯುತ್ ಬಳಕೆ, ಹೆಚ್ಚುವರಿ ವಿದ್ಯುತ್ ಸರಬರಾಜಿಗೆ ಬೇಕಾದ ಅನುಮತಿ ಪಡೆಯುವ ಹೊಣೆ ಹೊತ್ತುಕೊಳ್ಳಲಿದೆ.
- ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನದ ಅವಿಭಾಜ್ಯ ಅಂಗವಾಗಿ ರುವ ಜೈವಿಕ ಉದ್ಯಾನವು 2002ರಿಂದ ಸ್ವತಂತ್ರವಾಗಿ ಕಾರ್ಯನಿರ್ವಹಿಸುತ್ತಿದೆ. ಪ್ರಮುಖ ಪ್ರವಾಸಿ ಕೇಂದ್ರವಾಗಿರುವ ಬನ್ನೇರುಘಟ್ಟ ಜೈವಿಕ ಉದ್ಯಾನವು 780 ಹೆಕ್ಟೇರ್ ಪ್ರದೇಶದಲ್ಲಿ ಹರಡಿಕೊಂಡಿದೆ.
- ಉದ್ಯಾನಗಳ ನಿರ್ವಹಣೆ ಸಹಿತ ಹಲವು ಉದ್ದೇಶಗಳಿಗೆ ವಿದ್ಯುತ್ ಬಳಸಲಾಗುತ್ತಿದೆ. ಪ್ರತಿವರ್ಷ ವಿದ್ಯುತ್ ನಿರ್ವಹಣೆಗೆ ₹40 ಲಕ್ಷ ವೆಚ್ಚ ಮಾಡಲಾಗುತ್ತಿದೆ. ಬೆಸ್ಕಾಂನಿಂದಲೇ ವಿದ್ಯುತ್ ಅನ್ನು ಪಡೆದುಕೊಳ್ಳಲಾಗುತ್ತಿದೆ. ತುರ್ತು ಬಳಕೆಗೆ ಜನರೇಟರ್ ವ್ಯವಸ್ಥೆಯಿದೆ.
- ಸೌರ ವಿದ್ಯುತ್ ಘಟಕ ಸ್ಥಾಪನೆಯಾದರೆ ವಿದ್ಯುತ್ ವೆಚ್ಚ ಉಳಿತಾಯವಾಗಲಿದೆ. ಅಲ್ಲದೇ ಹೆಚ್ಚುವರಿ ವಿದ್ಯುತ್ ಅನ್ನು ಮಾರಾಟ ಮಾಡಿ ಅದರಲ್ಲೂ ಆದಾಯ ಪಡೆಯುವ ಉದ್ದೇಶ ಇದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.
- 'ದೇಶದ ಯಾವುದೇ ಜೈವಿಕ ಉದ್ಯಾನ, ಮೃಗಾಲಯದಲ್ಲೂ ಇಷ್ಟು ದೊಡ್ಡ ಪ್ರಮಾಣದಲ್ಲಿ ಸೌರ ವಿದ್ಯುತ್ ಉತ್ಪಾದನೆ ಮಾಡುವ ಘಟಕವಿಲ್ಲ. ಅಗತ್ಯ ನೋಡಿಕೊಂಡು ಯೋಜನೆ ವಿಸ್ತರಿಸಲಾಗುವುದು' ಎಂದು ಬನ್ನೇರುಘಟ್ಟ ಜೈವಿಕ ಉದ್ಯಾನದ ಕಾರ್ಯನಿರ್ವಾಹಕ ನಿರ್ದೇಶಕ ಎ.ವಿ. ಸೂರ್ಯಸೇನ್ ತಿಳಿಸಿದರು.

**<u>'ಮೆಗಾವಾಟ್'ನ ಮೊದಲ ಕೇಂದ್ರ</u>**

- ಚೆನ್ನೈನ ವ್ಯಾಂಡಲೂರ್ ಮೃಗಾಲಯದಲ್ಲಿ ಸೌರ ವಿದ್ಯುತ್ ಉತ್ಪಾದನೆ ಘಟಕ ವಿದ್ದರೂ ಅಲ್ಲಿ ಬರೀ 100 ಕಿಲೋ ವಾಟ್ ವಿದ್ಯುತ್ ಮಾತ್ರ ಉತ್ಪಾದಿಸಲಾಗುತ್ತಿದೆ. ಅದನ್ನು ಬಿಟ್ಟರೆ ಭಾರತದಲ್ಲಿರುವ ಪ್ರಮುಖ ಮೃಗಾಲಯ ಹಾಗೂ ಜೈವಿಕ ಉದ್ಯಾನಗಳಲ್ಲಿ 1 ಮೆಗಾವಾಟ್ ಸೌರ ವಿದ್ಯುತ್ ಉತ್ಪಾದಿಸುವ ಮೊದಲ ಕೇಂದ್ರವೆಂಬ ಹೆಗ್ಗಳಿಕೆಗೆ ಬನ್ನೇರುಘಟ್ಟ ಉದ್ಯಾನ ಪಾತ್ರವಾಗಲಿದೆ.

## ❖ ಸೋಲಿಗೆ ಸೋಲದ ಸುಸುಮು: ನೊಬೆಲ್ ವಿಜ್ಞಾನಿಗಳು 3

**ಸಂದರ್ಭ: ಅದು ಯಾವುದೇ ಕ್ಷೇತ್ರವಿರಲಿ, ಗೆದ್ದವರು ಮತ್ತು ಸೋತವರ ನಡುವೆ ಒಂದು ಸ್ಪಷ್ಟ ವ್ಯತ್ಯಾಸವಿರುತ್ತದೆ; ಅದೇ, ಅವರ ಮನೋಬಲ. ನಾವು ಸೋಲುವುದು ಯಾವಾಗ? ಮತ್ಯಾರೋ ಗೆದ್ದಾಗ ಅಲ್ಲ, ನಾವು ಸೋಲನ್ನು ಒಪ್ಪಿಕೊಂಡಾಗ ಮಾತ್ರ, ಅಲ್ಲವೇ? ಸವಾಲುಗಳೆಂದರೆ ಹೆದರಿ ಹಿಂದೋಡದೆ, ಸವಾಲಿನ ಹಿಂದೋಡಿ, ಅದಕ್ಕೆ ಸರಿಯಾದ ಜವಾಬು ನೀಡುವವರೆಗೂ ಕೈಕಟ್ಟಿಕೂರದ ವಿಜ್ಞಾನಿಯ ಬಗ್ಗೆ ತಿಳಿಯೋಣ ಬನ್ನಿ.**

- 'ಯಾವುದೇ ಒಂದು ಕೆಲಸವನ್ನು ಅಸಾಧ್ಯ ಎಂದು ನೀವು ಒಪ್ಪಲು ತಯಾರಿಲ್ಲದಿದ್ದರೆ, ಅದು ಹೇಗೆ ಅಸಾಧ್ಯವಾಗಲು ಸಾಧ್ಯ?' ಎನ್ನುತ್ತಾರೆ, ಡಾ. ಸುಸುಮು ಕಿಟಾಗವಾ. ಈ ಬಾರಿ ರಸಾಯನ ವಿಜ್ಞಾನದಲ್ಲಿ ರಿಚರ್ಡ್ ರಾಬ್ಸನ್ ಮತ್ತು ಓಮರ್ ಯಾಘಿಯವರ ಜೊತೆಗೆ ನೊಬೆಲ್ ಪ್ರಶಸ್ತಿಗೆ ಭಾಜನರಾದ ಸುಸುಮು ಅವರ ಮಾತುಗಳನ್ನು ಕೇಳಿದರೆ, ಸ್ಥೈರ್ಯಗುಂದಿದ ಯಾರೇ ಆದರೂ, ಮತ್ತೊಮ್ಮೆ ಫೀನಿಕ್ಸ್‌ನಂತೆ ಎದ್ದುನಿಲ್ಲುವಂತಾಗುತ್ತದೆ; ಅಷ್ಟು ಧನಾತ್ಮಕತೆ, ಅಷ್ಟು ಗುರಿ ಕೇಂದ್ರೀಕೃತ ಮನಸ್ಸು ಮತ್ತು ಅಂತಹ ಛಲ ಬಿಡದ ಮನೋಭಾವ ಇವರದ್ದು.
- **2025ರ ರಸಾಯನವಿಜ್ಞಾನ ನೊಬೆಲ್ ದೊರೆತಿದ್ದು ಲೋಹ-ಸಾವಯವ ಚೌಕಟ್ಟುಗಳಿಗೆ ಎಂಬುದು ನಿಮಗೆ ಈಗಾಗಲೇ ತಿಳಿದಿದೆಯಲ್ಲವೇ? ಅದರ ರಚನೆಯ ಹಿಂದಿನ ಸಿದ್ಧಾಂತ, ರಿಚರ್ಡ್ ರಾಬ್ಸನ್ ಅವರದ್ದು, ಆ ಚೌಕಟ್ಟಿಗೆ ಭೌತಿಕ ಬಲ ತುಂಬಿದ್ದು ಓಮರ್ ಯಾಘಿ ಅವರ ಸಂಶೋಧನೆ ಮತ್ತು ಈ ಚೌಕಟ್ಟುಗಳ ಆನ್ವಯಿಕತೆಯನ್ನು ಸಾಧ್ಯವಾಗಿಸಿದ್ದು ಸುಸುಮು ಕಿಟಾಗವಾ ಅವರ ಪ್ರಯೋಗಗಳು.**

- ಜಗತ್ತನ್ನು ಪೊರೆದದ್ದು ಅಚಾನಕ್ಕಾಗಿ ಆದ ಅನೇಕ ಆವಿಷ್ಕಾರಗಳು ಎಂಬ ಮಾತಿದೆ. ಏನೋ ಮಾಡಲು ಹೋಗಿ ಮತ್ತೇನೋ ಆದ ಕಥೆಗಳು ವಿಜ್ಞಾನಲೋಕದಲ್ಲಿ ಸಾಮಾನ್ಯ. 'ಪೆನಿಸಿಲಿನ್' ಎಂಬ ಮೊದಲ ಆ್ಯಂಟಿಬಯೋಟಿಕ್, ಎಕ್ಸ್–ರೇ, ಪೇಸ್‌ಮೇಕರ್, ಮೈಕ್ರೋವೇವ್ ಓವನ್ - ಹೀಗೆ ಪಟ್ಟಿ ದೊಡ್ಡದಿದೆ. 'ಅಂತಹದ್ದೇ ಒಂದು ಅಚಾನಕ್ಕಾಗಿ ಆದ ಆವಿಷ್ಕಾರವೇ ಈ ಲೋಹ-ಸಾವಯವ ಚೌಕಟ್ಟುಗಳೊಳಗೆ ರಂಧ್ರಗಳಿವೆ ಮತ್ತು ಅವುಗಳನ್ನು ಅನಿಲದ ಅಣುಗಳನ್ನು, ಲೋಹದ ಅಣುಗಳನ್ನು ಹಿಡಿದಿಡಲು ಬಳಸಬಹುದು ಎಂಬುದು' ಎನ್ನುತ್ತಾರೆ. ಸುಸುಮು.

**<u>ಹಿನ್ನೆಲೆ</u>**

- 1951ರ ಜುಲೈ 4ರಂದು ಜಪಾನಿನ ಕ್ಯೋಟೋದಲ್ಲಿ ಜನಿಸಿದ ಸುಸುಮು ಅವರು, ಚಿಕ್ಕಂದಿನಿಂದಲೂ ವಿಜ್ಞಾನದಲ್ಲಿ ಅಪಾರ ಆಸಕ್ತಿ ಹೊಂದಿದ್ದವರು; ಕ್ಯೋಟೋದಲ್ಲಿಯೇ ತಮ್ಮ ಶಿಕ್ಷಣ ಮತ್ತು ಸಂಶೋಧನೆಯನ್ನು ನಡೆಸಿದರು. ಅಸಾವಯವ ರಸಾಯನವಿಜ್ಞಾನ ಇವರ ಕಾರ್ಯಕ್ಷೇತ್ರ. ಕಿಂಡೈ ವಿಶ್ವವಿದ್ಯಾಲಯ, ಟೋಕ್ಯೋ ವಿಶ್ವವಿದ್ಯಾಲಯಗಳಲ್ಲಿ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸುತ್ತಾ, ಟೆಕ್ಸಸ್ ಮತ್ತು ನ್ಯೂಯಾರ್ಕ್ ವಿಶ್ವವಿದ್ಯಾಲಯಗಳಲ್ಲೂ ಗುರುತರ ಜವಾಬ್ದಾರಿಗಳನ್ನು ನಿರ್ವಹಿಸಿದರು; ತಮ್ಮ ವೃತ್ತಿಬದುಕಿನಲ್ಲಿ ವಿದ್ಯಾರ್ಥಿಗಳನ್ನು ಸಂಶೋಧನೆಯೆಡೆಗೆ ಸೆಳೆಯುವ ಮತ್ತು ವೈಜ್ಞಾನಿಕ ಮನೋಭಾವವನ್ನು ಅವರಲ್ಲಿ ಹಾಸುಹೊಕ್ಕಾಗಿಸುವ ಜವಾಬ್ದಾರಿಯನ್ನು ಹೊತ್ತ ಸುಸುಮು ಅವರು, ಐ.ಸಿ.ಇ.ಎಂ.ಎಸ್. ಸೇರಿದಂತೆ ಅನೇಕ ವಿಜ್ಞಾನ ಸಂಸ್ಥೆಗಳ ಸದಸ್ಯರಾಗಿ, ಅಧ್ಯಕ್ಷರಾಗಿಯೂ ಕಾರ್ಯಪ್ರವೃತ್ತರಾಗಿದ್ದರು. ನೊಬೆಲ್ ಪ್ರಶಸ್ತಿ ಘೋಷಣೆಯಾದ ನಂತರ ನಡೆದ ಇವರ ಸಂದರ್ಶನದಲ್ಲಿ, ಸುಸುಮು ಕಿಟಾಗವಾ ಅವರು ನಗುತ್ತಾ, 'ಯಾರಾದರೂ ಅಸಾಧ್ಯವೆಂದದ್ದನ್ನು ಸಾಧ್ಯ ಮಾಡಿತೋರಿಸಲು ನನಗೆ ಬಹಳ ಹುರುಪು' ಎಂದು ಹೇಳಿದ್ದು, ಸಣ್ಣ ಸೋಲುಗಳಿಗೆ, ಚಿಕ್ಕ ಟೀಕೆಯೊಂದಕ್ಕೇ ಕೈಚೆಲ್ಲುವ ಹಲವರಿಗೆ ಸ್ಫೂರ್ತಿ ನೀಡುವಂತಿದೆ.
- 90ರ ದಶಕದಲ್ಲಿ ಲೋಹ-ಸಾವಯವ ಚೌಕಟ್ಟಿನ ರಂಧ್ರಗಳೊಳಗೆ ಅನಿಲದ ಅಣುಗಳನ್ನು ಹಿಡಿದಿಡಬಹುದು ಎಂದು ಸುಸುಮು ಮತ್ತು ಇನ್ನಿತರ ರಸಾಯನವಿಜ್ಞಾನಿಗಳು ಪ್ರತಿಪಾದಿಸಿದಾಗ, ಅದನ್ನು ಒಪ್ಪಲು ಬಹುಪಾಲು ವಿಜ್ಞಾನಿಗಳು ತಯಾರಿರಲಿಲ್ಲ. 'ಅವರ ಅಪನಂಬಿಕೆಯೇ ನನ್ನ ಬಲವಾಯ್ತು' ಎನ್ನುತ್ತಾರೆ, ಸುಸುಮು. ಬೇರೆ ಯಾವುದೇ ಸಂಶೋಧನೆ ಮಾಡುತ್ತಿದ್ದರೂ, ಈ ವಿಷಯವೊಂದು ಅವರ ಮನಸ್ಸಿನ ಮೂಲೆಯಲ್ಲಿ ಕುಳಿತು ಕುದಿಯುತ್ತಲೇ ಇತ್ತು. ಮತ್ತೇನೋ ವಿಷಯದ ಸಲುವಾಗಿ, ಲೋಹ-ಸಾವಯವ ಚೌಕಟ್ಟಿನ ಸ್ಫಟಿಕದ ರಚನೆಯನ್ನು ವಿಶ್ಲೇಷಣೆ ಮಾಡಲು ಖಾಸಗಿ ವಿಶ್ವವಿದ್ಯಾಲಯವೊಂದಕ್ಕೆ ಸುಸುಮು ಹೋಗಿದ್ದರು. ಅಲ್ಲಿ ಕಂಪ್ಯೂಟರ್ ಕೇಂದ್ರದಲ್ಲಿ, ಸ್ಫಟಿಕದ ವಿಶ್ಲೇಷಣೆಯ ಸಮಯದಲ್ಲಿ, ಈ ಲೋಹ-ಸಾವಯವ ಚೌಕಟ್ಟಿನಲ್ಲಿರುವ ವಿಶಿಷ್ಟ, ನಿರ್ದಿಷ್ಟ ಬಗೆಯ ರಂಧ್ರಗಳು ಅಚಾನಕ್ಕಾಗಿ ಕಣ್ಣಿಗೆ ಬಿದ್ದವು. ಇಂತಹ ಅಚಾನಕ್ ಆವಿಷ್ಕಾರವೇ, ನಿಜಜೀವನದಲ್ಲಿ ಅನೇಕ ಕ್ಷೇತ್ರಗಳಲ್ಲಿ ಲೋಹ-ಸಾವಯವ ಚೌಕಟ್ಟಿನ ಸಾರ್ಥಕ ಅನ್ವಯಿಕೆಗೆ, ನೊಬೆಲ್ ಪ್ರಶಸ್ತಿಯು ಒಲಿಯುವುದಕ್ಕೆ, ಜನರ ಅಪನಂಬಿಕೆಯನ್ನು ಹುಸಿಯಾಗಸಲು ದಾರಿ ಮಾಡಿಕೊಟ್ಟಿತು.
- ಒಂದೇ ಗುಂಗಿನಲ್ಲಿ, ಅಪರಿಮಿತ ಏಕಾಗ್ರತೆಯಲ್ಲಿ ಸಂಶೋಧನೆಯಲ್ಲಿ ತೊಡಗುವುದು ಎಷ್ಟು ಮುಖ್ಯವೋ, ಸಂಶೋಧನಾ ಪರಿಸರವೂ ಅಷ್ಟೇ ಮುಖ್ಯ ಎಂಬ ಸುಸುಮು ಅವರ ಮಾತನ್ನು ಎಲ್ಲ ವಿಜ್ಞಾನಿಗಳೂ ಖಂಡಿತವಾಗಿ ಒಪ್ಪುತ್ತಾರೆ. ಜಪಾನಿಗೆ ವಿಜ್ಞಾನದಲ್ಲಿ ನೊಬೆಲ್ ತಂದುಕೊಟ್ಟ ಅನೇಕ ಸಂಶೋಧಕರು ಸುಸುಮು ಅವರ ಮಾರ್ಗದರ್ಶಿಗಳು ಮತ್ತು ಒಡನಾಡಿಗಳು. ನೊಬೆಲ್ ವಿಜೇತ ಕೆನಿಚಿ ಫುಕುಯಿ ಅವರನ್ನಂತೂ ಸುಸುಮು ಅವರು ತಮ್ಮ 'ಶೈಕ್ಷಣಿಕ ಪಿತಾಮಹ' ಎಂದೇ ಬಣ್ಣಿಸುತ್ತಾರೆ.

Dr. Rajkumar IAS/KAS Academy

- ಕೆನಿಚಿ ಫುಕುಯಿ, ಅಕಿರಾ ಯೊಶಿನೋರಂತಹ ವಿಜ್ಞಾನಲೋಕದ ದಿಗ್ಗಜಗಳು ಕಾರ್ಯನಿರ್ವಹಿಸಿದ ಪ್ರಯೋಗಾಲಯಗಳಲ್ಲೇ ತಾವೂ ಸಂಶೋಧನೆ ಮಾಡುತ್ತಾ, ಅವರ ಪರಂಪರೆಯಿಂದ ಸ್ಫೂರ್ತಿ ಪಡೆಯುತ್ತಾ, ಮುಂದಿನ ತಲೆಮಾರಿಗೆ ಪ್ರೇರಣೆ ಒದಗಿಸಿದ್ದಾರೆ, ಸುಸುಮು ಕಿಟಾಗವಾ. ಇವರ ಲೋಹ-ಸಾವಯವ ಚೌಕಟ್ಟುಗಳು ಅನಿಲದ ಅಣುಗಳನ್ನು, ವೇಗವರ್ಧಕಗಳನ್ನು ಹಿಡಿದಿಟ್ಟುಕೊಳ್ಳುವ ಹಾಗೆ, ಇವರ ಕಾರ್ಯವೈಖರಿಯು ಯುವಜನರನ್ನೂ ಸೆಳೆದು, ವಿಜ್ಞಾನದೆಡೆಗೆ ಗಮನ ಹರಿಯುವಂತೆ ಮಾಡಿದ ಇವರಿಗೆ ಅಭಿನಂದನೆಗಳು ಸಲ್ಲಿಸಲೇಬೇಕು.

## ❖ ಮತ್ತೆರಡು ಪಂಪ್ಡ್ ಸ್ಟೋರೇಜ್ ಯೋಜನೆ ಜಾರಿಗೆ ಪ್ರಸ್ತಾವ

**ಸಂದರ್ಭ: 'ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆ ಅಲ್ಲದೇ ಬೆಳಗಾವಿ ಜಿಲ್ಲೆ ಸವದತ್ತಿ ಮತ್ತು ಬಳ್ಳಾರಿ ಜಿಲ್ಲೆಯಲ್ಲಿ ಪಂಪ್ಡ್ ಸ್ಟೋರೇಜ್ ಯೋಜನೆ ಕೈಗೆತ್ತಿ ಕೊಳ್ಳುವ ಪ್ರಸ್ತಾವ ಇದೆ' ಎಂದು ಕರ್ನಾಟಕ ವಿದ್ಯುತ್ ನಿಗಮ ನಿಯಮಿತದ (ಕೆಪಿಸಿಎಲ್) ಕಾರ್ಯಪಾಲಕ ಎಂಜಿನಿಯರ್ ವಿ.ಎಂ.ವಿಜಯ ತಿಳಿಸಿದರು.**

- 'ಬೆಳಗಾವಿ ಜಿಲ್ಲೆಯ ಸವದತ್ತಿಯಲ್ಲಿ 1,600 ಮೆಗಾ ವ್ಯಾಟ್ ಸಾಮರ್ಥ್ಯದ ಪಂಪ್ಡ್ ಸ್ಟೋರೇಜ್ ಯೋಜನೆಯ ಪ್ರಸ್ತಾವಕ್ಕೆ ಸಮ್ಮತಿ ಸಿಕ್ಕಿದೆ' ಎಂದು ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. 'ರಾಜ್ಯದಲ್ಲಿ ವಿದ್ಯುತ್‌ಗೆ ಬೇಡಿಕೆ ಹೆಚ್ಚುವ ಅವಧಿಯಲ್ಲಿ ತಡೆರಹಿತ ವಿದ್ಯುತ್ ಪೂರೈಕೆಗೆ 2 ಸಾವಿರ ಮೆಗಾ ವ್ಯಾಟ್ ಸಾಮರ್ಥ್ಯದ ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆ ಕೈಗೆತ್ತಿಕೊಳ್ಳಲಾಗುತ್ತಿದೆ. ಆದರೆ, ಈ ಯೋಜನೆಗೆ ಪರಿಸರ, ವನ್ಯಜೀವಿ ಮತ್ತು ಅರಣ್ಯ ಅನುಮತಿ ಸಿಗುವುದು ಬಾಕಿ ಇದೆ' ಎಂದರು.

## ❖ 'ಡ್ರಗ್ಸ್ ಕಡಿವಾಣಕ್ಕೆ ಎಎನ್‌ಟಿಎಫ್'

**ಸಂದರ್ಭ: ಪೊಲೀಸ್ ಕಾನ್‌ಸ್ಟೆಬಲ್‌ಗಳಿಗೆ ಪೀಕ್- ಕ್ಯಾಪ್ ವಿತರಣೆ: 8,500 ಪೊಲೀಸ್ ಕಾನ್‌ಸ್ಟೆಬಲ್ ಗಳ ನೇಮಕಾತಿಗೆ ಸರ್ಕಾರ ಅನುಮತಿ ನೀಡಿದೆ. ಇನ್ನೊಂದು ವಾರದಲ್ಲಿ ಈ ಕುರಿತು ಅಧಿಸೂಚನೆ ಹೊರಡಿಸಲಾಗುವುದುಜಿ.ಪರಮೇಶ್ವರ, ಗೃಹ ಸಚಿವ.**

- ಮಾದಕವಸ್ತು (ಡ್ರಗ್ಸ್) ಪೂರೈಕೆ, ಮಾರಾಟ ದಂಧೆಗೆ ಸಂಪೂರ್ಣ ಕಡಿವಾಣ ಹಾಕಲು ರಾಷ್ಟ್ರೀಯ ಮಾದಕವಸ್ತು ನಿಯಂತ್ರಣ ಘಟಕದ (ಎನ್‌ಸಿಬಿ) ಮಾದರಿಯಲ್ಲಿಯೇ ರಾಜ್ಯದಲ್ಲೂ 'ಮಾದಕ ದ್ರವ್ಯ ವಿರೋಧಿ ಕಾರ್ಯಪಡೆ' (ಎಎನ್‌ಟಿಎಫ್) ಅಸ್ತಿತ್ವಕ್ಕೆ ಬಂದಿದೆ.
- ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಗೃಹ ಸಚಿವ ಜಿ.ಪರಮೇಶ್ವರ ಅವರು ಕಾರ್ಯಪಡೆಗೆ ಚಾಲನೆ ನೀಡಿದರು. ಇದೇ ವೇಳೆ ಪೊಲೀಸ್ ಸಿಬ್ಬಂದಿಗೆ 'ಪೀಕ್ ಕ್ಯಾಪ್' ವಿತರಿಸಿದರು.
- ಸಿದ್ದರಾಮಯ್ಯ ಮಾತನಾಡಿ, 'ಎಡಿಜಿಪಿ ಮಟ್ಟದ ಅಧಿಕಾರಿ ಕಾರ್ಯಪಡೆ ಮುಖ್ಯಸ್ಥರಾಗಿ ಇರಲಿದ್ದು, ಎಸ್‌ಪಿ, ಎಎಸ್‌ಪಿ, ಡಿವೈಎಸ್‌ಪಿ ಸೇರಿ 56 ಸಿಬ್ಬಂದಿ ಕಾರ್ಯನಿರ್ವಹಿಸಲಿದ್ದಾರೆ' ಎಂದರು.
- 'ಐದು ದಶಕಗಳ ಬಳಿಕ ಪೊಲೀಸ್ ಸಿಬ್ಬಂದಿಯ ಕ್ಯಾಪ್‌ನಲ್ಲಿ ಬದಲಾವಣೆ ಆಗಿದೆ. ಕಾರ್ಯಕ್ಷಮತೆಯೂ ಬದಲಾಗಬೇಕು. ದಕ್ಷವಾಗಿ ಕಾರ್ಯ ನಿರ್ವಹಿಸುವ ಮೂಲಕ ಸಮಾಜದಲ್ಲಿ ನಡೆಯುವ ಅಪರಾಧಗಳನ್ನು ಕಡಿಮೆ ಮಾಡಬೇಕು ಮತ್ತು ಸರ್ಕಾರಕ್ಕೂ ಒಳ್ಳೆಯ ಹೆಸರು ತರಬೇಕು' ಎಂದು ಕಿವಿಮಾತು ಹೇಳಿದರು.

Dr. Rajkumar IAS/KAS Academy

- ‘ರಾಜ್ಯದ ಪೊಲೀಸ್ ಕಾನ್‌ಸ್ಟೆಬಲ್ ಹಾಗೂ ಹೆಡ್ ಕಾನ್‌ಸ್ಟೆಬಲ್‌ಗಳು ಧರಿಸುತ್ತಿದ್ದ ‘ಸ್ಲೋಚ್ ಹ್ಯಾಟ್’ ಬದಲಿಗೆ ‘ಪೀಕ್ ಕ್ಯಾಪ್’ಗಳನ್ನು ಆಯ್ಕೆ ಮಾಡಿದ್ದು ನಾನೇ. ಇಂಡಿಯಾ ಜಸ್ಟೀಸ್ ವರದಿಯಂತೆ ಅತ್ಯುತ್ತಮ ಪೊಲೀಸ್ ಪಡೆಗಳಲ್ಲಿ ಕರ್ನಾಟಕ ನಂಬರ್ ಒನ್ ಸ್ಥಾನ ಪಡೆದಿರುವುದು ರಾಜ್ಯದ ಘನತೆ ಹೆಚ್ಚಿಸಿದೆ’ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.
- ಮಂಗಳೂರು ಗಲಭೆಪೀಡಿತ ನಗರವಾಗಿತ್ತು. ಪೊಲೀಸ್ ಅಧಿಕಾರಿ ಗಳನ್ನು ಬದಲಾವಣೆ ಮಾಡಿದ್ದರಿಂದ ನಿಯಂತ್ರಣಕ್ಕೆ ಬಂದಿದೆ. ಕೆಲವು ಪೊಲೀಸರು ರಿಯಲ್ ಎಸ್ಟೇಟ್ ಉದ್ಯಮಿಗಳ ಜತೆ ಶಾಮೀಲಾಗುತ್ತಾರೆ. ಡ್ರಗ್ಸ್ ಪೆಡ್ಲರ್‌ಗಳು, ಯಾರು ರೌಡಿಗಳು ಎಂದು ಗೊತ್ತಿದ್ದರೂ ಅವರನ್ನು ಬಂಧಿಸದೇ ಪೊಲೀಸರು ಬಿಟ್ಟುಬಿಡುತ್ತಾರೆ. ಇವರನ್ನು ಮೊಳಕೆಯಲ್ಲಿ ಚಿವುಟಿ ಹಾಕಬೇಕು. ಇಲ್ಲದಿದ್ದರೆ ದೊಡ್ಡ ಕ್ರಿಮಿನಲ್ ಗಳಾಗುತ್ತಾರೆ ಎಂದು ಎಚ್ಚರಿಸಿದರು. ‘ಅಪರಾಧಿ ಹಾಗೂ ಕ್ರಿಮಿನಲ್‌ಗಳೊಂದಿಗೆ ಸಂಬಂಧ ಇಟ್ಟುಕೊಳ್ಳ ಬಾರದು. ದಿನೇ ದಿನೇ ಪೊಲೀಸರೆಂದರೆ ಕ್ರಿಮಿನಲ್‌ಗಳಿಗೆ ಭಯ ಕಡಿಮೆಯಾ ಗುತ್ತಿದೆ. ಯಾಕೆ ಕಡಿಮೆಯಾಗಿದೆ ಎಂಬುದನ್ನು ಆತ್ಮಾವಲೋಕನ ಮಾಡಿಕೊಳ್ಳಿ’ ಎಂದರು.
- ಡಿ.ಕೆ.ಶಿವಕುಮಾರ್ ಮಾತನಾಡಿ, ‘ಬೆಂಗಳೂರು ನಗರ ಹಾಗೂ ಇತರೆ ನಗರ ಪ್ರದೇಶಗಳಲ್ಲಿ ಪ್ರತಿ ಮನೆಯಲ್ಲಿ ಮನೆಗೆಲಸದವರು, ಚಾಲಕರು, ಕಾವಲುಗಾರರ ಮಾಹಿತಿ ಸಂಗ್ರಹಿಸಿ ಇಟ್ಟುಕೊಳ್ಳಬೇಕು. ಆಗ ಎಷ್ಟೋ ಮಟ್ಟಿಗೆ ಅಪರಾಧ ನಿಯಂತ್ರಣಕ್ಕೆ ಬರುತ್ತದೆ. ನೆರೆ ಮನೆಯ ಆದಿಕೇಶವಲು ಮನೆಯಲ್ಲಿ ಕಳ್ಳತನವಾಗಿ ಎಷ್ಟೋ ದಿನಗಳಾದರೂ ಅವರಿಗೆ ಗೊತ್ತಾಗಿರಲಿಲ್ಲ. ಆಭರಣ ಮಾರಾಟವಾಗಿ ಬೇರೆಯವರು ಧರಿಸಿದ್ದನ್ನು ನೋಡಿದ ಬಳಿಕ ಮನೆಯಲ್ಲಿ ಬಂದು ಹುಡುಕುತ್ತಾರೆ. ಮೂರು ವರ್ಷಗಳ ಬಳಿಕ ಕಳ್ಳತನವಾಗಿದೆ ಎಂದು ತಿಳಿಯಿತು. ಹೀಗಾಗಿ ನೀವು ಪ್ರತಿ ಮನೆಯಲ್ಲಿ ಕೆಲಸ ಮಾಡುವವರ ದಾಖಲೆ ಇಟ್ಟುಕೊಳ್ಳಿ. ಈ ಬಗ್ಗೆ ಆಲೋಚನೆ ಮಾಡಿ’ ಎಂದು ಸಲಹೆ ನೀಡಿದರು.
- ‘ಯಾವುದೇ ಸರ್ಕಾರ ಬಂದರೂ ಆತ್ಮವಿಶ್ವಾಸ ಹಾಗೂ ಕರ್ತವ್ಯ ನಿಷ್ಠೆಯಲ್ಲಿ ರಾಜಿಯಾಗಬಾರದು. ಒಂದು ವೇಳೆ ರಾಜಿ ಮಾಡಿಕೊಂಡರೆ ಸಂಪೂರ್ಣವಾಗಿ ವ್ಯವಸ್ಥೆ ಕುಸಿಯಲಿದೆ. ರಾಜಕಾರಣಿಗಳ ಹಿಂಬಾಲಕರಾದರೇ ಆಗ ನಿಮ್ಮನ್ನು ಯಾರು ನಂಬುತ್ತಾರೆ? ಹೀಗಾಗಿ ಇಂತಹ ಪದ್ಧತಿಗೆ ಅವಕಾಶ ಮಾಡಿಕೊಡಬೇಡಿ’ ಎಂದು ಕಿವಿ ಮಾತು ಹೇಳಿದರು.
- ‘ಬೆಂಗಳೂರಿನಲ್ಲಿ 1.40 ಕೋಟಿ ಜನರಿದ್ದಾರೆ. 1.23 ಕೋಟಿ ವಾಹನಗಳಿವೆ. ಇಂತಹ ಪರಿಸ್ಥಿತಿಯಲ್ಲಿ ರಸ್ತೆ ವಿಸ್ತರಣೆ ಕಷ್ಟವಾಗಿದೆ. ಎಐ ತಂತ್ರಜ್ಞಾನ ಬಳಸಿಕೊಂಡು ಸಂಚಾರ ದಟ್ಟಣೆ ನಿವಾರಣೆಗೆ ಇರುವ ಸಲಹೆಗಳನ್ನು ಸರ್ಕಾರಕ್ಕೆ ಸಲ್ಲಿಸಿ’ ಎಂದು ತಿಳಿಸಿದರು.
- ರಾಜ್ಯ ಪೊಲೀಸ್ ಮಹಾನಿರ್ದೇಶಕ ಎಂ.ಎ.ಸಲೀಂ ಮಾತನಾಡಿ, ‘ಪೊಲೀಸ್ ಇಲಾಖೆಯಲ್ಲಿ ಶೇಕಡ 85ರಷ್ಟು ಸಿಬ್ಬಂದಿಯ ಬಹುವರ್ಷಗಳ ಬೇಡಿಕೆಯನ್ನು ಸರ್ಕಾರ ಈಡೇರಿಸಿದೆ. ಇದರಿಂದ ಸಿಬ್ಬಂದಿಯ ಆತ್ಮವಿಶ್ವಾಸ ಹೆಚ್ಚಾಗಲಿದೆ’ ಎಂದರು.
- ಶಾಸಕ ರಿಜ್ವಾನ್ ಅರ್ಷದ್, ವಿಧಾನಸಭೆಯಲ್ಲಿ ಸರ್ಕಾರದ ಮುಖ್ಯ ಸಚೇತಕ ಅಶೋಕ್ ಪಟ್ಟಣ, ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಡಿಜಿಪಿಗಳಾದ ರಾಮಚಂದ್ರರಾವ್, ಪ್ರಣವ್ ಮೊಹಾಂತಿ ಹಾಜರಿದ್ದರು.

Dr. Rajkumar IAS/KAS Academy

## *'ಸನ್ಮಿತ್ರ' ಪರಿಚಯ*

- ಮಾದಕ ವಸ್ತು ಸೇವನೆ ಪ್ರಕರಣ ದಲ್ಲಿ ಶಿಕ್ಷೆ ಅನುಭವಿಸಿ ಹೊರ ಬಂದ ವ್ಯಕ್ತಿ ಮತ್ತೆ ವ್ಯಸನಕ್ಕೆ ಒಳಗಾಗದಂತೆ ನಿಗಾವಹಿಸಲು ಪೊಲೀಸ್ ಇಲಾಖೆಯು 'ಸನ್ಮಿತ್ರ' ಕಾರ್ಯಕ್ರಮವನ್ನು ಪರಿಚಯಿಸಿದೆ. ಮತ್ತೆ ಡ್ರಗ್ಸ್ ಚಟಕ್ಕೆ ಬೀಳಬಾರದು ಹಾಗೂ ಸಮಾಜದ ಮುಖ್ಯವಾಹಿನಿಗೆ ತರುವ ಸಲುವಾಗಿ ಆ ವ್ಯಕ್ತಿಯ ಮೇಲೆ ನಿಗಾ ಇಡಲು ಪೊಲೀಸ್ ಕಾನ್‌ಸ್ಟೆಬಲ್ ಒಬ್ಬರನ್ನು ನಿಯೋಜಿಸಲಾಗು ತ್ತದೆ. ಮೂರು ವರ್ಷದವರೆಗೆ ಈ ವ್ಯಕ್ತಿಯ ಮೇಲೆ ಪೊಲೀಸರು ನಿಗಾವಹಿಸಲಿದ್ದು, ಅವರಿಗೆ ಚಿಕಿತ್ಸೆ, ಪುನರ್ವಸತಿ ಮತ್ತು ಆರೈಕೆಗೆ ನೆರವು ನೀಡಲಿದ್ದಾರೆ.

## ❖ ಆಂಧ್ರ, ಒಡಿಶಾ ಮೊಂಥಾ ಮೊರೆತ

# ಆಂಧ್ರ, ಒಡಿಶಾ ಮೊಂಥಾ ಮೊರೆತ

ಮಳೆಯ ಋತು ಸರಿದ ಮೇಲೆ ಬಂಗಾಳ ಕೊಲ್ಲಿಯಲ್ಲಿ ಉಂಟಾಗಿರುವ 'ಮೊಂಥಾ' ಚಂಡಮಾರುತವು, ಪೂರ್ವ ಕರಾವಳಿಯ ಹಲವು ರಾಜ್ಯಗಳಲ್ಲಿ ಭಾರಿ ಮಳೆಗೆ ಕಾರಣವಾಗಿದೆ. ಚಂಡಮಾರುತವು ಆಂಧ್ರ ಪ್ರದೇಶದ ಕರಾವಳಿಗೆ ಅಪ್ಪಳಿಸಿದ್ದು, ನೆರೆಯ ಒಡಿಶಾದಲ್ಲಿ ಹೆಚ್ಚಿನ ಪರಿಣಾಮ ಬೀರುವ ಅಂದಾಜು ಇದೆ. ತಮಿಳುನಾಡು ಮತ್ತು ಜಾರ್ಖಂಡ್ ರಾಜ್ಯಗಳೂ ಇದರ ಪರಿಣಾಮಕ್ಕೆ ಒಳಪಟ್ಟಿವೆ. ಹವಾಮಾನ ಇಲಾಖೆಯ ಮುನ್ಸೂಚನೆಯ ಆಧಾರದಲ್ಲಿ ರಾಜ್ಯ ಸರ್ಕಾರಗಳು ಚಂಡಮಾರುತದ ಪರಿಣಾಮಗಳನ್ನು ಎದುರಿಸಲು ವ್ಯಾಪಕ ಸಿದ್ಧತೆ ಮಾಡಿಕೊಂಡಿವೆ

ಪ್ರಜಾವಾಣಿ ವಾರ್ತೆ

**ಮೊಂಥಾ** ಚಂಡಮಾರುತವು ಅಬ್ಬರಿಸಲು ಶುರುವಿಟ್ಟಿದೆ. ರಸ್ತೆಗಳ ಇಕ್ಕೆಲಗಳಲ್ಲಿ ಬುಡ ಮೇಲಾಗಿ ಬಿದ್ದ ಮರಗಳು. ಸಮುದ್ರ ತೀರದಲ್ಲಿ ಕಟ್ಟೆಚ್ಚರ. ಎತ್ತರದ ಅಲೆಗಳಿಗೆ ಮುಖ ಮಾಡಿ ಓಡುವ ಜನರನ್ನು ಕೂಗಿ ಕರೆದು, ಮನೆಗೆ ಕಳುಹಿಸುತ್ತಿರುವ ಪೊಲೀಸರು. ಸಮುದ್ರ ತೀರದ ರಸ್ತೆಗಳ ಮೇಲೆ ಹರಿದು ಸಾಗುತ್ತಿರುವ ಸಮುದ್ರದ ಅಲೆಗಳು. ಹೀಗೆ ಹರಿಯುವಾಗ ರಸ್ತೆಗಳ ಮೇಲೆಲ್ಲಾ ಕಲ್ಲುಗಳನ್ನು ಹೊತ್ತು ತರುತ್ತಿರುವ ಅಲೆಗಳು. ತೀರದಲ್ಲಿ ವಿರಮಿಸುತ್ತಿರುವ ಮೀನುಗಾರಿಕೆ ದೋಣಿಗಳು... 'ಮೊಂಥಾ'ದಿಂದಾಗಿ ಆಂಧ್ರ ಪ್ರದೇಶ ಮತ್ತು ಒಡಿಶಾ ರಾಜ್ಯಗಳ ಕರಾವಳಿ ಜಿಲ್ಲೆಗಳಲ್ಲಿ ಕಂಡುಬಂದ ಚಿತ್ರಣವಿದು.


ಈ ರಾಜ್ಯಗಳು 'ಮೊಂಥಾ'ವನ್ನು ಎದುರಿಸಲು ಸಜ್ಜುಗೊಂಡಿವೆ. ಆಂಧ್ರ ಪ್ರದೇಶದ 19 ಜಿಲ್ಲೆಗಳಲ್ಲಿ ಭಾರತೀಯ ಹವಾಮಾನ ಇಲಾಖೆಯು ರೆಡ್ ಅಲರ್ಟ್ ಘೋಷಿಸಿದೆ. ಚಂಡಮಾರುತದ ಕಾರಣ ಕರಾವಳಿ ಜಿಲ್ಲೆಗಳಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಭಾರಿ ವಾಹನ ಸಂಚಾರವನ್ನು ಆಂಧ್ರ ಪ್ರದೇಶದಲ್ಲಿ ರದ್ದು ಮಾಡಲಾಗಿದೆ. ಒಡಿಶಾಕ್ಕೆ ಚಂಡಮಾರುತವು ಹೊಸ ವಿಚಾರವೇನೂ ಅಲ್ಲ. ಭಾರಿ ಚಂಡಮಾರುತಗಳನ್ನು ಎದುರಿಸಿರುವ ಅನುಭವಿಯಾದ ಒಡಿಶಾವು 'ಮೊಂಥಾ'ಕ್ಕೂ ಸಕಲ ತಯಾರಿ ನಡೆಸಿದೆ. ಎರಡೂ ರಾಜ್ಯಗಳಲ್ಲಿ 'ಮೊಂಥಾ' ಪರಿಣಾಮದ ಜಿಲ್ಲೆಗಳಲ್ಲಿನ ಪ್ರವಾಸಿತಾಣಗಳಿಗೆ ಪ್ರವಾಸಿಗರನ್ನು ನಿಷೇಧಿಸಲಾಗಿದೆ.

### ಹೇಗಿದೆ ತಯಾರಿ?

- ಚಂಡಮಾರುತಕ್ಕೆ ಆಂಧ್ರಪ್ರದೇಶ, ಒಡಿಶಾ ಮತ್ತು ತೆಲಂಗಾಣದಲ್ಲಿನ ಇಲಾಖೆಯ ಸಿದ್ಧತೆಯನ್ನು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಮಂಗಳವಾರ ಪರಿಶೀಲನೆ ನಡೆಸಿದರು. ಪೂರ್ವ ಕರಾವಳಿ ರೈಲ್ವೆ ವಲಯದ ಹಲವು ರೈಲುಗಳ ಸಂಚಾರವನ್ನು ಮಂಗಳವಾರ ರದ್ದು ಮಾಡಲಾಗಿತ್ತು
- ವಿಶಾಖಪಟ್ಟಣ ವಿಮಾನ ನಿಲ್ದಾಣದಿಂದ ಹೊರಡಬೇಕಿದ್ದ 32 ವಿಮಾನಗಳ (ದೇಶೀಯ ಹಾಗೂ ಅಂತರರಾಷ್ಟ್ರೀಯ) ಹಾರಾಟವನ್ನು ಮಂಗಳವಾರ ರದ್ದು ಮಾಡಲಾಯಿತು
- ಆಂಧ್ರಪ್ರದೇಶ ಮತ್ತು ಒಡಿಶಾ ಸೇರಿದಂತೆ ಚಂಡಮಾರುತ ಬಾಧಿತ ರಾಜ್ಯಗಳಲ್ಲಿ ಒಟ್ಟು 45 ತಂಡಗಳನ್ನು ಎನ್‌ಡಿಆರ್‌ಎಫ್ ನಿಯೋಜಿಸಲಾಗಿದೆ
- ಆಂಧ್ರ ಪ್ರದೇಶದಲ್ಲಿ ಸಮುದ್ರದ ಅಲೆಗಳು 4.7 ಮೀ. ಎತ್ತರಕ್ಕೆ ಏಳಲಿವೆ ಎಂದು ಸಾಗರ ಮಾಹಿತಿ ಸೇವೆಗಳ ರಾಷ್ಟ್ರೀಯ ಕೇಂದ್ರ ಹೇಳಿದೆ

### ಚಂಡಮಾರುತದ ಹಾದಿ...

ಬಂಗಾಳ ಕೊಲ್ಲಿಯ ಪಶ್ಚಿಮ–ಕೇಂದ್ರ ಪ್ರದೇಶದಲ್ಲಿ ಉಂಟಾದ ವಾಯುಭಾರ ಕುಸಿತವು ಚಂಡಮಾರುತವಾಗಿ ಪರಿವರ್ತನೆಗೊಂಡು ಉತ್ತರ–ವಾಯವ್ಯ ದಿಕ್ಕಿನತ್ತ ಸಾಗುತ್ತಿದೆ. ಮಂಗಳವಾರ ಗಾಳಿಯ ವೇಗದ ತೀವ್ರತೆ ಹೆಚ್ಚಾಗಿತ್ತು. ಬುಧವಾರ (ಅ.29) ವೇಗ ಕಡಿಮೆಯಾಗಲಿದ್ದು, ಗುರುವಾರ (ಅ.30) ದುರ್ಬಲಗೊಳ್ಳಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ




**ಆಂಧ್ರ ಪ್ರದೇಶ**

| | | | |
|---|---|---|---|
| **22** ಬಾಧಿತ ಜಿಲ್ಲೆಗಳು | **3,778** ಭಾರಿ ಮಳೆಯಾಗುವ ನಿರೀಕ್ಷೆ ಇರುವ ಗ್ರಾಮಗಳ ಸಂಖ್ಯೆ | **3,174** 22 ಜಿಲ್ಲೆಗಳಲ್ಲಿ ಸ್ಥಾಪಿಸಿರುವ ಪುನರ್‌ವಸತಿ ಕೇಂದ್ರಗಳು | **787** ಹತ್ತಿರದ ಆಸ್ಪತ್ರೆಗೆ ದಾಖಲಿಸಲಾದ ಹೆರಿಗೆ ದಿನಾಂಕವು ಹತ್ತಿರದಲ್ಲಿ ಇರುವ ಗರ್ಭಿಣಿಯರ ಸಂಖ್ಯೆ |
| **₹3,000** ನಿರಾಶ್ರಿತ ಶಿಬಿರಗಳಲ್ಲಿ ಇರುವ ಕುಟುಂಬಗಳಿಗೆ ಸರ್ಕಾರದಿಂದ ಧನಸಹಾಯ. ಈ ಕುಟುಂಬಗಳಿಗೆ 25 ಕೆ.ಜಿ ಅಕ್ಕಿಯನ್ನೂ ನೀಡಲಾಗುತ್ತದೆ | **24** ಚಂಡಮಾರುತ ಬಾಧಿತ ಜಿಲ್ಲೆಗಳಲ್ಲಿನ ಸ್ಥಿತಿಗತಿ ಅರಿಯಲು ಬಳಕೆ ಮಾಡಲಾಗುತ್ತಿರುವ ಡ್ರೋನ್‌ಗಳ ಸಂಖ್ಯೆ | **69 ಲಕ್ಷ** ಮಳೆಯಾಗುವ ಜಿಲ್ಲೆಗಳ ರೈತರಿಗೆ ಬೆಳೆಗಳನ್ನು ರಕ್ಷಿಸಿಕೊಳ್ಳುವ ಸಂಬಂಧ ಕಳುಹಿಸಲಾಗಿರುವ ಎಚ್ಚರಿಕೆ ಸಂದೇಶಗಳ ಸಂಖ್ಯೆ | |

**ಒಡಿಶಾ**

| | | | |
|---|---|---|---|
| **15** ಬಾಧಿತ ಜಿಲ್ಲೆಗಳು | **2,000** ನಿರಾಶ್ರಿತ ಕೇಂದ್ರಗಳ ಸ್ಥಾಪನೆ | **11,396** ನಿರಾಶ್ರಿತ ಕೇಂದ್ರಗಳಲ್ಲಿ ಇರುವ ಜನರ ಸಂಖ್ಯೆ | **2,693** ಹತ್ತಿರದ ಆಸ್ಪತ್ರೆಗೆ ದಾಖಲಿಸಲಾದ ಹೆರಿಗೆ ದಿನಾಂಕವು ಹತ್ತಿರದಲ್ಲಿ ಇರುವ ಗರ್ಭಿಣಿಯರ ಸಂಖ್ಯೆ |

### ಎರಡನೇ ಚಂಡಮಾರುತ

ಈ ವರ್ಷ ದೇಶದ ಪಶ್ಚಿಮ ಹಾಗೂ ಪೂರ್ವ ಕರಾವಳಿಯಲ್ಲಿ ಹಲವು ಬಾರಿ ವಾಯುಭಾರ ಕುಸಿತ ಉಂಟಾಗಿದ್ದರೂ ಅದು ಚಂಡಮಾರುತವಾಗಿ ಪರಿವರ್ತನೆಯಾಗಿದ್ದು ಎರಡು ಬಾರಿ ಮಾತ್ರ. ಈ ತಿಂಗಳ ಮೊದಲ ವಾರದಲ್ಲಿ ಅರಬ್ಬೀ ಸಮುದ್ರದಲ್ಲಿ ಉಂಟಾದ 'ಶಕ್ತಿ' ಮೊದಲನೆಯದ್ದಾದರೆ, ಈಗಿನ 'ಮೊಂಥಾ' ಎರಡನೆಯದ್ದು. 'ಶಕ್ತಿ' ಚಂಡಮಾರುತವು ಪ್ರತಿ ಗಂಟೆಗೆ 100 ಕಿ.ಮೀಗಿಂತಲೂ ಹೆಚ್ಚು ವೇಗದಲ್ಲಿ ಮಹಾರಾಷ್ಟ್ರ, ಗುಜರಾತ್, ಗೋವಾ ಕರಾವಳಿಗೆ ಅಪ್ಪಳಿಸಿತ್ತು. ಗುಜರಾತ್ ಕರಾವಳಿ ಪ್ರದೇಶದಲ್ಲಿ ಇದರ ತೀವ್ರತೆ ಹೆಚ್ಚಾಗಿತ್ತು. ರಾಜ್ಯಗಳು ಮುನ್ನೆಚ್ಚರಿಕೆ ವಹಿಸಿದ್ದರಿಂದ ಹೆಚ್ಚಿನ ಹಾನಿಯಾಗಿರಲಿಲ್ಲ.



ಮೀನುಗಾರಿಕೆಗೆ ನಿಷೇಧ ಹೇರಿರುವುದರಿಂದ ಚೆನ್ನೈನಲ್ಲಿ ಲಂಗರು ಹಾಕಿದ ಮೀನುಗಾರಿಕಾ ದೋಣಿಗಳು

### ಅರಬ್ಬೀ ಸಮುದ್ರದಲ್ಲೂ ವಾಯುಭಾರ ಕುಸಿತ

ಬಂಗಾಳ ಕೊಲ್ಲಿಯಲ್ಲಿ 'ಮೊಂಥಾ' ಚಂಡಮಾರುತದ ವೇಗ ತೀವ್ರಗೊಳ್ಳುವ ಹೊತ್ತಿನಲ್ಲೇ ಪಶ್ಚಿಮದ ಅರಬ್ಬೀ ಸಮುದ್ರದಲ್ಲೂ ವಾಯುಭಾರ ಕುಸಿತ ಕಂಡುಬಂದಿದೆ. ಇದರ ಪರಿಣಾಮದಿಂದಾಗಿ ಕರ್ನಾಟಕದ ಕರಾವಳಿ ಭಾಗದಲ್ಲಿ ಮಳೆಯಾಗುತ್ತಿದೆ. ಆದರೆ, ಗಾಳಿಯ ತೀವ್ರತೆ ಹೆಚ್ಚಿಲ್ಲ. ಮಂಗಳವಾರ ಬೆಳಿಗ್ಗೆ ಸಮುದ್ರದ ಪೂರ್ವ–ಕೇಂದ್ರ ಪ್ರದೇಶದಲ್ಲಿ ಕಂಡು ಬಂದಿದ್ದ ವಾಯುಭಾರ ಕುಸಿತವು ಪ್ರತಿ ಗಂಟೆಗೆ 7 ಕಿ.ಮೀ ವೇಗದಲ್ಲಿ ಈಶಾನ್ಯದತ್ತ ಸಾಗಿದೆ. ಮುಂದಿನ 24 ಗಂಟೆಗಳಲ್ಲಿ ಅದೇ ದಿಕ್ಕಿನಲ್ಲಿ ಸಾಗುವ ಅಂದಾಜು ಇದೆ. ಪ್ರತಿ ಗಂಟೆಗೆ 46ರಿಂದ 65 ಕಿ.ಮೀವರೆಗೆ ವೇಗದಲ್ಲಿ ಗಾಳಿ ಬೀಸಲಿದೆ ಎಂದು ಹವಾಮಾನ ಇಲಾಖೆ ಹೇಳಿದೆ.



ಮೊಂಥಾ ಚಂಡಮಾರುತದ ಕಾರಣಕ್ಕೆ ಆಂಧ್ರ ಪ್ರದೇಶದ ವಿಶಾಖಪಟ್ಟಣದಲ್ಲಿ ಸಮುದ್ರ ಪ್ರಕ್ಷುಬ್ಧಗೊಂಡಿದೆ —ಪಿಟಿಐ ಚಿತ್ರ

### ಚಂಡಮಾರುತಗಳಿಗೆ ಹೇಗೆ ಹೆಸರಿಡಲಾಗುತ್ತದೆ?

ನವದೆಹಲಿಯ ಪ್ರಾದೇಶಿಕ ವಿಶೇಷ ಹವಾಮಾನ ಕೇಂದ್ರವು (ಆರ್‌ಎಸ್‌ಎಂಸಿ) ಉತ್ತರ ಹಿಂದೂ ಮಹಾಸಾಗರದಲ್ಲಿ ಕಾಣಿಸಿಕೊಳ್ಳುವ ಚಂಡಮಾರುತಗಳ ನಾಮಕರಣವನ್ನು ಮಾಡುತ್ತದೆ. ಆರ್‌ಎಸ್‌ಎಂಸಿಯನ್ನು ವಿಶ್ವ ಹವಾಮಾನ ಸಂಸ್ಥೆ (ಡಬ್ಲ್ಯುಎಂಒ) ಮತ್ತು ವಿಶ್ವಸಂಸ್ಥೆಯ ಆರ್ಥಿಕ ಮತ್ತು ಸಾಮಾಜಿಕ ಆಯೋಗದ (ಏಷ್ಯಾ ಮತ್ತು ಪೆಸಿಫಿಕ್) ಉಸ್ತುವಾರಿಯಲ್ಲಿ ಭಾರತೀಯ ಹವಾಮಾನ ಇಲಾಖೆ (ಐಎಂಡಿ) ನಿರ್ವಹಿಸುತ್ತದೆ.

ಚಂಡಮಾರುತಗಳ ಹೆಸರುಗಳನ್ನು ಆ ಪ್ರದೇಶದ ವ್ಯಾಪ್ತಿಯಲ್ಲಿರುವ 13 ದೇಶಗಳು ಸರತಿ ಪ್ರಕಾರ ನಿರ್ಧರಿಸುತ್ತವೆ. ಈ ಪ್ರದೇಶದಲ್ಲಿರುವ ಭಾರತ, ಬಾಂಗ್ಲಾದೇಶ, ಮಾಲ್ದೀವ್ಸ್, ಮ್ಯಾನ್ಮಾರ್, ಒಮಾನ್, ಪಾಕಿಸ್ತಾನ, ಶ್ರೀಲಂಕಾ, ಥಾಯ್ಲೆಂಡ್, ಯೆಮನ್, ಇರಾನ್, ಕತಾರ್, ಸೌದಿ ಅರೇಬಿಯಾ ಮತ್ತು ಯುಎಇ ಮುಂತಾದ ದೇಶಗಳು ಹೆಸರುಗಳನ್ನು ಸೂಚಿಸುತ್ತವೆ. ಪ್ರತಿ ದೇಶವೂ 13 ಹೆಸರುಗಳ ಪಟ್ಟಿಯನ್ನು ಪೂರ್ವಭಾವಿಯಾಗಿಯೇ ಸಲ್ಲಿಸಿರುತ್ತದೆ. ಹೊಸ ಚಂಡಮಾರುತ ಕಾಣಿಸಿಕೊಂಡಾಗ, 169 ಹೆಸರುಗಳ ಪಟ್ಟಿಯಿಂದ ಒಂದು ಹೆಸರನ್ನು ಸರತಿಯ ಪ್ರಕಾರ ಐಎಂಡಿ ಆಯ್ಕೆ ಮಾಡುತ್ತದೆ.

ಥಾಯ್ ಭಾಷೆಯಲ್ಲಿ ಮೊಂಥಾ ಎಂದರೆ, ಸುಂದರವಾದ ಅಥವಾ ಸುವಾಸನೆಯುಕ್ತ ಹೂವು.

## ❖ ದೆಹಲಿ: ಮೋಡಬಿತ್ತನೆ'

**ಸಂದರ್ಭ: ಚಳಿಗಾಲದಲ್ಲಿ ದೆಹಲಿಯಲ್ಲಿ ಉಂಟಾಗುವ ವಾಯುಮಾಲಿನ್ಯ ತಡೆಗಟ್ಟುವುದಕ್ಕಾಗಿ ಐಐಟಿ–ಕಾನ್ಪುರದ ಸಹಯೋಗದಲ್ಲಿ ದೆಹಲಿ ಸರ್ಕಾರ ನಗರದ ಸುತ್ತಮುತ್ತ ಲಿನ ಪ್ರದೇಶದಲ್ಲಿ ಮೋಡಬಿತ್ತನೆ ಕಾರ್ಯ ಕೈಗೊಂಡಿದೆ.**

- ಮುಂದಿನ ದಿನಗಳಲ್ಲಿ ಇನ್ನಷ್ಟು ಪ್ರದೇಶದಲ್ಲಿ ಈ ಪ್ರಯೋಗವನ್ನು ವಿಸ್ತರಿಸಲಾಗುವುದು ಎಂದು ಪರಿಸರ ಇಲಾಖೆ ಸಚಿವ ಮಜಿಂದರ್ ಸಿಂಗ್ ಸಿರ್ಸಾ ಹೇಳಿದ್ದಾರೆ.
- ಮೋಡಬಿತ್ತನೆ ಮಾಡುವ ವಿಮಾನವು ಕಾನ್ಪುರದಿಂದ ಹಾರಾಟ ಆರಂಭಿಸಿ, ದೆಹಲಿ ಸುತ್ತಮುತ್ತಲಿನ ಪ್ರದೇಶಗಳಾದ ಬುರಾರಿ, ಉತ್ತರ ಕರೋಲ್ ಬಾಘ್ ಮತ್ತು ಮಯೂರ್ ವಿಹಾರ ಪ್ರದೇಶಗಳಲ್ಲಿ ಕಾರ್ಯಾಚರಣೆ ಪೂರ್ಣಗೊಳಿಸಿ, ಮೀರತ್ ವಾಯ ನೆಲೆಯಲ್ಲಿ ಇಳಿಯಿತು.
- 'ಎಂಟು ಗನ್‌ಗಳ ಮೂಲಕ ಅರ್ಧ ಗಂಟೆಗಳ ಕಾಲ ರಾಸಾಯನಿಕವನ್ನು ವಾತಾವರಣಕ್ಕೆ ಬಿಡುಗಡೆ ಮಾಡಿತು' ಎಂದು ಸಚಿವ ಸಿರ್ಸಾ ವಿಡಿಯೊ ಮೂಲಕ ಮಾಹಿತಿ ನೀಡಿದ್ದಾರೆ.
- ಮೋಡ ಬಿತ್ತನೆಯ ಎರಡನೇ ಪ್ರಯೋಗ ದೆಹಲಿಯ ಹೊರವಲಯದಲ್ಲಿ ನಡೆಸಲಾಗುತ್ತದೆ. ಇಂಥ ಸುಮಾರು ಹತ್ತು ಪ್ರಯೋಗಗಳನ್ನು ದೆಹಲಿಯ ಸುತ್ತಮುತ್ತ ನಡೆಸಲು ಉದ್ದೇಶಿಸಲಾಗಿದೆ ಎಂದು ಅವರು ವಿವರಿಸಿದರು.
- 'ಮಾಲಿನ್ಯವನ್ನು ತಗ್ಗಿಸಲು ಸರ್ಕಾರ ತೆಗೆದುಕೊಂಡ ಒಂದು ದೊಡ್ಡ ಹೆಜ್ಜೆಯಾಗಿದೆ. ಈ ಪ್ರಯೋಗಗಳು ಯಶಸ್ವಿಯಾದರೆ, ದೀರ್ಘಾವಧಿಯಲ್ಲಿ ಯೋಜನೆಯನ್ನು ರೂಪಿಸಲಿದ್ದೇವೆ' ಎಂದು ಸಿರ್ಸಾ ಭವಿಷ್ಯದ ಯೋಜನೆಯ ಬಗ್ಗೆ ಮಾಹಿತಿ ನೀಡಿದರು.
- ಕಳೆದ ವಾರ ಬುರಾರಿ ಪ್ರದೇಶದಲ್ಲಿ ಪರೀಕ್ಷಾರ್ಥವಾಗಿ ಮೋಡಬಿತ್ತನೆ ಕಾರ್ಯವನ್ನು ನಡೆಸಲಾಗಿತ್ತು. ಮೋಡಬಿತ್ತನೆಗೆ ಬಳಸುವ ಸಿಲ್ವರ್ ಅಯೋಡೈಡ್ ಮತ್ತು ಸೋಡಿಯಂ ಕ್ಲೋರೈಡ್ ಸಂಯುಕ್ತಗಳ ರಾಸಾಯನಿಕ ವನ್ನು ಅಲ್ಪ ಪ್ರಮಾಣದಲ್ಲಿ ಸಿಂಪಡಿಸಲಾಗಿತ್ತು.

## ❖ ಕೈಗಾರಿಕಾ ಉತ್ಪಾದನೆ ಪ್ರಮಾಣ ಸ್ಥಿರ

**ಸಂದರ್ಭ: ಜಿಎಸ್‌ಟಿ ಇಳಿಕೆ, ತಯಾರಿಕಾ ವಲಯದ ಚುರುಕಿನ ಚಟುವಟಿಕೆ ಪರಿಣಾಮ: ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ದರ ಪರಿಷ್ಕರಣೆ ಹಾಗೂ ಹಬ್ಬಗಳ ಸಂದರ್ಭದಲ್ಲಿನ ಬೇಡಿಕೆ ಹೆಚ್ಚಳವು ತಯಾರಿಕಾ ವಲಯದ ಮೇಲೆ ಸಕಾರಾತ್ಮಕ ಪರಿಣಾಮ ಉಂಟುಮಾಡಿದೆ.**

- ತಯಾರಿಕಾ ವಲಯದಲ್ಲಿ ಉತ್ತಮ ಪ್ರಮಾಣದ ಚಟುವಟಿಕೆ ಕಂಡುಬಂದ ಕಾರಣದಿಂದಾಗಿ ದೇಶದ ಕೈಗಾರಿಕಾ ಉತ್ಪಾದನೆಯ ಬೆಳವಣಿಗೆ ಪ್ರಮಾಣವು ಸೆಪ್ಟೆಂಬರ್‌ನಲ್ಲಿ ಶೇಕಡ 4ರಷ್ಟು ಆಗಿದೆ.
- ಹಿಂದಿನ ವರ್ಷದ ಸೆಪ್ಟೆಂಬರ್‌ನಲ್ಲಿ ಕೈಗಾರಿಕಾ ಉತ್ಪಾದನೆಯ ಸೂಚ್ಯಂಕವು (ಐಐಪಿ) ಶೇ 3.2ರಷ್ಟು ಬೆಳವಣಿಗೆ ಕಂಡಿತ್ತು ಎಂದು ಕೇಂದ್ರ ರಾಷ್ಟ್ರೀಯ ಸಾಂಖ್ಯಿಕ ಕಚೇರಿ (ಎನ್‌ಎಸ್‌ಒ) ಮಂಗಳವಾರ ಬಿಡುಗಡೆ ಮಾಡಿರುವ ಅಂಕಿ–ಅಂಶಗಳು ಹೇಳುತ್ತಿವೆ.
- 'ಜಿಎಸ್‌ಟಿ ದರದಲ್ಲಿ ಆಗಿರುವ ಪರಿಷ್ಕರಣೆ, ಹಬ್ಬಗಳ ಋತು ಬೇಗನೆ ಶುರುವಾಗಿದ್ದುದು ಒಟ್ಟಾರೆ ಬೇಡಿಕೆಯನ್ನು ಹೆಚ್ಚಿಸಿರುವಂತಿವೆ. ಅಕ್ಟೋಬರ್ ತಿಂಗಳಲ್ಲಿಯೂ ತಯಾರಿಕಾ ವಲಯದ ಚಟುವಟಿಕೆಗಳು ಹೆಚ್ಚಿನ ಮಟ್ಟದಲ್ಲಿ ಇರುವ ನಿರೀಕ್ಷೆ ಇದೆ' ಎಂದು ಐಸಿಆರ್‌ಎ ಸಂಸ್ಥೆಯ ಮುಖ್ಯ ಅರ್ಥ ಶಾಸ್ತ್ರಜ್ಞೆ ಅದಿತಿ ನಾಯರ್ ಹೇಳಿದ್ದಾರೆ.
- ಜಿಎಸ್‌ಟಿ ದರ ಪರಿಷ್ಕರಣೆಯು ಸಣ್ಣ ಮೊತ್ತದ, ದಿನಬಳಕೆಯ ಉತ್ಪನ್ನ ಗಳಿಗೆ ಬೇಡಿಕೆಯನ್ನು ಉತ್ತಮ ಮಟ್ಟದಲ್ಲಿ ಇರಿಸುತ್ತದೆ. ಆದರೆ ಹೆಚ್ಚಿನ ಬೆಲೆಯ ಉತ್ಪನ್ನಗಳಿಗೆ ಬೇಡಿಕೆಯು ಉಳಿದು ಕೊಳ್ಳುತ್ತದೆಯೇ ಎಂಬುದನ್ನು ಕಾದುನೋಡಬೇಕಿದೆ ಎಂದು ನಾಯರ್ ಹೇಳಿದ್ದಾರೆ.

Dr. Rajkumar IAS KAS Academy

- ಸೆಪ್ಟೆಂಬರ್‌ನಲ್ಲಿ ಐಐಪಿ ಹೆಚ್ಚಳ ಕಂಡಿದ್ದರೂ, ಪ್ರಸಕ್ತ ಹಣಕಾಸು ವರ್ಷದ ಮೊದಲಾರ್ಧದಲ್ಲಿ (ಏಪ್ರಿಲ್ –ಸೆಪ್ಟೆಂಬರ್ ಅವಧಿ) ಕೈಗಾರಿಕಾ ಉತ್ಪಾದನೆಯು ಶೇ 3ರಷ್ಟು ಮಾತ್ರ ಬೆಳವಣಿಗೆ ಕಂಡಿದೆ. ಹಿಂದಿನ ವರ್ಷದ ಮೊದಲಾರ್ಧದಲ್ಲಿ ಇದು ಶೇ 4.1ರಷ್ಟು ಬೆಳವಣಿಗೆ ದಾಖಲಿಸಿತ್ತು.

## ❖ 'ಚಾಟ್‌ಜಿಪಿಟಿ ಗೊ' ಒಂದು ವರ್ಷ ಉಚಿತ

**ಸಂದರ್ಭ: ಹೆಚ್ಚಿನ ಪ್ರಶ್ನೆಗಳನ್ನು ಕೇಳಲು ಹಾಗೂ ಹೆಚ್ಚು ಚಿತ್ರಗಳನ್ನು ಸೃಷ್ಟಿಸಿಕೊಳ್ಳಲು ಅವಕಾಶ ನೀಡುವ 'ಚಾಟ್‌ಜಿಪಿಟಿ ಗೊ' ಆವೃತ್ತಿಯನ್ನು ಭಾರತದ ಬಳಕೆ ದಾರರಿಗೆ1 ವರ್ಷದ ಅವಧಿಗೆ ಉಚಿತ ವಾಗಿ ನೀಡುವುದಾಗಿ ಓಪನ್‌ಎಐ ಕಂಪನಿ ಮಂಗಳವಾರ ಹೇಳಿದೆ.**

- ನವೆಂಬರ್ 4ರಿಂದ ಆರಂಭವಾಗುವ ಸೀಮಿತ ಅವಧಿಯ ಕೊಡುಗೆ ಸಂದರ್ಭದಲ್ಲಿ ಹೆಸರು ನೋಂದಾಯಿಸಿಕೊಳ್ಳುವ ಬಳಕೆ ದಾರರಿಗೆ ಮಾತ್ರ ಇದು ಸಿಗಲಿದೆ.
- 'ಚಾಟ್‌ಜಿಪಿಟಿ ಗೊ' ಆವೃತ್ತಿಯನ್ನು ಚಂದಾ ಆಧಾರದಲ್ಲಿ ಓಪನ್‌ಎಐ ಕಂಪನಿಯು ಆಗಸ್ಟ್‌ನಲ್ಲಿ ಅನಾವರಣ ಮಾಡಿದೆ. ಅನಾವರಣಗೊಳಿಸಿದ ಒಂದೇ ತಿಂಗಳಲ್ಲಿ ಭಾರತದಲ್ಲಿ ಚಾಟ್‌ಜಿಪಿಟಿ ಚಂದಾದಾರರ ಸಂಖ್ಯೆಯು ಎರಡು ಪಟ್ಟಿಗಿಂತ ಹೆಚ್ಚಳ ಕಂಡಿದೆ. ಓಪನ್‌ಎಐ ಪಾಲಿಗೆ ಭಾರತವು ಎರಡನೆಯ ಅತಿದೊಡ್ಡ ಮಾರುಕಟ್ಟೆಯಾಗಿದೆ. 'ಚಾಟ್‌ಜಿಪಿಟಿ ಗೊ' ಆವೃತ್ತಿಗೆ ಈಗಾಗಲೇ ಚಂದಾದಾರರಾಗಿರುವ ಭಾರತೀಯರು 12 ತಿಂಗಳ ಉಚಿತ ಕೊಡುಗೆಗೆ ಅರ್ಹರು.

## ❖ 'ರಷ್ಯಾ ತೈಲ ಖರೀದಿ ನಿಲ್ಲದು'


**ಸಂದರ್ಭ: ಇಂಡಿಯನ್ ಆಯಿಲ್ ಕಾರ್ಪೊರೇಷನ್ (ಐಒಸಿ) ಹಾಗೂ ಭಾರತದ ಇತರ ತೈಲ ಸಂಸ್ಕರಣಾ ಕಂಪನಿಗಳು ರಷ್ಯಾದಿಂದ ಕಚ್ಚಾ ತೈಲ ಖರೀದಿಸುವುದನ್ನು ಸಂಪೂರ್ಣವಾಗಿ ಕೈಬಿಡುವ ಸಾಧ್ಯತೆ ಇಲ್ಲ.**

- ಅಮೆರಿಕವು ನಿರ್ಬಂಧ ವಿಧಿಸಿರುವುದು ರಷ್ಯಾದ ಕೆಲವು ಕಂಪನಿಗಳ ಮೇಲೆ; ನಿರ್ಬಂಧವು ರಷ್ಯಾದ ಕಚ್ಚಾ ತೈಲದ ಮೇಲೆ ಇಲ್ಲ. ಹೀಗಾಗಿ ನಿರ್ಬಂಧ ಇಲ್ಲದ ಕಂಪನಿಗಳ ಮೂಲಕ ಖರೀದಿಯು ಮುಂದುವರಿಯುವ ಸಾಧ್ಯತೆ ಇದೆ.
- ರೊಸ್ನೆಫ್ಟ್ ಸೇರಿ ರಷ್ಯಾದ ನಾಲ್ಕು ಕಂಪನಿಗಳ ಮೇಲೆ ಇದುವರೆಗೆ ನಿರ್ಬಂಧ ಹೇರಲಾಗಿದೆ. ಆದರೆ ರೊಸ್ನೆಫ್ಟ್ ಕಂಪನಿಯು ತೈಲ ಉತ್ಪಾದಕ ಅಲ್ಲ; ಅದು ಉತ್ಪಾದಕರಿಂದ ಕಚ್ಚಾ ತೈಲವನ್ನು ಗ್ರಾಹಕರಿಗೆ ಒದಗಿಸಿಕೊಡುವ ಕಂಪನಿ. ರೊಸ್ನೆಫ್ಟ್ ಮಾಡುವ ಕೆಲಸವನ್ನು ರಷ್ಯಾದಲ್ಲಿ ಇತರ ಕಂಪನಿಗಳು ಮಾಡಬಹುದು, ಆಗ ಕಚ್ಚಾ ತೈಲದ ಪೂರೈಕೆಗೆ ಅಡ್ಡಿ ಇರುವುದಿಲ್ಲ ಎಂದು ಅಧಿಕಾರಿಗಳು ವಿವರಿಸಿದ್ದಾರೆ.
- ರೊಸ್ನೆಫ್ಟ್ ಮತ್ತು ಲುಕಾಯಿಲ್ ಕಂಪನಿಗಳ ಮೇಲೆ ನಿರ್ಬಂಧವಿದೆ. ರಷ್ಯಾದ ಕಚ್ಚಾ ತೈಲದ ಮೇಲೆ ನಿರ್ಬಂಧ ಇಲ್ಲ. ನಿರ್ಬಂಧಕ್ಕೆ ಗುರಿಯಾಗಿರದ ರಷ್ಯಾದ ಇತರ ಕಂಪನಿಗಳಿಂದ ಖರೀದಿಯನ್ನು ಪರಿಗಣಿಸಬಹುದು ಎಂದು ಅಧಿಕಾರಿಗಳು ಹೇಳಿದ್ದಾರೆ.
- 'ನಿರ್ಬಂಧದ ನಿಯಮಗಳನ್ನು ಪಾಲಿಸಲಾಗುತ್ತದೆ. ಆದರೆ ರಷ್ಯಾದಿಂದ ಕಚ್ಚಾ ತೈಲ ಖರೀದಿಸುವುದನ್ನು ನಾವು ನಿಲ್ಲಿಸುವುದಿಲ್ಲ. ರಷ್ಯಾದ ಕಚ್ಚಾ ತೈಲದ ಮೇಲೆ ನಿರ್ಬಂಧ ಇಲ್ಲ' ಎಂದು ಐಒಸಿ ನಿರ್ದೇಶಕ ಅನುಜ್ ಜೈನ್ ಹೇಳಿದ್ದಾರೆ.

## ❖ ಸ್ಮೃತಿ ಜೀವನಶ್ರೇಷ್ಠ ರೇಟಿಂಗ್

- ಭಾರತ ತಂಡದ ಆರಂಭಿಕ ಆಟಗಾರ್ತಿ ಸ್ಮೃತಿ ಮಂದಾನ ಅವರು ಐಸಿಸಿ ಏಕದಿನ ಕ್ರಿಕೆಟ್ ಬ್ಯಾಟಿಂಗ್ ರ್ಯಾಂಕಿಂಗ್‌ನಲ್ಲಿ ಅಗ್ರಸ್ಥಾನ ಭದ್ರಪಡಿಸಿಕೊಂಡಿದ್ದಾರೆ. ತವರಿನಲ್ಲಿ ನಡೆಯುತ್ತಿರುವ ವಿಶ್ವಕಪ್ ಟೂರ್ನಿಯಲ್ಲಿ ಮಿಂಚುತ್ತಿರುವ ಅವರು ತಮ್ಮ ವೃತ್ತಿಜೀವನದಲ್ಲೇ ಅತ್ಯುತ್ತಮ ರೇಟಿಂಗ್ ಪಾಯಿಂಟ್ಸ್ ಗಳಿಸಿದ್ದಾರೆ.
- 29 ವರ್ಷದ ಎಡಗೈ ಬ್ಯಾಟರ್ ಮಂದಾನ ತಮ್ಮ ಕೊನೆಯ ಎರಡು ಪಂದ್ಯಗಳಲ್ಲಿ ಕ್ರಮವಾಗಿ ನ್ಯೂಜಿಲೆಂಡ್ ವಿರುದ್ಧ 109 ರನ್ ಮತ್ತು ಬಾಂಗ್ಲಾದೇಶ ವಿರುದ್ಧ ಔಟಾಗದೇ 34 ರನ್ ಗಳಿಸಿದ್ದಾರೆ. ಇದರೊಂದಿಗೆ ರೇಟಿಂಗ್ ಪಾಯಿಂಟ್ಸ್‌ಗಳನ್ನು 828ಕ್ಕೆ ಹೆಚ್ಚಿಸಿಕೊಂಡಿದ್ದಾರೆ.

IAS/KAS Academy



## ❖ ‘ಭಾರತದ ಜೊತೆ ವ್ಯಾಪಾರ ಒಪ್ಪಂದ’

**ಸಂದರ್ಭ:ಅಮೆರಿಕವು ಭಾರತದ ಜೊತೆ ವಾಣಿಜ್ಯ ಒಪ್ಪಂದ ಮಾಡಿಕೊಳ್ಳಲಿದೆ ಎಂದು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಒಪ್ಪಂದದ ವಿಚಾರವಾಗಿ ಅಮೆರಿಕ ಮತ್ತು ಭಾರತದ ಅಧಿಕಾರಿಗಳ ನಡುವೆ ಮಾತುಕತೆ ನಡೆಯುತ್ತಿದೆ.**

- ಏಷ್ಯಾ ಪೆಸಿಫಿಕ್ ಆರ್ಥಿಕ ಸಹಕಾರ – ಸಿಇಒ ಶೃಂಗದಲ್ಲಿ ಮಾತನಾಡಿದ ಟ್ರಂಪ್ ಅವರು ಭಾರತದ ಪ್ರಧಾನಿ ನರೇಂದ್ರ ಮೋದಿ ಅವರ ಬಗ್ಗೆ ತಮಗೆ ‘ಅಪಾರ ಗೌರವ ಹಾಗೂ ಪ್ರೀತಿ’ ಇರುವುದಾಗಿ ಹೇಳಿದ್ದಾರೆ. ಪ್ರಧಾನಿ ಮೋದಿ ಅವರ ಜೊತೆಗಿನ ತಮ್ಮ ಸ್ನೇಹ ಬಹಳ ದೊಡ್ಡದು ಎಂದೂ ಟ್ರಂಪ್ ಹೇಳಿಕೊಂಡಿದ್ದಾರೆ.ಆದರೆ ವಾಣಿಜ್ಯ ಒಪ್ಪಂದದ ಕುರಿತಾಗಿ ಅವರು ಹೆಚ್ಚಿನ ಮಾಹಿತಿ ನೀಡಲಿಲ್ಲ.
- ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರನ್ನು ಕ್ವಾಲಾಲಂಪುರದಲ್ಲಿ ಭೇಟಿಯಾಗಿದ್ದ ಭಾರತದ ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್ ಅವರು, ವ್ಯಾಪಾರ ಒಪ್ಪಂದದ ಕುರಿತಾಗಿ ಮಾತುಕತೆ ನಡೆಸಿದ್ದಾರೆ ಎನ್ನಲಾಗಿದೆ.
- ಆದರೆ, ರಷ್ಯಾದಿಂದ ಕಚ್ಚಾ ತೈಲ ಖರೀದಿಸುತ್ತಿರುವುದಕ್ಕಾಗಿ ಭಾರತದ ಮೇಲೆ ಹೆಚ್ಚುವರಿಯಾಗಿ ವಿಧಿಸಿರುವ ಶೇ 25ರಷ್ಟು ತೆರಿಗೆಯನ್ನು ರದ್ದುಪಡಿಸುವ ಬಗ್ಗೆ ಅಮೆರಿಕದಿಂದ ಭರವಸೆ ಸಿಕ್ಕಿರುವ ಸೂಚನೆ ಇಲ್ಲ. ಅಮೆರಿಕದ ಜೊತೆಗಿನ ವ್ಯಾಪಾರ ಒಪ್ಪಂದವು ಅಂತಿಮ ಹಂತಕ್ಕೆ ಬಹಳ ಹತ್ತಿರದಲ್ಲಿದೆ ಎಂದು ಭಾರತದ ಅಧಿಕಾರಿಯೊಬ್ಬರು ಕಳೆದ ವಾರ ಹೇಳಿದ್ದಾರೆ.

## ❖ ಶಿರಸಿಯಲ್ಲಿ ಹಿಮಾಲಯದ ಯಾಕ್

**ಸಂದರ್ಭ: ಹಿಮಾಲಯದಂಥ ತಂಪಾದ, ಎತ್ತರದ ಪರ್ವತ ಪ್ರದೇಶಗಳಲ್ಲಿ ಕಾಣಸಿಗುವ ಚಮರಿಮೃಗಗಳನ್ನು (ಯಾಕ್) ಶಿರಸಿಯ ಅನಾಥ ಪ್ರಾಣಿಗಳ ಆರೈಕೆ ಕೇಂದ್ರವಾದ ಪೆಟ್ ಪ್ಲಾನೆಟ್ ಕೇಂದ್ರದಲ್ಲಿ ಪೋಷಿಸಲಾಗುತ್ತಿದೆ.**

- 'ಫೆಬ್ರುವರಿಯಲ್ಲಿ ಹಿಮಾಚಲ ಪ್ರದೇಶಕ್ಕೆ ತೆರಳಿದ್ದ ವೇಳೆ ಅಲ್ಲಿನ ಜನರಿಗೆ ಪೆಟ್ ಪ್ಲಾನೆಟ್ ಬಗ್ಗೆ ತಿಳಿಸಿದ್ದೆ. ಅಲ್ಲಿನ ನಿವಾಸಿಗಳು ಹಣದ ಬದಲು ಚಮರಿಮೃಗಗಳನ್ನು ಕೊಡುಗೆ ನೀಡು ತ್ತೇವೆ. ಅವುಗಳನ್ನು ನೋಡಲು ಪ್ರವಾಸಿಗರಿಗೂ ಖುಷಿಯಾಗುತ್ತದೆ ಎಂದು ಮೂರು ಚಮರಿಮೃಗಗಳನ್ನು ವಾಹನದಲ್ಲಿ ಕಳುಹಿಸಿದ್ದು, ಎಲ್ಲವೂ ಆರೋಗ್ಯವಾಗಿವೆ. ಇಲ್ಲಿನ ವಾತಾವರಣಕ್ಕೆ ಹೊಂದಿಕೊಂಡಿವೆ' ಎಂದು ಪ್ಲಾನೆಟ್‌ನ ಪ್ರಮುಖ ರಾಜೇಂದ್ರ ಶಿರ್ಸಿಕರ ಮಾಹಿತಿ ಹಂಚಿಕೊಂಡರು.



ಶಿರಸಿಯ ‘ಪೆಟ್ ಪ್ಲಾನೆಟ್’ನಲ್ಲಿ ವಾಸವಾಗಿರುವ ಚಮರಿಮೃಗಗಳು

- ’14 ವರ್ಷ ಮತ್ತು 10 ತಿಂಗಳ ಹೆಣ್ಣು ಮತ್ತು 2 ವರ್ಷದ ಒಂದು ಗಂಡು ಚಮರಿ ಮೃಗವಿದೆ. ಹಿಮಾಚಲದ ವಾತಾ ವರಣದ ಅನುಭವಕ್ಕಾಗಿ ಶೆಡ್ ಫ್ಯಾನ್ ಅಳವಡಿಸ ಲಾಗಿದೆ. ಪಶ್ಚಿಮಘಟ್ಟದ ವಾತಾವರಣಕ್ಕೆ ಬಹುತೇಕ ಎಲ್ಲ ಪ್ರಬೇಧಗಳ ಪ್ರಾಣಿಗಳು ಹೊಂದಿಕೊಳ್ಳುತ್ತವೆ’ ಎಂದರು.

## ❖ ವಿಜಯಪುರದಲ್ಲಿ ಲಘು ಭೂಕಂಪನ

**ಸಂದರ್ಭ: ನಗರದಲ್ಲಿ 28th Oct 11.41, ರಾತ್ರಿ 12.38 ಮತ್ತು 29th Oct ಬೆಳಿಗ್ಗೆ 5.30ಕ್ಕೆ ಮೂರು ಬಾರಿ ಸರಣಿ ಲಘು ಭೂಕಂಪನದ ಅನುಭವವಾಗಿದೆ.**

- 'ಗುಡುಗಿದ ಶಬ್ದ ಕೇಳಿಬಂದಿದೆ. ಜೊತೆಗೆ ಭೂಮಿ ಕಂಪಿಸಿದ್ದು, ಭಯದಿಂದ ಜನರು ಮನೆಯಿಂದ ಹೊರಗೆ ಓಡಿಬಂದರು. ಆತಂಕದಲ್ಲೇ ರಾತ್ರಿ ಕಳೆದರು. ಸಿಸಿಟಿವಿ ಕ್ಯಾಮೆರಾಗಳಲ್ಲಿ ಈ ದೃಶ್ಯ ಸೆರೆಯಾಗಿದೆ.
- 'ರಿಕ್ಟರ್ ಮಾಪಕದಲ್ಲಿ ಭೂಕಂಪನದ ತೀವ್ರತೆ ದಾಖಲಾಗಿಲ್ಲ ಎಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ನಿರ್ವಹಣಾ ಕೇಂದ್ರದ ವಿಜ್ಞಾನಿಗಳು ತಿಳಿಸಿದ್ದಾರೆ' ಎಂದು ಜಿಲ್ಲಾಡಳಿತ ತಿಳಿಸಿದೆ.

## ❖ 'ಕ್ವಾಂಟಮ್ ಸಿಟಿ: ಹೂಡಿಕೆಗೆ ಸ್ವಿಸ್ ಕಂಪನಿಗಳ ಆಸಕ್ತಿ'

**ಸಂದರ್ಭ: ಬೆಂಗಳೂರಿನಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿರುವ ಕ್ವಾಂಟಮ್ ಸಿಟಿಯಲ್ಲಿ ಸಹಭಾಗಿತ್ವಕ್ಕೆ ಸ್ವಿಡ್ಜರ್ಲೆಂಡ್‌ನ ಕಂಪನಿಗಳೂ ಸೇರಿ ಜಾಗತಿಕ ಮಟ್ಟದ ಹಲವು ಕಂಪನಿಗಳು ಆಸಕ್ತಿ ತೋರಿವೆ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ಹೇಳಿದರು.**

- ಸ್ವಿಡ್ಜರ್ಲೆಂಡ್‌ನಲ್ಲಿ ಈಚೆಗೆ ನಡೆದ ಸ್ವಿಸ್‌ನೆಕ್ಸ್ ಕ್ವಾಂಟಮ್ ಸಮಾವೇಶದಲ್ಲಿ ಭಾಗಿಯಾಗಿದ್ದರ ಬಗ್ಗೆ ಸುದ್ದಿಗೋಷ್ಠಿಯಲ್ಲಿ ಅವರು ಮಾಹಿತಿ ನೀಡಿದರು. 'ಕ್ವಾಂಟಮ್ ಕ್ಷೇತ್ರದಲ್ಲಿ ಹೂಡಿಕೆಗೆ ಇರುವ ಅವಕಾಶಗಳು ಹಾಗೂ ಈ ಕ್ಷೇತ್ರದ ಅಭಿವೃದ್ಧಿಗೆ ಕರ್ನಾಟಕದಲ್ಲಿ ಇರುವ ಅವಕಾಶಗಳ ಬಗ್ಗೆ ಸಮಾವೇಶದಲ್ಲಿ ಭಾಗಿಯಾಗಿದ್ದ ಕಂಪನಿಗಳಿಗೆ ವಿವರಿಸಲಾಗಿದೆ' ಎಂದು ಹೇಳಿದರು.
- 'ದೇಶದ ಮೊದಲ ಕ್ವಾಂಟಮ್ ಸಮಾವೇಶ ಬೆಂಗಳೂರಿನಲ್ಲಿ ನಡೆದಿತ್ತು ಮತ್ತು ಅದರಲ್ಲಿ ಘೋಷಿಸಿದ್ದಂತೆ ಕ್ವಾಂಟಮ್ ಸಿಟಿ ಸ್ಥಾಪನೆಗೆ ರಾಜ್ಯ ಸರ್ಕಾರವು ಈಗಾಗಲೇ ಜಮೀನು ಮಂಜೂರು ಮಾಡಿದೆ. ಜತೆಗೆ ಕ್ವಾಂಟಮ್ ತಂತ್ರಜ್ಞಾನದಲ್ಲಿ ಪರಿಣಿತರನ್ನು ರೂಪಿಸುವ ಉದ್ದೇಶದಿಂದ ಭಾರತೀಯ ವಿಜ್ಞಾನ ಸಂಸ್ಥೆಯ ಸಹಯೋಗದಲ್ಲಿ ಕೋರ್ಸ್‌ಗಳನ್ನು ಆರಂಭಿಸಲಾಗಿದೆ. ಈ ಅಂಶಗಳು ಕ್ವಾಂಟಮ್ ಕ್ಷೇತ್ರದ ಜಾಗತಿಕ ಮಟ್ಟದ ಕಂಪನಿಗಳನ್ನು ಆಕರ್ಷಿಸಿವೆ' ಎಂದರು.
- 'ಈ ಪ್ರವಾಸದ ವೇಳೆ ಕ್ವಾಂಟಮ್ ಬೇಸೆಲ್, ಸಿಇಆರ್‌ಎನ್, ಇಟಿಎಚ್ ಝ್ಯೂರಿಚ್ ಆ್ಯಂಡ್ ಝ್ಯೂರಿಚ್ ಇನ್‌ಸ್ಟ್ರುಮೆಂಟ್ಸ್ ಸಂಸ್ಥೆಗಳಿಗೆ ಭೇಟಿ ನೀಡಲಾಗಿತ್ತು. ಬೆಂಗಳೂರಿನ ಕ್ವಾಂಟಮ್ ಸಿಟಿಯಲ್ಲಿ ಹೂಡಿಕೆ ಮಾಡುವಂತೆ ಈ ಕಂಪನಿಗಳಿಗೆ ಆಹ್ವಾನ ನೀಡಲಾಗಿದೆ. ಕಂಪನಿಗಳ ಪ್ರತಿನಿಧಿಗಳು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ' ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

## ❖ 'ಜಿಡಿಪಿ ಪ್ರಗತಿ ಶೇ 7ರಷ್ಟು ನಿರೀಕ್ಷೆ'

**ಸಂದರ್ಭ: 'ಪ್ರಸಕ್ತ ಆರ್ಥಿಕ ವರ್ಷದಲ್ಲಿ ದೇಶದ ಜಿಡಿಪಿ ಬೆಳವಣಿಗೆ ಶೇ 7ಕ್ಕೆ ತಲುಪುವ ಸಾಧ್ಯತೆ ಇದೆ' ಎಂದು ಕೇಂದ್ರ ಸರ್ಕಾರದ ಮುಖ್ಯ ಆರ್ಥಿಕ ಸಲಹೆಗಾರ (ಸಿಇಎ) ವಿ. ಅನಂತ ನಾಗೇಶ್ವರನ್ ಹೇಳಿದ್ದಾರೆ.**

- ಮೂರು ಜಾಗತಿಕ ರೇಟಿಂಗ್ ಸಂಸ್ಥೆಗಳು ಇತ್ತೀಚೆಗೆ ದೇಶದ ರೇಟಿಂಗ್ ಹೆಚ್ಚಿಸಿವೆ. ದೇಶವು ಇದೇ ಪಥದಲ್ಲಿ ಮುಂದುವರಿದರೆ ಶೀಘ್ರ 'ಎ' ರೇಟಿಂಗ್ ವರ್ಗಕ್ಕೆ ಸೇರ್ಪಡೆ ಆಗಬಹುದು ಎಂದು ನಡೆದ ಕಾರ್ಯಕ್ರಮದಲ್ಲಿ ಹೇಳಿದ್ದಾರೆ.
- ಕೇಂದ್ರ ಸರ್ಕಾರ ಮತ್ತು ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ತೆಗೆದುಕೊಂಡ ಕ್ರಮಗಳು ದೇಶದ ಆರ್ಥಿಕತೆಯನ್ನು 'ಆರಾಮದಾಯಕ ಸ್ಥಾನದಲ್ಲಿ' ಇರಿಸುತ್ತವೆ. ಆದಾಯ ತೆರಿಗೆ ವಿನಾಯಿತಿ ಮತ್ತು ಜಿಎಸ್‌ಟಿ ಇಳಿಕೆಯಂತಹ ಆರ್ಥಿಕ ಕ್ರಮಗಳು ದೇಶದ ಆರ್ಥಿಕ ಪ್ರಗತಿಯನ್ನು ಹೆಚ್ಚಿಸಲಿವೆ ಎಂದು ಹೇಳಿದ್ದಾರೆ.

- ಪ್ರಸಕ್ತ ಆರ್ಥಿಕ ವರ್ಷದಲ್ಲಿ ದೇಶದ ಜಿಡಿಪಿ ಬೆಳವಣಿಗೆ ಶೇ 6.3ಕ್ಕೆ ಇಳಿಕೆ ಆಗಬಹುದು ಎಂದು ಫೆಬ್ರುವರಿಯಲ್ಲಿ ಅನಂತ ನಾಗೇಶ್ವರನ್ ಹೇಳಿದ್ದರು. ಅಮೆರಿಕದ ಸುಂಕದಿಂದ ಜಿಡಿಪಿ ಶೇ 6ಕ್ಕೆ ಇಳಿಯುವ ನಿರೀಕ್ಷೆ ಇದೆ ಎಂದು ಹೇಳಿದ್ದರು.

## ❖ ಇಂದಿನಿಂದ ಸ್ಟಾರ್‌ಲಿಂಕ್ ಪರೀಕ್ಷಾರ್ಥ ಪ್ರಯೋಗ

**ಸಂದರ್ಭ: ಉದ್ಯಮಿ ಇಲಾನ್ ಮಸ್ಕ್ ಒಡೆತನದ ಸ್ಟಾರ್‌ಲಿಂಕ್, ದೇಶದಲ್ಲಿ ಉಪಗ್ರಹ ಆಧಾರಿತ ಬ್ರಾಡ್‌ಬ್ಯಾಂಡ್ ಸೇವೆ ಆರಂಭಿಸುವುದಕ್ಕೆ ಸಂಬಂಧಿಸಿದ ಪರೀಕ್ಷಾರ್ಥ ಪ್ರಯೋಗವನ್ನು ಅಕ್ಟೋಬರ್ 30 ಮತ್ತು 31ರಂದು ಮುಂಬೈನಲ್ಲಿ ನಡೆಸಲಿದೆ ಎಂದು ಮೂಲಗಳು ತಿಳಿಸಿವೆ.**

- ಕಾನೂನು ಜಾರಿ ಪ್ರಾಧಿಕಾರಗಳ ಸಮಕ್ಷಮದಲ್ಲಿ ಈ ಪರೀಕ್ಷಾರ್ಥ ಪ್ರಯೋಗ ನಡೆಸಲಿದೆ. ಇದು ಸ್ಟಾರ್ ಲಿಂಕ್‌ಗೆ ಹಂಚಿಕೆ ಮಾಡಿರುವ ತಾತ್ಕಾಲಿಕ ತರಂಗಾತರವನ್ನು ಆಧರಿಸಿದೆ ಎಂದು ತಿಳಿಸಿವೆ.
- ಸ್ಟಾರ್‌ಲಿಂಕ್ ಭಾರತದಲ್ಲಿ ಉಪಗ್ರಹ ಆಧಾರಿತ ಇಂಟರ್‌ನೆಟ್ ಸೇವೆ ಆರಂಭಿಸಲು ಈ ಪರೀಕ್ಷಾರ್ಥ ಪ್ರಯೋಗ ಕಡ್ಡಾಯವಾಗಿದೆ. ಸ್ಟಾರ್‌ಲಿಂಕ್ ತನ್ನ ವಾಣಿಜ್ಯ ಸೇವೆ ಆರಂಭಿಸುವುದಕ್ಕೂ ಮುನ್ನ ಅನುಮತಿ ಪಡೆಯುವುದು ಅತ್ಯವಶ್ಯಕವಾಗಿದೆ.

## ❖ ಸಕ್ಕರೆ ರಫ್ತಿಗೆ ಅನುಮತಿ ಸಾಧ್ಯತೆ

**ಸಂದರ್ಭ: ದಾಸ್ತಾನು ಹೆಚ್ಚಿರುವ ಕಾರಣ ರಫ್ತು ಅನುಮತಿಗೆ ಪರಿಶೀಲನೆ: ಕೇಂದ್ರ ಸರ್ಕಾರವು 2025–26ನೇ ಮಾರುಕಟ್ಟೆ ವರ್ಷದಲ್ಲಿ ಸಕ್ಕರೆ ರಫ್ತಿಗೆ ಅವಕಾಶ ನೀಡುವ ಬಗ್ಗೆ ಪರಿಶೀಲನೆ ನಡೆಸಿದೆ. ಕಾರ್ಖಾನೆಗಳು ಎಥೆನಾಲ್ ಉತ್ಪಾದನೆಗೆ ಬಳಸಿದ ಸಕ್ಕರೆಯ ಪ್ರಮಾಣವು ನಿರೀಕ್ಷೆಗಿಂತ ಕಡಿಮೆ ಆಗಿದ್ದ ಕಾರಣದಿಂದಾಗಿ, ಸಕ್ಕರೆ ದಾಸ್ತಾನು ಹೆಚ್ಚಿದೆ. ಹೀಗಾಗಿ ರಫ್ತಿಗೆ ಅವಕಾಶ ಸಿಗುವ ಸಾಧ್ಯತೆ ಇದೆ.**

- 2024–25ರಲ್ಲಿ ದೇಶದ ಸಕ್ಕರೆ ಕಾರ್ಖಾನೆಗಳು 34 ಲಕ್ಷ ಟನ್ ಸಕ್ಕರೆಯನ್ನು ಮಾತ್ರ ಎಥೆನಾಲ್ ಉತ್ಪಾದನೆಗೆ ಬಳಸಿಕೊಂಡವು. ಆ ವರ್ಷದಲ್ಲಿ ಕಾರ್ಖಾನೆಗಳು 45 ಲಕ್ಷ ಟನ್ ಸಕ್ಕರೆಯನ್ನು ಎಥೆನಾಲ್ ಉತ್ಪಾದನೆಗೆ ಬಳಸುವ ನಿರೀಕ್ಷೆ ಇತ್ತು.
- ಎಥೆನಾಲ್‌ಗೆ ಸಕ್ಕರೆ ಬಳಕೆ ಕಡಿಮೆಯಾದ ಪರಿಣಾಮವಾಗಿ 2025–26ನೇ ಮಾರುಕಟ್ಟೆ ವರ್ಷದ ಆರಂಭದಲ್ಲಿ ಸಕ್ಕರೆ ದಾಸ್ತಾನು ಹೆಚ್ಚಿನ ಮಟ್ಟದಲ್ಲಿದೆ ಎಂದು ಅವರು ತಿಳಿಸಿದ್ದಾರೆ. ಪ್ರತಿ ವರ್ಷದ ಅಕ್ಟೋಬರ್‌ನಿಂದ ಸೆಪ್ಟೆಂಬರ್‌ವರೆಗಿನ ಅವಧಿಯನ್ನು ಮಾರುಕಟ್ಟೆ ವರ್ಷ ಎಂದು ಪರಿಗಣಿಸಲಾಗುತ್ತದೆ.
- **2025–26ರಲ್ಲಿ ಸಕ್ಕರೆ ಉತ್ಪಾದನೆಯು 3.4 ಕೋಟಿ ಟನ್ ಆಗುವ ನಿರೀಕ್ಷೆ ಇದೆ. ದೇಶಿ ಮಾರುಕಟ್ಟೆಯಲ್ಲಿ ವಾರ್ಷಿಕ ಬೇಡಿಕೆಯು 2.85 ಕೋಟಿ ಟನ್ ಇರಲಿದೆ**.
- ಸಕ್ಕರೆ ರಫ್ತಿಗೆ ಅವಕಾಶ ಕಲ್ಪಿಸಬೇಕು ಎಂದು ಕಾರ್ಖಾನೆಗಳು ಆಗ್ರಹಿಸುತ್ತಿವೆ. ಈ ಕುರಿತು ಚೋಪ್ರಾ ಅವರನ್ನು ಪ್ರಶ್ನಿಸಿದಾಗ 'ನಮ್ಮಲ್ಲಿ ಸಕ್ಕರೆ ದಾಸ್ತಾನು ಹೆಚ್ಚಿರುವುದು ನಿಜ... ರಫ್ತಿಗೆ ಅವಕಾಶ ಕಲ್ಪಿಸುವುದನ್ನು ನಾವು ಪರಿಶೀಲಿಸು ತ್ತಿದ್ದೇವೆ' ಎಂದು ಉತ್ತರಿಸಿದ್ದಾರೆ.
- ಈ ವಿಚಾರವಾಗಿ ತೀರ್ಮಾನವು ಶೀಘ್ರವೇ ಆಗಬಹುದು ಎಂದು ಅವರು ಸೂಚ್ಯವಾಗಿ ಹೇಳಿದ್ದಾರೆ. ತೀರ್ಮಾನ ತೆಗೆದುಕೊಳ್ಳಲು ಸಚಿವರ ಸಮಿತಿಯೊಂದು ಮುಂದಿನ ವಾರ ಸಭೆ ಸೇರುವ ಸಾಧ್ಯತೆ ಇದೆ.
- ಕಳೆದ ಮಾರುಕಟ್ಟೆ ವರ್ಷದಲ್ಲಿ 10 ಲಕ್ಷ ಟನ್ ಸಕ್ಕರೆ ರಫ್ತಿಗೆ ಅನುಮತಿ ನೀಡಲಾಗಿತ್ತು. ಆದರೆ ಆ ವರ್ಷದಲ್ಲಿ ದೇಶದಿಂದ ಒಟ್ಟು 8 ಲಕ್ಷ ಟನ್ ಸಕ್ಕರೆಯನ್ನು ರಫ್ತು ಮಾಡಲಾಗಿದೆ.

Dr. Rajkumar IAS Academy

## ❖ ಪಿಎಂ–ಶ್ರೀ ಯೋಜನೆ ಅನುಷ್ಠಾನಕ್ಕೆ ತಡೆ

**ಸಂದರ್ಭ: ರಾಜ್ಯದಲ್ಲಿ ‘ಪ್ರಧಾನಮಂತ್ರಿ ಸ್ಕೂಲ್ ಫಾರ್ ರೈಸಿಂಗ್ ಇಂಡಿಯಾ’ (ಪಿಎಂ–ಶ್ರೀ) ಯೋಜನೆ ಅನುಷ್ಠಾನಗೊಳಿಸುವ ನಿರ್ಧಾರವನ್ನು ತಡೆಹಿಡಿಯಲು ಕೇರಳ ಸರ್ಕಾರ ನಿರ್ಧರಿಸಿದೆ. ಯೋಜನೆಗೆ ಸಿಪಿಐ ತೀವ್ರ ಆಕ್ಷೇಪ ವ್ಯಕ್ತಪಡಿಸುತ್ತಿರುವ ಕಾರಣ ಈ ನಿರ್ಧಾರಕ್ಕೆ ಬಂದಿದೆ.**

- ‘ಏಳು ಮಂದಿ ಸದಸ್ಯರನ್ನು ಒಳಗೊಂಡ ಸಂಪುಟ ಉಪ ಸಮಿತಿಯು ಯೋಜನೆಯನ್ನು ಪರಿಶೀಲಿಸಲಿದೆ. ಸಮಿತಿಯ ವರದಿ ಆಧಾರದಲ್ಲಿ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು’ ಎಂದು ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರು ತಿಳಿಸಿದರು.
- ಉಪ ಸಮಿತಿ ಪರಿಶೀಲನೆ ನಂತರವೇ ಪಿಎಂ–ಶ್ರೀ ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕ್ರಮ ಕೈಗೊಳ್ಳಬೇಕು ಎಂದು ಶಿಕ್ಷಣ ಇಲಾಖೆಗೆ ಪತ್ರದ ಮೂಲಕ ತಿಳಿಸಲಾಗಿದೆ.

## ❖ ‘ಮೊಂಥಾ’ ಚಂಡಮಾರುತ: ತಗ್ಗಿದ ಅಬ್ಬರ

**ಸಂದರ್ಭ: ‘ಮೊಂಥಾ ಚಂಡಮಾರುತದ ತೀವ್ರತೆ ತಗ್ಗಿದೆ ಎಂದು’ ಎಂದು ಭಾರತೀಯ ಹವಾಮಾನ ಇಲಾಖೆ ಬುಧವಾರ ಹೇಳಿದೆ. ಚಂಡಮಾರುತದ ಪರಿಣಾಮವು ಆಂಧ್ರ ಪ್ರದೇಶ ಮತ್ತು ತೆಲಂಗಾಣಕ್ಕೆ ತೀವ್ರವಾಗಿ ತಟ್ಟಿದೆ. ಒಡಿಶಾದಲ್ಲಿ ಭೂಕುಸಿತ ಸಂಭವಿಸಿದೆ, ಜಾರ್ಖಂಡ್‌ನಲ್ಲಿ ಮಳೆಯಾಗಿದೆ.**

- ‘ಮೊಂಥಾ’ ಕಾರಣದಿಂದಾಗಿ ರಾಜ್ಯದಲ್ಲಿ ಇಬ್ಬರು ಮೃತಪಟ್ಟಿದ್ದಾರೆ’ ಎಂದು ಆಂಧ್ರ ಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಹೇಳಿದರು. ತೆಲಂಗಾಣದ ಸೂರ್ಯಪೇಟೆ ಜಿಲ್ಲೆಯಲ್ಲಿ ತಲೆ ಮೇಲೆ ಮರ ಬಿದ್ದು ವ್ಯಕ್ತಿಯೊಬ್ಬರು ಮೃತ ಪಟ್ಟಿದ್ದಾರೆ. ಖಮ್ಮಂ ಜಿಲ್ಲೆಯಲ್ಲಿ ಟ್ರಕ್‌ನಲ್ಲಿ ಸಂಚರಿಸುತ್ತಿದ್ದಾಗ ಮಳೆ ನೀರಿನಲ್ಲಿ ಚಾಲಕ ಕೊಚ್ಚಿ ಹೋಗಿದ್ದಾರೆ.
- ಆಂಧ್ರ ಪ್ರದೇಶ ಹಾಗೂ ತೆಲಂಗಾಣದಲ್ಲಿ ಭಾರಿ ಮಳೆಯಾಗಿದೆ. ತೆಲಂಗಾಣದ 8 ಜಿಲ್ಲೆಗಳಲ್ಲಿ ಹವಾಮಾನ ಇಲಾಖೆಯು ರೆಡ್ ಅಲರ್ಟ್ ಘೋಷಿಸಿದೆ.
- ತೀವ್ರ ಮಳೆಗೆ ಒಳಗಾದ ಜಿಲ್ಲೆಗಳಲ್ಲಿ ಮುಖ್ಯಮಂತ್ರಿ ನಾಯ್ಡು ಅವರು ವೈಮಾನಿಕ ಸಮೀಕ್ಷೆ ನಡೆಸಿದರು. ವೇಗದ ಗಾಳಿ ಬೀಸಿದ್ದರಿಂದ ಆಂಧ್ರದಲ್ಲಿ ಸಾವಿರಾರು ಮರಗಳು ಧರೆಗುರುಳಿವೆ. ನೂರಾರು ವಿದ್ಯುತ್ ಕಂಬಗಳು ಬಿದ್ದಿವೆ. ‘380 ಕಿ.ಮೀ ರಸ್ತೆಗಳು, 14 ಸೇತುವೆಗಳಿಗೆ ಹಾನಿಯಾಗಿವೆ’ ಎಂದು ನಾಯ್ಡು ಮಾಹಿತಿ ನೀಡಿದರು. ‘ಒಡಿಶಾದಲ್ಲಿ ‘ಮೊಂಥಾ’ದ ಪರಿಣಾಮವು ಹೆಚ್ಚೇನು ಆಗಿಲ್ಲ’ ಎಂದು ಮುಖ್ಯಮಂತ್ರಿ ಮೋಹನ್ ಚರನ್ ಮಾಂಝಿ ಹೇಳಿದರು.

***50 ಕೆ.ಜಿ ಅಕ್ಕಿ ವಿತರಣೆ***

- ।ಮೀನುಗಾರರು ಮತ್ತು ನೇಕಾರರಿಗೆ ಬುಧವಾರದಿಂದ ₹50 ಕೆ.ಜಿ ಅಕ್ಕಿ, 1 ಕೆ.ಜಿ ಬೇಳೆ, 1 ಲೀಟರ್ ಅಡುಗೆ ಎಣ್ಣೆ, 1 ಕೆ.ಜಿ. ಈರುಳ್ಳಿ, 1 ಕೆ.ಜಿ. ಆಲೂಗೆಡ್ಡೆ ಮತ್ತು 1 ಕೆ.ಜಿ. ಸಕ್ಕರೆ ನೀಡಲು ಆಂಧ್ರ ಸರ್ಕಾರ ನಿರ್ಧರಿಸಿದೆ

***ಬೆಳೆ ಹಾನಿ***

- ।ಆಂಧ್ರದ ಭತ್ತ, ಹತ್ತಿ, ಜೋಳ ಮತ್ತು ಹೆಸರುಕಾಳು ಬೆಳೆಗಳಿಗೆ ಮತ್ತು ತೋಟಗಾರಿಕಾ ಬೆಳೆಗಳಿಗೆ ತೀವ್ರ ಹಾನಿಯಾಗಿದೆ. 87 ಸಾವಿರ ಹೆಕ್ಟೇರ್‌ನಷ್ಟು ಬೆಳೆಗಳು ನಾಶವಾಗಿವೆ.59 ಸಾವಿರ ಹೆಕ್ಟೇರ್ ವಿಸ್ತೀರ್ಣದಲ್ಲಿನ ಬೆಳೆಗಳು ನೀರಿನಲ್ಲಿ ಮುಳುಗಿವೆ. ವೇಗದ ಗಾಳಿಗೆ ಕೊನಸೀಮಾ ಜಿಲ್ಲೆಯಲ್ಲಿನ ಭತ್ತ ಮತ್ತು ಬಾಳೆಮರಗಳು ನೆಲಸಮವಾಗಿವೆ
- ।ಮಳೆಯ ಕಾರಣ ಭತ್ತ ಮತ್ತು ಹತ್ತಿ ಬೆಳೆಗಳಿಗೆ ಆಗುವ ಹಾನಿಯನ್ನು ತಡೆಯಲು ಕ್ರಮ ಕೈಗೊಳ್ಳುವಂತೆ ತೆಲಂಗಾಣ ಮುಖ್ಯಮಂತ್ರಿ ರೇವಂತ ರೆಡ್ಡಿ ಅವರು ಅಧಿಕಾರಿಗಳಿಗೆ ಸೂಚಿಸಿದರುಜನ


Dr. Rajkumar IAS/KAS Academy

## ❖ ರ‍್ಯಾಂಕಿಂಗ್: ಅಗ್ರಸ್ಥಾನಕ್ಕೆ ರೋಹಿತ್

**ಸಂದರ್ಭ: ಭಾರತ ತಂಡದ ನಿಕಟಪೂರ್ವ ನಾಯಕ ರೋಹಿತ್ ಶರ್ಮಾ ಅವರು ಐಸಿಸಿ ಬ್ಯಾಟರ್‌ಗಳ ರ‍್ಯಾಂಕಿಂಗ್‌ನಲ್ಲಿ ಇದೇ ಮೊದಲ ಬಾರಿ ಅಗ್ರಸ್ಥಾನಕ್ಕೇರಿದ್ದಾರೆ.**

- 38 ವರ್ಷ ವಯಸ್ಸಿನ ಮುಂಬೈ ಆಟಗಾರ ರೋಹಿತ್ ಅವರು ಎರಡು ಸ್ಥಾನ ಬಡ್ತಿ ಪಡೆದಿದ್ದಾರೆ. ಅವರ ವೃತ್ತಿಜೀವನದಲ್ಲಿ ಅಗ್ರಸ್ಥಾನಕ್ಕೇರಿದ್ದು ಇದೇ ಮೊದಲು.
- ಈಚೆಗೆ ಆಸ್ಟ್ರೇಲಿಯಾದಲ್ಲಿ ನಡೆದಿದ್ದ ಏಕದಿನ ಸರಣಿಯ ಕೊನೆಯ ಪಂದ್ಯದಲ್ಲಿ ಅಜೇಯ 121 ರನ್ ಗಳಿಸಿದ್ದರು. ಗೆಲುವಿನ ರೂವಾರಿಯಾಗಿದ್ದರು. ಸರಣಿಶ್ರೇಷ್ಠ ಗೌರವ ಕೂಡ ಗಳಿಸಿದ್ದರು. ರೋಹಿತ್ ಅವರು ಒಟ್ಟು 781 ರೇಟಿಂಗ್ ಪಾಯಿಂಟ್ಸ್ ಗಳಿಸಿದ್ದಾರೆ.
- ರೋಹಿತ್ 2007ರಲ್ಲಿ ಭಾರತ ತಂಡಕ್ಕೆ ಪದಾರ್ಪಣೆ ಮಾಡಿದ್ದರು. ಇತ್ತೀಚೆಗೆ ಅವರು ಟೆಸ್ಟ್ ಮತ್ತು ಟಿ20 ಮಾದರಿಗಳಿಗೆ ನಿವೃತ್ತಿ ಘೋಷಿಸಿದ್ದರು. ಏಕದಿನ ಕ್ರಿಕೆಟ್ ಮಾದರಿ ಯಲ್ಲಿ ಮಾತ್ರ ಮುಂದುವರಿದಿದ್ದಾರೆ.
- ಈ ಸಾಧನೆಯಿಂದಾಗಿ ಅವರು ಐಸಿಸಿ ರ‍್ಯಾಂಕಿಂಗ್‌ನಲ್ಲಿ ಅಗ್ರಸ್ಥಾನದಲ್ಲಿದ್ದ ಅಫ್ಘಾನಿಸ್ತಾನದ ಇಬ್ರಾಹಿಂ ಝದ್ರಾನ್ ಅವರನ್ನು ಹಿಂದಿಕ್ಕಿದರು. ಭಾರತದ ಶುಭಮನ್ ಗಿಲ್ ಅವರು ಮೂರನೇ ಸ್ಥಾನ ಪಡೆದರು. ವಿರಾಟ್ ಕೊಹ್ಲಿ ಮತ್ತು ಶ್ರೇಯಸ್ ಅಯ್ಯರ್ ಅವರು ಕ್ರಮವಾಗಿ 6 ಮತ್ತು 9ನೇ ಸ್ಥಾನದಲ್ಲಿದ್ದಾರೆ.

IAS/KAS Academy



## ❖ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗಳು

| ಸಾಹಿತ್ಯ | |
|---|---|
| **ಹೆಸರು** | **ಜಿಲ್ಲೆ** |
| ರಾಜೇಂದ್ರ ಚೆನ್ನಿ | ಶಿವಮೊಗ್ಗ |
| ತುಂಬಾಡಿ ರಾಮಯ್ಯ | ತುಮಕೂರು |
| ಪ್ರೊ. ಆರ್. ಸುನಂದಮ್ಮ | ಚಿಕ್ಕಬಳ್ಳಾಪುರ |
| ಎಚ್.ಎಲ್ ಪುಷ್ಪ | ತುಮಕೂರು |
| ರಹಮತ್ ತರೀಕೆರೆ | ಚಿಕ್ಕಮಗಳೂರು |
| ಹ.ಮ. ಪೂಜಾರ | ವಿಜಯಪುರ |
| **ಜಾನಪದ** | |
| ಬಸಪ್ಪ ಭರಮಪ್ಪ ಚೌಡ್ಕಿ | ಕೊಪ್ಪಳ |
| ಬಿ. ಟಾಕಪ್ಪ ಕಣ್ಣೂರು | ಶಿವಮೊಗ್ಗ |
| ಸನ್ನಿಂಗಪ್ಪ ಸತ್ತೆಪ್ಪ ಮುಶೆನ್ನಗೋಳ | ಬೆಳಗಾವಿ |
| ಹನುಮಂತಪ್ಪ ಮಾರಪ್ಪ ಚೀಳಂಗಿ | ಚಿತ್ರದುರ್ಗ |
| ಎಂ. ತೋಪಣ್ಣ | ಕೋಲಾರ |
| ಸೋಮಣ್ಣ ದುಂಡಪ್ಪ ಧನಗೊಂಡ | ವಿಜಯಪುರ |
| ಸಿಂಧು ಗುಜರನ್ | ದಕ್ಷಿಣ ಕನ್ನಡ |
| ಎಲ್. ಮಹದೇವಪ್ಪ ಉಡಿಗಾಲ | ಮೈಸೂರು |
| **ಸಂಗೀತ** | |
| ದೇವೇಂದ್ರಕುಮಾರ ಪತ್ತಾರ್ | ಕೊಪ್ಪಳ |
| ಮಡಿವಾಳಯ್ಯ ಸಾಲಿ | ಬೀದರ್ |
| **ನೃತ್ಯ** | |
| ಕೆ. ರಾಮಮೂರ್ತಿ ರಾವ್ | ಮೈಸೂರು |
| **ಚಲನಚಿತ್ರ /ಕಿರುತೆರೆ** | |
| ಪ್ರಕಾಶ್ ರಾಜ್ | ದಕ್ಷಿಣ ಕನ್ನಡ |
| ವಿಜಯಲಕ್ಷ್ಮೀ ಸಿಂಗ್ | ಕೊಡಗು |
| **ಆಡಳಿತ** | |
| ಎಚ್. ಸಿದ್ದಯ್ಯ, ಐಎಎಸ್ (ನಿ) | ಬೆಂಗಳೂರು ದಕ್ಷಿಣ (ರಾಮನಗರ) |
| **ವೈದ್ಯಕೀಯ** | |
| ಡಾ. ಆಲಮ್ಮ ಮಾರಣ್ಣ | ತುಮಕೂರು |
| ಡಾ. ಜಯರಂಗನಾಥ್ | ಬೆಂಗಳೂರು ಗ್ರಾ. |
| **ಸಮಾಜ ಸೇವೆ** | |
| ಸೂಲಗಿತ್ತಿ ಈರಮ್ಮ | ವಿಜಯನಗರ |
| ಫಕ್ಕೀರಿ | ಬೆಂಗಳೂರು ಗ್ರಾ. |
| ಕೋರಿನ್ ಆಂಟೊನಿಯಟ್ ರಸ್ಕೀನಾ | ದಕ್ಷಿಣ ಕನ್ನಡ |
| ಡಾ.ಎನ್. ಸೀತಾರಾಮ ಶೆಟ್ಟಿ | ಉಡುಪಿ |
| ಕೋಣಂದೂರು ಲಿಂಗಪ್ಪ | ಶಿವಮೊಗ್ಗ |
| **ಸಂಕೀರ್ಣ** | |
| ಉಮೇಶ ಪಂಬದ | ದಕ್ಷಿಣ ಕನ್ನಡ |
| ಡಾ. ರವೀಂದ್ರ ಕೋರಿಶೆಟ್ಟರ್ | ಧಾರವಾಡ |
| ಕೆ.ದಿನೇಶ್ | ಬೆಂಗಳೂರು |
| ಶಾಂತರಾಜು | ತುಮಕೂರು |
| ಜಾಫರ್ ಮೊಹಿಯುದ್ದೀನ್ | ರಾಯಚೂರು |
| ಚೆನ್ನ ಓಬಳಯ್ಯ | ಬೆಂಗಳೂರು ಗ್ರಾ. |
| ಶಾಂತಿ ಬಾಯಿ ಕೆ | ಬಳ್ಳಾರಿ |
| ಪುಂಡಲೀಕ ಶಾಸ್ತ್ರೀ(ಬುಡಬುಡಕಿ) | ಬೆಳಗಾವಿ |
| **ಹೊರನಾಡು/ಹೊರದೇಶ** | |
| ಝುಕಾರಿಯ ಬಜಪೆ | ಸೌದಿ |
| ಪಿ.ವಿ. ಶೆಟ್ಟಿ | ಮುಂಬೈ |

| ಪರಿಸರ | |
|---|---|
| ರಾಮೇಗೌಡ | ಚಾಮರಾಜನಗರ |
| ಮಲ್ಲಿಕಾರ್ಜುನ ನಿಂಗಪ್ಪ | ಯಾದಗಿರಿ |
| **ಕೃಷಿ** | |
| ಎಸ್.ವಿ.ಹಿತ್ತಲಮನಿ | ಹಾವೇರಿ |
| ಎಂ.ಸಿ. ರಂಗಸ್ವಾಮಿ | ಹಾಸನ |
| **ಮಾಧ್ಯಮ** | |
| ಕೆ.ಸುಬ್ರಹ್ಮಣ್ಯ | ಬೆಂಗಳೂರು |
| ಅಂಶಿ ಪ್ರಸನ್ನಕುಮಾರ್ | ಮೈಸೂರು |
| ಬಿ.ಎಂ. ಹನೀಫ್ | ದಕ್ಷಿಣ ಕನ್ನಡ |
| ಎಂ. ಸಿದ್ದರಾಜು | ಮಂಡ್ಯ |
| **ವಿಜ್ಞಾನ ಮತ್ತು ತಂತ್ರಜ್ಞಾನ** | |
| ರಾಮಯ್ಯ | ಚಿಕ್ಕಬಳ್ಳಾಪುರ |
| ಏರ್ ಮಾರ್ಷಲ್ ಫಿಲಿಪ್ ರಾಜಕುಮಾರ್ | ದಾವಣಗೆರೆ |
| ಡಾ.ಆರ್.ವಿ. ನಾಡಗೌಡ | ಗದಗ |
| **ಸಹಕಾರ** | |
| ಶೇಖರಗೌಡ ವಿ. ಮಾಲಿಪಾಟೀಲ್ | ಕೊಪ್ಪಳ |
| **ಯಕ್ಷಗಾನ** | |
| ಕೋಟ ಸುರೇಶ ಬಂಗೇರ | ಉಡುಪಿ |
| ಐರಬೈಲ್ ಆನಂದ ಶೆಟ್ಟಿ | ಉಡುಪಿ |
| ಕೃಷ್ಣ ಪರಮೇಶ್ವರ ಹೆಗಡೆ (ಕೆ.ಪಿ ಹೆಗಡೆ) | ಉತ್ತರ ಕನ್ನಡ |
| **ಬಯಲಾಟ** | |
| ಗುಂಡೂರಾಜ್ | ಹಾಸನ |
| **ರಂಗಭೂಮಿ** | |
| ಎಚ್.ಎಂ. ಪರಮಶಿವಯ್ಯ | ಬೆಂಗಳೂರು ದಕ್ಷಿಣ (ರಾಮನಗರ) |
| ಎಲ್.ಬಿ. ಶೇಖ್ (ಮಾಸ್ತರ್) | ವಿಜಯಪುರ |
| ಬಂಗಾರಪ್ಪ ಖುದಾನ್‌ಪುರ | ಬೆಂಗಳೂರು |
| ಮೈಮ್ ರಮೇಶ್ | ದಕ್ಷಿಣ ಕನ್ನಡ |
| ಡಿ.ರತ್ನಮ್ಮ ದೇಸಾಯಿ | ರಾಯಚೂರು |
| **ಶಿಕ್ಷಣ** | |
| ಎಂ.ಆರ್. ಜಯರಾಂ | ಬೆಂಗಳೂರು |
| ಎನ್.ಎಸ್. ರಾಮೇಗೌಡ | ಮೈಸೂರು |
| ಎಸ್. ಬಿ. ಹೊಸಮನಿ | ಕಲಬುರಗಿ |
| ರಾಜಶ್ರೀ ನಾಗರಾಜ | ಬೆಳಗಾವಿ |
| **ಕ್ರೀಡೆ** | |
| ಆಶೀಶ್ ಕುಮಾರ್ ಬಲ್ಲಾಳ್ | ಬೆಂಗಳೂರು |
| ಎಂ. ಯೋಗೇಂದ್ರ | ಮೈಸೂರು |
| ಡಾ.ಬಬಿನಾ .ಎನ್.ಎಂ. (ಯೋಗ) | ಕೊಡಗು |
| **ನ್ಯಾಯಾಂಗ** | |
| ನ್ಯಾ. ಪಿ.ಬಿ. ಭಜಂತ್ರಿ (ಪವನ್‌ಕುಮಾರ್ ಭಜಂತ್ರಿ) | ಬಾಗಲಕೋಟೆ |
| **ಶಿಲ್ಪಕಲೆ** | |
| ಬಸಣ್ಣ ಮೋನಪ್ಪ ಬಡಿಗೇರ | ಯಾದಗಿರಿ |
| ನಾಗಲಿಂಗಪ್ಪ ಜಿ. ಗಂಗೂರ | ಬಾಗಲಕೋಟೆ |
| **ಚಿತ್ರಕಲೆ** | |
| ಬಿ. ಮಾರುತಿ | ವಿಜಯನಗರ |
| **ಕರಕುಶಲ** | |
| ಎಲ್. ಹೇಮಾಶೇಖರ್ | ಮೈಸೂರು |

## ❖ ಉಮಾಶ್ರೀಗೆ ರಾಜಕುಮಾರ್ ಪ್ರಶಸ್ತಿ

**ಸಂದರ್ಭ: ರಾಜ್ಯ ಸರ್ಕಾರವು 2019ನೇ ಸಾಲಿನ ಚಲನಚಿತ್ರ ಪ್ರಶಸ್ತಿಗಳನ್ನು ಪ್ರಕಟಿಸಿದ್ದು, ಚಲನಚಿತ್ರ ರಂಗದಲ್ಲಿನ ಜೀವಮಾನ ಸಾಧನೆಗೆ ನೀಡಲಾಗುವ 'ಡಾ.ರಾಜಕುಮಾರ್ ಪ್ರಶಸ್ತಿ'ಗೆ ಹಿರಿಯ ನಟಿ ಉಮಾಶ್ರೀ ಅವರನ್ನು ಆಯ್ಕೆ ಮಾಡಲಾಗಿದೆ.**

- 'ಪುಟ್ಟಣ್ಣ ಕಣಗಾಲ್ ಪ್ರಶಸ್ತಿ'ಗೆ ನಿರ್ದೇಶಕ ಎನ್.ಆರ್.ನಂಜುಂಡೇಗೌಡ, 'ಡಾ.ವಿಷ್ಣುವರ್ಧನ್ ಪ್ರಶಸ್ತಿ'ಗೆ ನಿರ್ಮಾಪಕ–ನಿರ್ದೇಶಕ ರಿಚರ್ಡ್ ಕ್ಯಾಸ್ಟಲಿನೊ ಅವರು ಆಯ್ಕೆಯಾಗಿದ್ದಾರೆ. ಈ ಮೂರೂ ಪ್ರಶಸ್ತಿಗಳು ತಲಾ 50 ಗ್ರಾಂ ಚಿನ್ನದ ಪದಕ ಮತ್ತು ₹5 ಲಕ್ಷ ನಗದು ಒಳಗೊಂಡಿವೆ.



- ಅದೇ ಸಾಲಿನ ಚಲನಚಿತ್ರ ಸಾಹಿತ್ಯ ಪ್ರಶಸ್ತಿಗೆ ‘ಪ್ರಜಾವಾಣಿ’ಯ ಅಭಿಮತ ಸಂಪಾದಕ ರಘುನಾಥ ಚ.ಹ. ಅವರು ಬರೆದಿರುವ ‘ಬೆಳ್ಳಿತೊರೆ– ಸಿನಿಮಾ ಪ್ರಬಂಧಗಳು’ ಆಯ್ಕೆಯಾಗಿದೆ. ಪ್ರಶಸ್ತಿಯು ₹20,000 ನಗದು ಮತ್ತು 50 ಗ್ರಾಂ ಬೆಳ್ಳಿಯ ಪದಕ ಒಳಗೊಂಡಿದೆ. ಪುಸ್ತಕದ ಪ್ರಕಾಶಕ, ಅಂಕಿತ ಪುಸ್ತಕದ ಪ್ರಕಾಶ ಕಂಬತ್ತಳ್ಳಿ ಅವರನ್ನೂ ಪ್ರಶಸ್ತಿಗೆ ಆಯ್ಕೆ ಮಾಡಿದ್ದು, ₹20,000 ನಗದು ಮತ್ತು 50 ಗ್ರಾಂ ಬೆಳ್ಳಿಯ ಪದಕ ಒಳಗೊಂಡಿದೆ.
- ಅತ್ಯುತ್ತಮ ಕಿರುಚಿತ್ರ ಪ್ರಶಸ್ತಿಗೆ ಶ್ರೀನಾಥ್ ಎಸ್. ಹಡಗಲಿ ಅವರ ನಿರ್ದೇಶನದ ‘ಗುಳೆ’ ಕಿರುಚಿತ್ರ ಆಯ್ಕೆಯಾಗಿದೆ. ನಿರ್ದೇಶಕ ಶ್ರೀನಾಥ್ ಮತ್ತು ನಿರ್ಮಾಪಕ ಮನೋಹರ್ ಎಸ್.ಐಯರ್ ಅವರಿಗೆ ತಲಾ ₹25,000 ನಗದು ಮತ್ತು 50 ಗ್ರಾಂ ಬೆಳ್ಳಿಯ ಪದಕ ನೀಡಲಾಗುತ್ತದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪ್ರಕಟಣೆ ತಿಳಿಸಿದೆ.

## ❖ ‘ಕಾಯಕ ಗ್ರಾಮ’ಕ್ಕೆ 1,310 ಪಂಚಾಯಿತಿ ಆಯ್ಕೆ’

**ಸಂದರ್ಭ: ಕೊನೆಯ ಸ್ಥಾನದಲ್ಲಿರುವ 1,310 ಗ್ರಾಮ ಪಂಚಾಯಿತಿಗಳನ್ನು ‘ಕಾಯಕ ಗ್ರಾಮ’ ಯೋಜನೆ ಅಡಿ ಅಭಿವೃದ್ಧಿಪಡಿಸಲಾಗುತ್ತದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.**

- ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಅವರು, ‘ಗ್ರಾಮೀಣಾಭಿವೃದ್ಧಿಯ ಇ-ಆಡಳಿತ ವಿಭಾಗವು ಪಂಚತಂತ್ರ ತಂತ್ರಾಂಶದಲ್ಲಿ ಗ್ರಾಮ ಪಂಚಾಯಿತಿ ಕಾರ್ಯಕ್ಷಮತೆಯ ಶ್ರೇಯಾಂಕ ವರದಿಯಲ್ಲಿ ಗುರುತಿಸುವಂತೆ ಕೊನೆಯ ಸ್ಥಾನಗಳಲ್ಲಿರುವ ಗ್ರಾಮ ಪಂಚಾಯತಿಗಳನ್ನು ವೈಜ್ಞಾನಿಕವಾಗಿ ಆಯ್ಕೆ ಮಾಡಿಕೊಳ್ಳಲಾಗುತ್ತದೆ. ವಿವಿಧ ಇಲಾಖೆಗಳ ಸಮನ್ವಯದಲ್ಲಿ ಸಮಗ್ರ ಅಭಿವೃದ್ಧಿ ಸಾಧಿಸಲಾಗುವುದು. ತಾಲ್ಲೂಕು, ಜಿಲ್ಲೆ ಮತ್ತು ರಾಜ್ಯಮಟ್ಟದ ಅಧಿಕಾರಿಗಳು ಉಸ್ತುವಾರಿ ನೋಡಿಕೊಳ್ಳುವರು’ ಎಂದರು.
- ಗ್ರಾಮ ಪಂಚಾಯಿತಿಗಳನ್ನು ಹಿರಿಯ ಅಧಿಕಾರಿಗಳು ದತ್ತು ಪಡೆದು ಅಭಿವೃದ್ಧಿಪಡಿಸಲು ಹೊಸ ಯೋಜನೆ ರೂಪಿಸಲಾಗುವುದು ಎಂದು ಬಜೆಟ್‌ನಲ್ಲಿ ಮುಖ್ಯಮಂತ್ರಿ ಘೋಷಿಸಿದ್ದರು.
- ಬಸವಣ್ಣನವರ ಕಾಯಕದ ಸಂದೇಶವನ್ನು ಸಾಕಾರಗೊಳಿಸಲು ‘ಕಾಯಕ ಗ್ರಾಮ’ ಯೋಜನೆ ರೂಪಿಸಲಾಗಿದೆ ಎಂದರು.
- ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಳು ಸೇರಿದಂತೆ ಆರು ಅಧಿಕಾರಿಗಳು, ತಾಲ್ಲೂಕು ಮಟ್ಟದಲ್ಲಿ ಮೂವರು ಅಧಿಕಾರಿಗಳು ಹಾಗೂ ರಾಜ್ಯ ಮಟ್ಟದಲ್ಲಿ ಜಿಲ್ಲಾವಾರು ನೇಮಕ ಮಾಡಲಾಗಿರುವ ನೋಡಲ್ ಅಧಿಕಾರಿಗಳು ಇರುತ್ತಾರೆ ಎಂದರು.

## ❖ ಕೆಎಸ್‌ಆರ್‌ಪಿ: ಪಿಯು ವಿದ್ಯಾರ್ಹತೆ: ನಿಯಮ ತಿದ್ದುಪಡಿಗೆ ಸಚಿವ ಸಂಪುಟದ ಒಪ್ಪಿಗೆ

**ಸಂದರ್ಭ: ಕರ್ನಾಟಕ ರಾಜ್ಯ ಮೀಸಲು ಪೊಲೀಸ್ (ಕೆಎಸ್‌ಆರ್‌ಪಿ) ಮತ್ತು ಭಾರತೀಯ ಮೀಸಲು ದಳ (ಐಆರ್‌ಬಿ) ನೇಮಕಾತಿಗೆ ಇರುವ ವಿದ್ಯಾರ್ಹತೆಯನ್ನು ಎಸ್‌ಎಸ್ ಎಲ್‌ಸಿಯಿಂದ ಪಿಯುಸಿಗೆ ಏರಿಸುವ ವೃಂದ ಮತ್ತು ನೇಮಕಾತಿ ನಿಯಮಕ್ಕೆ ಮಾಡಿರುವ ತಿದ್ದುಪಡಿಗೆ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ.**

***<u>ಸಚಿವ ಸಂಪುಟ ಸಭೆಯ ತೀರ್ಮಾನಗಳು:</u>***

➢ Iಕರ್ನಾಟಕ ನವೋದ್ಯಮ ನೀತಿ 2022–27ರ ಅಡಿ ಐದು ವರ್ಷಗಳ ಅವಧಿಗೆ ₹80 ಕೋಟಿ ಅನುದಾನ ಹಂಚಿಕೆಯೊಂದಿಗೆ ಒಟ್ಟು ಎಂಟು ಟೆಕ್ನಾಲಜಿ ಇನ್‌ಕ್ಯುಬೇಟರ್ 2.0 ಸ್ಥಾಪಿಸಲು ತೀರ್ಮಾನ.

Dr. Rajkumar IAS KAS Academy

- ।ಕಾರವಾರ, ಹಳೆ ಮಂಗಳೂರು(ಬೆಂಗ್ರೆ), ಹಳೆ ಮಂಗಳೂರು(ನಗರ ಬದಿ) ಮತ್ತು ಮಲ್ಪೆಯ ಬರ್ತ್‌ಗಳನ್ನು ಸಾರ್ವಜನಿಕ ಮತ್ತು ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಿ ನಿರ್ವಹಿಸಲು ತೀರ್ಮಾನ
- ।ಮಂಡ್ಯ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಪ್ರಾಥಮಿಕ ಹಂತಕ್ಕಾಗಿ ₹23.25 ಕೋಟಿ ಮೊತ್ತದಲ್ಲಿ ಮೂಲ ಸೌಕರ್ಯ ಅಭಿವೃದ್ಧಿ, ದುರಸ್ತಿ ಮತ್ತು ನವೀಕರಣ ಕಾಮಗಾರಿ
- ।ಕಾರವಾರ ಕ್ಯಾನ್ಸರ್ ಕೇರ್ ಘಟಕದ ಸ್ಥಾಪನೆಗೆ ಅಗತ್ಯವಿರುವ ಹೆಚ್ಚುವರಿ ಉಪಕರಣಗಳಿಗೆ ತಗಲುವ ಅನುದಾನವನ್ನು ಈಗಾಗಲೇ ಅನುಮೋದನೆ ಆಗಿರುವ ₹18.25 ಕೋಟಿ ಸರ್ಕಾರದ ವತಿಯಿಂದ ಭರಿಸಲಾಗುವುದು. ಇನ್ನುಳಿದ ಮೊತ್ತ ₹13.38 ಕೋಟಿಯನ್ನು ಸಂಸ್ಥೆಯ ಆಂತರಿಕ ಸಂಪನ್ಮೂಲದಿಂದ ಭರಿಸಲು ಒಪ್ಪಿಗೆ.
- ।ತುಮಕೂರು ಜಿಲ್ಲಾ ಆಸ್ಪತ್ರೆಯಲ್ಲಿ ಕ್ಯಾನ್ಸರ್ ಕೇರ್ ಕೇಂದ್ರ ಸ್ಥಾಪನೆಗೆ ಅಗತ್ಯವಿರುವ ಮೊದಲ ಹಂತದ ಉಪಕರಣಗಳ ಖರೀದಿಗೆ ₹50 ಕೋಟಿ.
- ।ಕೆ–ಶೋರ್ ಯೋಜನೆಗೆ ತಾಂತ್ರಿಕ ಮತ್ತು ನಿರ್ವಹಣಾ ಸಲಹೆಗಾರರ ಸೇವೆಗಳನ್ನು ಪಡೆಯಲು ₹20.47 ಕೋಟಿಗೆ ಆಡಳಿತಾತ್ಮಕ ಅನುಮೋದನೆ.
- ।ಯಾದಗಿರಿ ಜಿಲ್ಲೆ ಶಹಾಪುರ ನಗರಸಭೆ ವ್ಯಾಪ್ತಿಯಲ್ಲಿ ಕನಕಭವನ ನಿರ್ಮಾಣಕ್ಕೆ 300.14 ಚದರ ಮೀಟರ್ ಕರ್ನಾಟಕ ಪ್ರದೇಶ ಕುರುಬರ ಸಂಘಕ್ಕೆ ಉಚಿತವಾಗಿ ಮಂಜೂರು ಮಾಡಲು ತೀರ್ಮಾನ
- ।2025–26 ನೇ ಸಾಲಿನಲ್ಲಿ ಪೊಲೀಸ್ ಇಲಾಖೆಗೆ ವಿವಿಧ ಮಾದರಿಯ 241 ವಾಹನಗಳನ್ನು ₹34.95 ಕೋಟಿ ವೆಚ್ಚದಲ್ಲಿ ಖರೀದಿಸಲು ಒಪ್ಪಿಗೆ
- ।ಬೆಂಗಳೂರು ಗ್ರಾಮಾಂತರ ಜಿಲ್ಲೆ ನೆಲಮಂಗಲ, ಉಡುಪಿ ಜಿಲ್ಲೆ ಅಂಜಾರು ಗ್ರಾಮ, ಉಡುಪಿ ಜಿಲ್ಲೆ ಕುಂದಾಪುರ ತಾಲ್ಲೂಕಿನಲ್ಲಿ ಕಾಂಗ್ರೆಸ್ ಭವನ ನಿರ್ಮಾಣಕ್ಕೆ ಜಮೀನು ಮಂಜೂರು

## ❖ 'ಕೌಶಲ ಕೇಂದ್ರಕ್ಕೆ ಸರ್ಕಾರದಿಂದ ಜಮೀನು'

**ಸಂದರ್ಭ:'ರಾಜ್ಯದಲ್ಲಿ ಕೌಶಲ ತರಬೇತಿ ಕೇಂದ್ರ ಮತ್ತು ಪ್ರಯೋಗಾಲಯಗಳನ್ನು ಸ್ಥಾಪಿಸಲು ಇಚ್ಛಿಸುವವರಿಗೆ ರಾಜ್ಯ ಸರ್ಕಾರದಿಂದಲೇ ಅಗತ್ಯ ಜಮೀನು ಮಂಜೂರು ಮಾಡಲಾಗುವುದು' ಎಂದು ಕೌಶಲಾಭಿವೃದ್ಧಿ ಸಚಿವ ಶರಣ ಪ್ರಕಾಶ ಪಾಟೀಲ ಹೇಳಿದರು.**

- ಭಾರತೀಯ ಕೈಗಾರಿಕೆಗಳ ಒಕ್ಕೂಟವು ಆಯೋಜಿಸಿದ್ದ 'ಕೌಶಲ ಶೃಂಗಸಭೆ–2025'ಯಲ್ಲಿ ಅವರು ಮಾತನಾಡಿದರು.
- 'ಪದವಿ, ವೃತ್ತಿಪರ ಕೋರ್ಸ್‌ಗಳನ್ನು ಮಾಡಿದ ವಿದ್ಯಾರ್ಥಿಗಳಲ್ಲಿ ಉದ್ಯೋಗಾವಕಾಶವನ್ನು ಹೆಚ್ಚಿಸುವ ಅಗತ್ಯವಿದೆ. ಇದಕ್ಕಾಗಿ ಉದ್ಯಮಗಳ ಸಹಯೋಗದಲ್ಲೇ ತರಬೇತಿ ಕೇಂದ್ರ ಅಥವಾ ಪ್ರಯೋಗಾಲಯಗಳನ್ನು ಸ್ಥಾಪಿಸಬೇಕಿದೆ. ಇದಕ್ಕೆ ಸರ್ಕಾರವು ಅಗತ್ಯ ನೆರವುಗಳನ್ನು ನೀಡಲಿದೆ' ಎಂದರು.
- 'ಬೆಂಗಳೂರಿನ ಪಿಇಎಸ್ ವಿಶ್ವವಿದ್ಯಾ ಲಯದಲ್ಲಿ ಬಜಾಜ್ ಕಂಪನಿಯು ಎಂಜಿನಿಯರಿಂಗ್ ಕೌಶಲ ತರಬೇತಿ ಕೇಂದ್ರವನ್ನು ಆರಂಭಿಸಿದೆ. ಖಾಸಗಿ–ಸರ್ಕಾರಿ ಸಹಯೋಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ಕೇಂದ್ರದಲ್ಲಿ ಎಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಮೆಕಾಟ್ರಾನಿಕ್ಸ್, ರೊಬೊಟಿಕ್ಸ್ ಮೊದಲಾದ ಕ್ಷೇತ್ರಗಳಲ್ಲಿ ಪ್ರಾಯೋಗಿಕ ತರಬೇತಿಯನ್ನು ನೀಡಲಾಗುತ್ತಿದೆ. ರಾಜ್ಯದ ಹಲವೆಡೆ ಇಂತಹ ಕೇಂದ್ರಗಳನ್ನು ಸ್ಥಾಪಿಸಲು ಅವಕಾಶಗಳಿವೆ' ಎಂದು ಹೇಳಿದರು.
- 'ಶೈಕ್ಷಣಿಕ ಕಲಿಕೆ ಮತ್ತು ಪ್ರಾಯೋಗಿಕ ತರಬೇತಿ ಎರಡಕ್ಕೂ ಅವಕಾಶವಿರುವ 'ಡ್ಯುಯಲ್ ಅಪ್ರೆಂಟಿಸ್ ಶಿಪ್' ಕಾರ್ಯಕ್ರಮವನ್ನು ರೂಪಿಸಲಾಗುತ್ತಿದೆ. ಈ ಯೋಜನೆಯನ್ನು ಸಾಕಾರಗೊಳಿಸಲು ಉದ್ಯಮರಂಗದ ಸಹಕಾರ ಅಗತ್ಯ. ಶಿಕ್ಷಣ–ಉದ್ಯಮ ಸಹಯೋಗವನ್ನು ಹೊಸ ಎತ್ತರಕ್ಕೆ ಒಯ್ಯೋಣ' ಎಂದು ಉದ್ಯಮಿಗಳಿಗೆ ಆಹ್ವಾನ ನೀಡಿದರು.

## ❖ ಜಿಯೊ ಬಳಕೆದಾರರಿಗೆ ಗೂಗಲ್ ಎ.ಐ ಪ್ರೊ ಉಚಿತ

**ಸಂದರ್ಭ: ಗೂಗಲ್ ಕಂಪನಿಯ ಎ.ಐ. ಪರಿಕರ 'ಗೂಗಲ್ ಎ.ಐ. ಪ್ರೊ' ಚಂದಾದಾರಿಕೆಯು ಅರ್ಹ ಜಿಯೊ ಬಳಕೆದಾರರಿಗೆ 18 ತಿಂಗಳು ಉಚಿತವಾಗಿ ಸಿಗಲಿದೆ ಎಂದು ರಿಲಯನ್ಸ್ ಇಂಡಸ್ಟ್ರೀಸ್ ತಿಳಿಸಿದೆ.**

- ರಿಲಯನ್ಸ್ ಇಂಡಸ್ಟ್ರೀಸ್‌ನ ಅಂಗಸಂಸ್ಥೆಯಾದ ರಿಲಯನ್ಸ್ ಇಂಟೆಲಿಜೆನ್ಸ್, ಗೂಗಲ್ ಜೊತೆ ಪಾಲುದಾರಿಕೆ ಮಾಡಿಕೊಂಡಿದೆ. ಈ ಪಾಲುದಾರಿಕೆಯ ಮೂಲಕ ರಿಲಯನ್ಸ್, ಜಿಯೊ 5ಜಿ ಅನ್‌ಲಿಮಿಟೆಡ್ ಯೋಜನೆ ಹೊಂದಿರುವ ಬಳಕೆದಾರರಿಗೆ ಈ ಕೊಡುಗೆ ನೀಡಿದೆ.
- ಹಣಕಾಸಿನ ಮೌಲ್ಯದಲ್ಲಿ ಈ ಕೊಡುಗೆ ಬೆಲೆ ₹35,100 ಆಗಿದೆ ಎಂದು ಕಂಪನಿ ಹೇಳಿದೆ. ಆರಂಭಿಕವಾಗಿ 18–25 ವರ್ಷದ ನಡುವಿನವರಿಗೆ ಈ ಕೊಡುಗೆ ದೊರೆಯಲಿದೆ. ನಂತರ ಎಲ್ಲ ಬಳಕೆದಾರರಿಗೆ ಈ ಸೇವೆ ದೊರೆಯುವಂತೆ ಮಾಡಲಾಗುವುದು ಎಂದು ಕಂಪನಿ ತಿಳಿಸಿದೆ.
- ಈ ಪ್ಲ್ಯಾನ್ ಜೊತೆಗೆ ಗೂಗಲ್ ಜೆಮಿನಿ 2.5 ಪ್ರೊ, ಇತ್ತೀಚಿನ ನ್ಯಾನೋ ಬನಾನಾ ಮತ್ತು ವಿಯೋ 3.1 ಮಾದರಿಗಳೊಂದಿಗೆ ಚಿತ್ರಗಳು ಮತ್ತು ವಿಡಿಯೋಗಳನ್ನು ಸೃಷ್ಟಿಸಲು ಬಳಕೆದಾರರಿಗೆ ಹೆಚ್ಚಿನ ಅವಕಾಶಗಳು ದೊರೆಯುತ್ತವೆ.
- ಅಧ್ಯಯನ ಮತ್ತು ಸಂಶೋಧನೆಗಾಗಿ ನೋಟ್‌ಬುಕ್ ಎಲ್‌ಎಂಗೆ ಹೆಚ್ಚಿನ ಅವಕಾಶ ಮತ್ತು 2 ಟಿಬಿ ಕ್ಲೌಡ್ ಸಂಗ್ರಹದ ಸೌಲಭ್ಯ ಕೂಡ ದೊರೆಯಲಿದೆ ಎಂದು ತಿಳಿಸಿದೆ.

## ❖ ಛಾಬಹಾರ್ ಬಂದರು: 6 ತಿಂಗಳು ವಿನಾಯಿತಿ

**ಸಂದರ್ಭ: ಭಾರತ ನಿರ್ವಹಿಸುತ್ತಿರುವ ಇರಾನ್‌ನ ಛಾಬಹಾರ್ ಬಂದರು ಯೋಜನೆ ಮೇಲೆ ಅಮೆರಿಕ ವಿಧಿಸಿರುವ ನಿರ್ಬಂಧಗಳಿಂದ ಆರು ತಿಂಗಳು ವಿನಾಯಿತಿ ದೊರೆತಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಮಾಹಿತಿ ನೀಡಿದರು.**

- ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು, ಅಕ್ಟೋಬರ್ 29ರಿಂದ ಜಾರಿಗೆ ಬರುವಂತೆ ಆರು ತಿಂಗಳವರೆಗೆ ವಿನಾಯಿತಿ ನೀಡಿ ಆದೇಶಿಸಿದ್ದಾರೆ ಎಂದು ಅವರು ಹೇಳಿದರು.
- ಛಾಬಹಾರ್ ಬಂದರಿನ ಕಾರ್ಯನಿರ್ವಹಣೆ ಕುರಿತು ಇರಾನ್ ಮತ್ತು ಭಾರತ ಸರ್ಕಾರ ಕಳೆದ ವರ್ಷ ಒಪ್ಪಂದ ಮಾಡಿಕೊಂಡಿವೆ. ಈ ಬಂದರು ಅಭಿವೃದ್ಧಿ ಮತ್ತು ನಿರ್ವಹಣೆ ಸಂಬಂಧ ಎರಡೂ ಸರ್ಕಾರಗಳು 2003, 2015 ಮತ್ತು 2017ರಲ್ಲಿ ಒಪ್ಪಂದ ಮಾಡಿಕೊಂಡಿದ್ದವು. 2018ರಿಂದ ಈ ಬಂದರನ್ನು ಭಾರತವೇ ನಿರ್ವಹಿಸುತ್ತಿದೆ. ಅದನ್ನು 10 ವರ್ಷಗಳಿಗೆ ವಿಸ್ತರಿಸಿ ಕಳೆದ ವರ್ಷ ಒಪ್ಪಂದ ಮಾಡಿಕೊಳ್ಳಲಾಗಿದೆ.
- ಅಫ್ಘಾನಿಸ್ತಾನದ ಸಾರ್ವಭೌಮತ್ವಕ್ಕೆ ಭಾರತ ಬದ್ಧ: ಪಾಕಿಸ್ತಾನ– ಅಫ್ಘಾನಿಸ್ತಾನ ಗಡಿ ಸಂಘರ್ಷಕ್ಕೆ ಸಂಬಂಧಿಸಿದಂತೆ ಅಫ್ಘಾನಿಸ್ತಾನವನ್ನು ಬೆಂಬಲಿಸಿರುವ ಭಾರತವು, ಅಫ್ಘಾನಿಸ್ತಾನದ ಸಾರ್ವಭೌಮತ್ವ, ಪ್ರಾದೇಶಿಕ ಸಮಗ್ರತೆ ಮತ್ತು ಸ್ವಾತಂತ್ರ್ಯವನ್ನು ಪೂರ್ಣವಾಗಿ ಗೌರವಿಸುತ್ತದೆ ಮತ್ತು ಅದಕ್ಕೆ ಬದ್ಧವಾಗಿದೆ ಎಂದು ಪ್ರತಿಪಾದಿಸಿದೆ.

Dr. Rajkumar IAS Academy

## ❖ ತೈಲ ಖರೀದಿ– ಅಮೆರಿಕ ನಿರ್ಬಂಧ: ಪರಿಣಾಮಗಳ ಬಗ್ಗೆ ಭಾರತ ಅಧ್ಯಯನ

**ಸಂದರ್ಭ: ರಷ್ಯಾದ ಬೃಹತ್ ತೈಲ ಕಂಪನಿಗಳಾದ 'ರೋಸ್ನೆಫ್ಟ್' ಮತ್ತು 'ಲುಕೋಯಿಲ್' ಮೇಲೆ ಇತ್ತೀಚೆಗೆ ಅಮೆರಿಕ ವಿಧಿಸಿರುವ ನಿರ್ಬಂಧದಿಂದ ಉಂಟಾಗುವ ಪರಿಣಾಮಗಳ ಬಗ್ಗೆ ಭಾರತ ಅಧ್ಯಯನ ನಡೆಸುತ್ತಿದೆ ಎಂದು ರಣಧೀರ್ ಜೈಸ್ವಾಲ್ ತಿಳಿಸಿದರು.**

- 'ಭಾರತವು ಜಾಗತಿಕ ಮಾರುಕಟ್ಟೆಯ ಚಲನಶೀಲತೆಯನ್ನು ಆಧರಿಸಿ ನಿರ್ಧಾರಗಳನ್ನು ತೆಗೆದುಕೊಳ್ಳುತ್ತದೆ. ನಮ್ಮ 140 ಕೋಟಿ ಜನರ ಇಂಧನದ ಅಗತ್ಯಗಳನ್ನು ಪೂರೈಸಲು ವೈವಿಧ್ಯಮಯ ಮೂಲಗಳಿಂದ ಕೈಗೆಟುಕುವ ದರದಲ್ಲಿ ಇಂಧನ ಖರೀದಿಸಲು ಒತ್ತು ನೀಡುತ್ತದೆ' ಎಂದೂ ಅವರು ಸುದ್ದಿಗೋಷ್ಠಿಯಲ್ಲಿ ಹೇಳಿದರು.
- ಭಾರತದ ತೈಲ ಖರೀದಿದಾರರು ರಷ್ಯಾದ ಕಚ್ಚಾ ತೈಲ ಖರೀದಿಯನ್ನು ನಿಧಾನವಾಗಿ ಕಡಿಮೆ ಮಾಡುತ್ತಿದ್ದಾರೆ ಮತ್ತು ಅಮೆರಿಕದಿಂದ ಪೆಟ್ರೋಲಿಯಂ ಉತ್ಪನ್ನಗಳ ಆಮದನ್ನು ಎದುರು ನೋಡುತ್ತಿದ್ದಾರೆ ಎಂಬ ಮಾಹಿತಿ ಬೆನ್ನಲ್ಲೇ ಜೈಸ್ವಾಲ್ ಅವರಿಂದ ಪ್ರತಿಕ್ರಿಯೆ ಬಂದಿದೆ.
- ವ್ಯಾಪಾರ ಒಪ್ಪಂದವನ್ನು ಅಂತಿಮಗೊಳಿಸುವ ಕಾರ್ಯದಲ್ಲಿ ಭಾರತ ಮತ್ತು ಅಮೆರಿಕ ನಿರತವಾಗಿವೆ ಎಂದು ಅವರು ಇದೇ ವೇಳೆ ಪ್ರತಿಕ್ರಿಯಿಸಿದರು.

## ❖ ಉದ್ಯೋಗ ಪರವಾನಗಿ: ಸ್ವಯಂಚಾಲಿತ ವಿಸ್ತರಣೆ ಸೌಲಭ್ಯ ನಿಲ್ಲಿಸಿದ ಅಮೆರಿಕ

**ಸಂದರ್ಭ: ಎಚ್–1ಬಿ ವೀಸಾಕ್ಕಾಗಿ ಹೊಸದಾಗಿ ಸಲ್ಲಿಕೆ ಯಾಗುವ ಅರ್ಜಿಗೆ ಸಂಬಂಧಿಸಿದ ಶುಲ್ಕವನ್ನು ಹೆಚ್ಚಳ ಮಾಡಿದ್ದ ಅಮೆರಿಕ, ಈಗ ವಿದೇಶಿಗರ ಉದ್ಯೋಗ ಪರವಾನಗಿ ಅವಧಿ ಸ್ವಯಂಚಾಲಿತವಾಗಿ ವಿಸ್ತರಣೆಯಾಗುವ ಸೌಲಭ್ಯವನ್ನು ಕೊನೆಗೊಳಿಸುತ್ತಿರುವುದಾಗಿ ಘೋಷಿಸಿದೆ.**

- ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತದ ಈ ನಡೆಯಿಂದ, ಅಮೆರಿಕದಲ್ಲಿ ಉದ್ಯೋಗದಲ್ಲಿರುವ ಭಾರಿ ಸಂಖ್ಯೆಯ ಭಾರತೀಯರಿಗೆ ತೊಂದರೆಯಾಗಲಿದೆ.
- ಭದ್ರತಾ ಇಲಾಖೆಯು ಈ ಕುರಿತು ಘೋಷಣೆ ಮಾಡಿದೆ. 'ವಿದೇಶಿಯರ ಉದ್ಯೋಗ ದೃಢೀಕರಣ ದಾಖಲೆಗಳ (ಇಎಡಿ) ಸಿಂಧುತ್ವವನ್ನು ವಿಸ್ತರಣೆ ಮಾಡುವು ದಕ್ಕೂ ಮುನ್ನ ವ್ಯಾಪಕ ಪರಿಶೀಲನೆ ನಡೆಸಲಾಗುವುದು' ಎಂದು ಹೇಳಿದೆ.
- 'ಹೊಸ ನಿಯಮದ ಪ್ರಕಾರ, 2025ರ ಅಕ್ಟೋಬರ್ 30ರಂದು ಅಥವಾ ನಂತರ ತಮ್ಮ ಇಎಡಿ ನವೀಕರಣಕ್ಕೆ ಅರ್ಜಿ ಸಲ್ಲಿಸುವ ವಿದೇಶಿಯರ ಉದ್ಯೋಗ ಪರವಾನಗಿ ಅವಧಿಯು ಸ್ವಯಂಚಾಲಿತವಾಗಿ ವಿಸ್ತರಣೆ ಆಗುವುದಿಲ್ಲ' ಎಂದು ಇಲಾಖೆ ತಿಳಿಸಿದೆ.
- 'ಅಕ್ಟೋಬರ್ 30ರ ಒಳಗಾಗಿ, ಪರವಾನಗಿಯನ್ನು ಸ್ವಯಂಚಾಲಿತ ವಾಗಿ ವಿಸ್ತರಣೆ ಮಾಡಲಾಗಿರುವ ಇಎಡಿಗಳಿಗೆ ಈ ಮಧ್ಯಂತರ ನಿಯಮ ಅನ್ವಯಿಸದು' ಎಂದು ಸ್ಪಷ್ಟಪಡಿಸಿದೆ.
- 'ಇಎಡಿ ಅವಧಿ ಕೊನೆಗೊಳ್ಳುವುದಕ್ಕೂ 180 ದಿನಗಳ ಮೊದಲೇ ನವೀಕರಣಕ್ಕೆ ವಿದೇಶಿಯರು ಅರ್ಜಿ ಸಲ್ಲಿಸಬೇಕು' ಎಂದೂ ಇಲಾಖೆ ಸೂಚಿಸಿದೆ.
- ಜೋ ಬೈಡನ್ ಅವರು ಅಧ್ಯಕ್ಷ ರಾಗಿದ್ದ ವೇಳೆ, ಇಎಡಿ ನವೀಕರಣ ಕೋರಿ ನಿಗದಿತ ಸಮಯದೊಳಗೆ ಅರ್ಜಿ ಸಲ್ಲಿಸುವ ವಿದೇಶಿಯರ ಉದ್ಯೋಗ ಪರವಾನಗಿಯು ಸ್ವಯಂಚಾಲಿತವಾಗಿ 540 ದಿನಗಳಷ್ಟು ವಿಸ್ತರಣೆಯಾಗುತ್ತಿತ್ತು.

## ❖ ಎ.ಐ. ಪಠ್ಯಕ್ರಮಕ್ಕೆ ಸಮಿತಿ

**ಸಂದರ್ಭ: ಕೃತಕ ಬುದ್ಧಿಮತ್ತೆ (ಎ.ಐ) ವಿಷಯಾಧಾರಿತ ಪಠ್ಯ ರೂಪಿಸಲು ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ (ಸಿಬಿಎಸ್ಇ) ಐಐಟಿ ಮದ್ರಾಸ್‌ನ ಪ್ರಾಧ್ಯಾಪಕ ಕಾರ್ತಿಕ್ ರಮಣ್ ನೇತೃತ್ವದಲ್ಲಿ ತಜ್ಞರ ಸಮಿತಿ ರಚಿಸಿದೆ.**

- 2026–27ರ ಶೈಕ್ಷಣಿಕ ವರ್ಷದಿಂದ ತನ್ನ ವ್ಯಾಪ್ತಿಯ ಎಲ್ಲ ಶಾಲೆಗಳಲ್ಲಿ ಮೂರನೇ ತರಗತಿಯಿಂದ ಎ.ಐ ಪಠ್ಯಕ್ರಮವನ್ನು ಅಳವಡಿಸುವ ಪ್ರಯತ್ನದ ಭಾಗವಾಗಿ ಸಮಿತಿ ರಚಿಸಲಾಗಿದೆ.
- 'ಸಿಬಿಎಸ್ಇ, ಎನ್‌ಸಿಇಆರ್‌ಟಿ, ಕೆವಿಎಸ್, ಎನ್‌ವಿಎಸ್ ತಜ್ಞರು ಮತ್ತು ಬಾಹ್ಯ ತಜ್ಞರೊಂದಿಗೆ ಮಂಡಳಿಯ ಪ್ರಮುಖರು ಸಮಾಲೋಚನೆ ನಡೆಸಿದರು. ಸಭೆಯಲ್ಲಿ ಮದ್ರಾಸ್ ಐಐಟಿಯ ದತ್ತಾಂಶ ವಿಜ್ಞಾನ (ಡೆಟಾ ಸೈನ್ಸ್) ಮತ್ತು ಎ.ಐ ವಿಭಾಗದ ಪ್ರಾಧ್ಯಾಪಕ ಕಾರ್ತಿಕ್ ರಮಣ್ ನೇತೃತ್ವದಲ್ಲಿ ಪಠ್ಯಕ್ರಮ ರಚನಾ ಸಮಿತಿ ರಚಿಸಲಾಯಿತು' ಎಂದು ಶಾಲಾ ಶಿಕ್ಷಣ ಕಾರ್ಯದರ್ಶಿ ಸಂಜಯ್ ಕುಮಾರ್ ತಿಳಿಸಿದ್ದಾರೆ.
- 'ವಿಶಾಲವಾದ, ಸಮಗ್ರವಾದ ಮತ್ತು ಶಾಲಾ ಶಿಕ್ಷಣದ ರಾಷ್ಟ್ರೀಯ ಪಠ್ಯಕ್ರಮ ಸ್ವರೂಪದ (ಎನ್‌ಸಿಎಫ್–ಎಸ್ಇ) ಪರಿಧಿಯಲ್ಲಿ ಎಐ ಪಠ್ಯಕ್ರಮ ರಚಿಸಲಾಗುತ್ತದೆ. ಪ್ರತಿಯೊಂದು ಮಗುವಿನ ವಿಶಿಷ್ಟ ಸಾಮರ್ಥ್ಯ ನಮ್ಮ ಆದ್ಯತೆ' ಎಂದು ಹೇಳಿದರು.
- ಪ್ರಸ್ತುತ, ದೇಶದ 18,000 ಸಿಬಿಎಸ್ಇ ಶಾಲೆಗಳು 6ನೇ ತರಗತಿ ನಂತರ ಕೃತಕ ಬುದ್ಧಿಮತ್ತೆಯನ್ನು ಕೌಶಲ ವಿಷಯದ ರೂಪದಲ್ಲಿ 15 ಗಂಟೆಗಳಷ್ಟು ಕಾಲ ಬೋಧಿಸುತ್ತಿವೆ. 9ರಿಂದ 12ನೇ ತರಗತಿವರೆಗೆ ಇದು ಐಚ್ಛಿಕ ವಿಷಯವಾಗಿದೆ.

## ❖ ಯೂತ್ ಏಷ್ಯನ್ ಕ್ರೀಡಾಕೂಟ: ಭಾರತದ ಪದಕ 41ಕ್ಕೆ ಏರಿಕೆ

**ಸಂದರ್ಭ: ಭಾರತದ ಸ್ಪರ್ಧಿಗಳು ಯೂತ್ ಏಷ್ಯನ್ ಕ್ರೀಡಾಕೂಟದಲ್ಲಿ ಅದ್ಭುತ ಪ್ರದರ್ಶನ ಮುಂದುವರಿಸಿದರು. ಬಾಕ್ಸಿಂಗ್‌ನಲ್ಲಿ ಮೂರು ಚಿನ್ನ, ಒಂದು ಬೆಳ್ಳಿ ಹಾಗೂ ಬೀಚ್ ಕುಸ್ತಿಯಲ್ಲಿ ಮೂರು ಚಿನ್ನ, ಎರಡು ಬೆಳ್ಳಿ ಪದಕ ಗೆದ್ದು ಪಾರಮ್ಯ ಮೆರೆದರು.**

- 12 ಚಿನ್ನ, 15 ಬೆಳ್ಳಿ ಮತ್ತು 14 ಕಂಚು ಸೇರಿದಂತೆ 41 ಪದಕ ಗೆದ್ದ ಭಾರತ ಪದಕಪಟ್ಟಿಯಲ್ಲಿ ಆರನೇ ಸ್ಥಾನದಲ್ಲಿದೆ. ಚೀನಾ (136 ಪದಕ) ಅಗ್ರಸ್ಥಾನದಲ್ಲಿದೆ.
- ಮಹಿಳಾ ಬಾಕ್ಸರ್‌ಗಳಾದ ಖುಷಿ ಚಂದ್, ಅಹಾನಾ ಶರ್ಮಾ ಮತ್ತು ಚಂದ್ರಿಕಾ ಪೂಜಾರಿ ಅವರು ಚಿನ್ನಕ್ಕೆ ಕೊರಳೊಡ್ಡಿದರು.ಪುರುಷರ ವಿಭಾಗದಲ್ಲಿ ಲ್ಯಾಂಚೆನ್ಬಾ ಸಿಂಗ್ ಬೆಳ್ಳಿ ಪದಕವನ್ನು ಜಯಿಸಿದರು.
- 46 ಕೆ.ಜಿ ವಿಭಾಗದ ಫೈನಲ್‌ನಲ್ಲಿ ಖುಷಿ 4–1ರಿಂದ ಚೀನಾದ ಲುವೊ ಜಿನ್ಸಿಯು ವಿರುದ್ಧ ಗೆಲುವು ಸಾಧಿಸಿದರು. ಚಂದ್ರಿಕಾ 54 ಕೆಜಿ ವಿಭಾಗದಲ್ಲಿ 5–0ಯಿಂದ ಉಜ್ಬೇಕಿಸ್ತಾನದ ಮುಹಮ್ಮದೋವಾ ಕುಮ್ರಿನಿಸೊ ಅವರನ್ನು ಮಣಿಸಿದರು. ಅಹಾನಾ 50 ಕೆ.ಜಿ ವಿಭಾಗದ ಪ್ರಶಸ್ತಿ ಸುತ್ತಿನಲ್ಲಿ ಆರ್‌ಎಸ್‌ಸಿ ಆಧಾರದಲ್ಲಿ ಮಾ ಜೊಂಗ್ ಹಯಾಂಗ್ ವಿರುದ್ಧ ಜಯ ಗಳಿಸಿದರು.
- ಬೀಚ್ ಕುಸ್ತಿಯಲ್ಲಿ ಐದು ಪದಕ: ಬೀಚ್ ಕುಸ್ತಿಯಲ್ಲಿ ಅರ್ಜುನ್ ರುಹಿಲ್ (ಬಾಲಕರ 90 ಕೆಜಿ), ಸಾನಿ ಸುಭಾಷ್ ಫುಲ್ಮಾಲಿ (ಬಾಲಕರ 60 ಕೆಜಿ), ಅಂಜಲಿ (ಬಾಲಕಿಯರ 55 ಕೆಜಿ) ಚಿನ್ನದ ಸಾಧನೆ ಮಾಡಿದರು.

Dr. Rajkumar's KAS Academy

## ❖ ಅರಣ್ಯ: ಭೂ ಮಂಜೂರಾತಿಗೆ ಭಂಗ

**ಸಂದರ್ಭ: ಅಧಿಸೂಚಿತ ಅರಣ್ಯ ಪ್ರದೇಶಗಳಲ್ಲಿ 1980ರ ನಂತರ ಖಾಸಗಿ ವ್ಯಕ್ತಿಗಳು, ಖಾಸಗಿ ಸಂಸ್ಥೆಗಳು ಹಾಗೂ ಸರ್ಕಾರಿ ಸಂಸ್ಥೆಗಳಿಗೆ ಮಂಜೂರು ಮಾಡಿದ ಎಲ್ಲ ಭೂಮಿಯೂ ಕಾನೂನುಬಾಹಿರ ವಾಗಿದ್ದು, ಇಂತಹ ಪ್ರಕರಣಗಳ ಪಟ್ಟಿಯನ್ನು ಸಿದ್ಧಪಡಿಸಿ, ವರದಿ ಸಲ್ಲಿಸುವಂತೆ ಜಿಲ್ಲಾ ಮಟ್ಟದ ವಿಶೇಷ ತನಿಖಾ ತಂಡಗಳಿಗೆ (ಎಸ್‌ಐಟಿ) ಸರ್ಕಾರ ಸೂಚಿಸಿದೆ.**



ಅಧಿಸೂಚಿತ ಅರಣ್ಯ ಎಂದರೆ...

ಅಧಿಸೂಚಿತ ಅರಣ್ಯ ಎಂದರೆ ರಾಜ್ಯ ಸರ್ಕಾರವು ತನ್ನ ಆದೇಶದ ಮೂಲಕ ಅರಣ್ಯದ ಗಡಿಗಳನ್ನು ಸ್ಪಷ್ಟವಾಗಿ ನಿಗದಿಪಡಿಸಿದ ಪ್ರದೇಶ (ಕಾಯ್ದಿರಿಸಿದ ಅರಣ್ಯ). ಈ ಪ್ರದೇಶಗಳಲ್ಲಿ ರಾಜ್ಯ ಸರ್ಕಾರ ಅನುಮತಿ ಇಲ್ಲದೆ ಯಾವುದೇ ಚಟುವಟಿಕೆ ನಡೆಸುವುದನ್ನು ನಿಷೇಧಿಸಲಾಗಿದೆ.

ಅರಣ್ಯ ಸಂರಕ್ಷಣಾ ಕಾಯಿದೆ–1980 ಭಾರತದಲ್ಲಿ ಅರಣ್ಯ ಭೂಮಿಯನ್ನು ಅರಣ್ಯೇತರ ಉದ್ದೇಶಗಳಿಗಾಗಿ ಬಳಸುವುದನ್ನು ನಿಯಂತ್ರಿಸುವ ಒಂದು ಕಾನೂನು. ಇದರ ಮುಖ್ಯ ಉದ್ದೇಶವು ಅರಣ್ಯನಾಶ ತಡೆಯುವುದು ಮತ್ತು ಕೇಂದ್ರ ಸರ್ಕಾರದ ಪೂರ್ವಾನುಮತಿ ಇಲ್ಲದೆ ರಾಜ್ಯ ಸರ್ಕಾರಗಳು ಅರಣ್ಯ ಭೂಮಿಯನ್ನು ಬೇರೆ ಉದ್ದೇಶಗಳಿಗೆ ಬಳಕೆ ಮಾಡುವುದನ್ನು ನಿರ್ಬಂಧಿಸುವುದಾಗಿದೆ.

- ಜಿಲ್ಲಾ ಮಟ್ಟದ ಎಸ್‌ಐಟಿಗಳು ನಿರ್ವಹಿಸಬೇಕಾದ ಕಾರ್ಯವಿಧಾನ ಕುರಿತು ಅರಣ್ಯ ಇಲಾಖೆಯು ಹೊರಡಿಸಿದ ಸುತ್ತೋಲೆಯಲ್ಲಿ ಈ ಸೂಚನೆ ನೀಡಲಾಗಿದೆ. ಅಧಿಸೂಚಿತ ಅರಣ್ಯ ಪ್ರದೇಶಗಳಲ್ಲಿ ಹಂಚಿಕೆ, ಮಂಜೂರು ಮಾಡಿದ ಪ್ರದೇಶಗಳ ಪಟ್ಟಿಯನ್ನು ರಾಜ್ಯ ಮಟ್ಟದ ವಿಶೇಷ ತನಿಖಾ ತಂಡಕ್ಕೆ ಸಲ್ಲಿಸುವಂತೆ ಹೇಳಿದೆ.
- ಅರಣ್ಯ ಸಂರಕ್ಷಣಾ ಕಾಯಿದೆ–1980ರ ಪೂರ್ವದಲ್ಲಿ ಕಂದಾಯ ಇಲಾಖೆಯು ಅಧಿಸೂಚಿತ ಅರಣ್ಯ ಪ್ರದೇಶಗಳಲ್ಲಿ ಮಾಡಿರುವ ಮಂಜೂರಾತಿಯನ್ನು ಸಕ್ಷಮ ಪ್ರಾಧಿಕಾರದಿಂದ ಮಾಡಲಾಗಿದೆಯೇ? ಒಂದು ವೇಳೆ ಸಕ್ಷಮ ಪ್ರಾಧಿಕಾರದಿಂದ ಮಂಜೂರು ಮಾಡಿದ್ದರೆ ಅಂತಹ ಅಧಿಕಾರವನ್ನು ಯಾವ ಕಾಯ್ದೆ, ನಿಯಮ, ಆದೇಶಗಳ ಮೂಲಕ ನೀಡಲಾಗಿದೆ ಎನ್ನುವ ಕುರಿತು ದಾಖಲೆಗಳನ್ನು ಸಂಗ್ರಹಿಸಬೇಕು. ಕಂದಾಯ ಇಲಾಖೆಯ ಸಕ್ಷಮ ಪ್ರಾಧಿಕಾರ ಹೊರತುಪಡಿಸಿ, ಇತರೆ ಪ್ರಾಧಿಕಾರಗಳು ಮಂಜೂರು ಮಾಡಿದ ವಿವರಗಳನ್ನು ಪ್ರತ್ಯೇಕವಾಗಿ ಪಟ್ಟಿ ಮಾಡಬೇಕು ಎಂದು ಸೂಚನೆ ನೀಡಲಾಗಿದೆ.
- 1996ರ ನಂತರ ಸರ್ಕಾರಿ ದಾಖಲೆಗಳಲ್ಲಿ ಅರಣ್ಯ ಎಂದು ನಮೂದಿಸಿ ರುವ ಪ್ರದೇಶಗಳಲ್ಲಿ ಕಂದಾಯ ಇಲಾಖೆ ಭೂ ಮಂಜೂರಾತಿ ಮಾಡಿದ್ದರೆ ಅಂತಹ ದಾಖಲೆಗಳನ್ನು ಸಮಗ್ರವಾಗಿ ಪರಿಶೀಲಿಸಬೇಕು. ಸೂಕ್ತ ಶಿಫಾರಸು ಗಳೊಂದಿಗೆ ರಾಜ್ಯಮಟ್ಟದ ವಿಶೇಷ ತನಿಖಾ ತಂಡಕ್ಕೆ ಸಲ್ಲಿಸಬೇಕು ಎಂದು ವಿವರಿಸಲಾಗಿದೆ.

### <u>ದಂಡ ವಸೂಲಿಗೆ ಮಾರ್ಗಸೂಚಿ ದರ</u>

- ಕಾನೂನುಬಾಹಿರವಾಗಿ ಮಂಜೂರು ಮಾಡಿದ ಪ್ರತಿ ಪ್ರಕರಣ ಪಟ್ಟಿ ಮಾಡಿ, ಅಂತಹ ಪ್ರದೇಶಗಳನ್ನು ಮರಳಿ ಅರಣ್ಯ ಇಲಾಖೆಯ ವಶಕ್ಕೆ ಪಡೆಯಲು ಕ್ರಮಗಳನ್ನು ತೆಗೆದುಕೊಳ್ಳಬೇಕು. ಒಂದು ವೇಳೆ ಮಂಜೂರಾತಿ ನೀಡಿದ ಅರಣ್ಯ ಪ್ರದೇಶವನ್ನು ಮರಳಿ ವಶಕ್ಕೆ ಪಡೆಯುವುದು ಸಾರ್ವಜನಿಕ ಹಿತದೃಷ್ಟಿಯಿಂದ ಪೂರಕವಲ್ಲದಿದ್ದರೆ, ಸರ್ಕಾರದ ಮಾರ್ಗಸೂಚಿ ದರಗಳ ಅನುಸಾರ ಭೂಮಾಲೀಕರಿಂದ ದಂಡ ವಸೂಲಿ ಮಾಡುವುದೂ ಸೇರಿದಂತೆ ಅಳಡಿಸಿಕೊಳ್ಳ ಬಹುದಾದ ವಿಧಾನದ ಕುರಿತು ವರದಿಯಲ್ಲಿ ಉಲ್ಲೇಖಿಸುವಂತೆ ಅರಣ್ಯ ಇಲಾಖೆ ಸೂಚಿಸಿದೆ.
- ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರವು ಅರಣ್ಯ ಭೂಮಿಗಳ ಕ್ರೋಡೀಕೃತ ದಾಖಲೆಗಳನ್ನು ತಯಾರಿಸಲು ಅಭಿವೃದ್ಧಿಪಡಿಸಲಾದ ಪೋರ್ಟಲ್ ಅನ್ನು ತಾಲ್ಲೂಕು, ಹೋಬಳಿ, ಗ್ರಾಮ, ಸರ್ವೆ ಸಂಖ್ಯೆ, ವಿಸ್ತೀರ್ಣವನ್ನು ಗುರುತಿಸಲು ಉಪಯೋಗಿಸಿಕೊಳ್ಳಲು ಹೇಳಿದೆ.

## ❖ 6.13 ಕೋಟಿ ಜನರ ಜಾತಿವಾರು ಸಮೀಕ್ಷೆ ಪೂರ್ಣ

**ಸಂದರ್ಭ: ಸಾಮಾಜಿಕ–ಶೈಕ್ಷಣಿಕ ಸಮೀಕ್ಷೆ ಭಾಗವಾಗಿ ಈವರೆಗೆ 6.13 ಕೋಟಿ ಜನರ ವಿವರಗಳನ್ನು ಕಲೆ ಹಾಕಲಾಗಿದ್ದು, 4.22 ಲಕ್ಷದಷ್ಟು ಕುಟುಂಬದವರು ಮಾಹಿತಿ ನೀಡಲು ನಿರಾಕರಿಸಿದ್ದಾರೆ ಎಂದು ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಹೇಳಿದೆ.**

- ಆಯೋಗವು ನಡಸಿದ್ದ ಸಮೀಕ್ಷೆಯ ಮನೆ–ಮನೆ ಭೇಟಿ ಹಂತವು (ಅಕ್ಟೋಬರ್ 31ಕ್ಕೆ) ಕೊನೆಗೊಂಡಿದೆ.
- ರಾಜ್ಯದಾದ್ಯಂತ ಒಟ್ಟು 6.85 ಕೋಟಿ ಜನರನ್ನು ಸಮೀಕ್ಷೆಗೆ ಒಳಪಡಿಸುವ ಗುರಿಯನ್ನು ಹಾಕಿಕೊಳ್ಳಲಾಗಿತ್ತು. ಅದರಲ್ಲಿ 6.13 ಕೋಟಿ ಜನರನ್ನು ಸಮೀಕ್ಷೆಗೆ ಒಳಪಡಿಸಿದ್ದು, 72 ಲಕ್ಷ ಜನರು ಸಮೀಕ್ಷೆಯಲ್ಲಿ ಭಾಗಿಯಾಗಿಲ್ಲ ಎಂದು ಆಯೋಗದ ಪ್ರಕಟಣೆ ತಿಳಿಸಿದೆ.
- ರಾಜ್ಯದಾದ್ಯಂತ ನಡೆದ ಸಮೀಕ್ಷೆಯ ವೇಳೆ 34.49 ಲಕ್ಷ ಮನೆಗಳಿಗೆ ಬೀಗ ಹಾಕಲಾಗಿತ್ತು ಇಲ್ಲವೇ ಮನೆಗಳು ಖಾಲಿ ಇದ್ದವು. ಈ ಪೈಕಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲೇ 29 ಲಕ್ಷಕ್ಕೂ ಹೆಚ್ಚು ಮನೆಗಳನ್ನು ಖಾಲಿ/ಬೀಗ ಹಾಕಲಾದ/ಸಮೀಕ್ಷೆ ಮಾಡಲಾಗದ ಮನೆಗಳು ಎಂದು ಗುರುತಿಸಲಾಗಿದೆ. ರಾಜ್ಯದಾದ್ಯಂತ ಒಟ್ಟು
- ಸಮೀಕ್ಷೆಯ ಮನೆ–ಮನೆ ಭೇಟಿ ಹಂತವು ಕೊನೆಗೊಂಡಿದ್ದರೂ, ಆನ್‌ಲೈನ್‌ನಲ್ಲಿ ಮಾಹಿತಿ ನಮೂದಿಸಲು ನವೆಂಬರ್ 10ರವರೆಗೆ ಅವಕಾಶವಿದೆ.

## ❖ ದ್ರಾಕ್ಷಿ: ಕೈಸೇರದ ವಿಮೆ ಪರಿಹಾರ

**ಸಂದರ್ಭ: ಫಸಲ್ ಬಿಮಾ ಯೋಜನೆ: 31,470 ರೈತರಿಂದ ₹39 ಕೋಟಿ ಪ್ರೀಮಿಯಂ ಪಾವತಿ: ದ್ರಾಕ್ಷಿ ಬೆಳೆಗಾರರ ಬದುಕಿನೊಂದಿಗೆ ವಿಮೆ ಕಂಪನಿಯವರು ಚೆಲ್ಲಾಟವಾಡಬಾರದು. ಪರಿಹಾರ ಪಾವತಿ ವಿಳಂಬ ಮಾಡಬಾರದು ಅಭಯಕುಮಾರ್ ನಾಂದ್ರೇಕರ, ಅಧ್ಯಕ್ಷ, ಕರ್ನಾಟಕ ದ್ರಾಕ್ಷಿ ಬೆಳೆಗಾರರ ಸಂಘ.**

- ಬೆಳೆ ವಿಮೆ (ಫಸಲ್ ಬಿಮಾ) ಯೋಜನೆಯಡಿ 2024ರ ಏಪ್ರಿಲ್‌ನಿಂದ 2025ರ ಮಾರ್ಚ್ ಅವಧಿಯಲ್ಲಿ ದ್ರಾಕ್ಷಿ ಬೆಳೆಗೆ ವಿಮೆ ಮಾಡಿಸಿದ್ದ ರಾಜ್ಯದ 31,470 ಬೆಳೆಗಾರರಿಗೆ ಇನ್ನೂ ಪರಿಹಾರ ಸಿಕ್ಕಿಲ್ಲ.
- **ದ್ರಾಕ್ಷಿಯನ್ನು ವಿಜಯಪುರ, ಬೆಳಗಾವಿ, ಬಾಗಲಕೋಟೆ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ತುಮಕೂರು, ಕಲಬುರಗಿ, ಕೊಪ್ಪಳ, ಯಾದಗಿರಿ, ಬೀದರ್, ಕೋಲಾರ ಜಿಲ್ಲೆಗಳಲ್ಲಿ ಹವಾಮಾನ ಆಧಾರಿತ ಬೆಳೆಯಾಗಿ ಬೆಳೆಯಲಾಗುತ್ತದೆ. ರಾಜ್ಯದಲ್ಲಿ 42 ಸಾವಿರ ಹೆಕ್ಟೇರ್‌ಗಿಂತ ಹೆಚ್ಚಿನ ಪ್ರದೇಶದಲ್ಲಿ ಬೆಳೆ ಇದೆ.** ಮಳೆ, ಪ್ರತಿಕೂಲ ಹವಾಮಾನದಿಂದ ಕಳೆದ ವರ್ಷ ಅಪಾರ ಪ್ರಮಾಣದಲ್ಲಿ ಬೆಳೆ ಹಾನಿಯಾಗಿತ್ತು.
- ಬೆಳೆ ವಿಮೆ ಯೋಜನೆಯಡಿ 31,470 ರೈತರು ಹೆಕ್ಟೇರ್‌ಗೆ ₹14 ಸಾವಿರ ಕಂತು (ಪ್ರೀಮಿಯಂ) ಪಾವತಿಸಿದ್ದರು. 27,953 ಹೆಕ್ಟೇರ್ ವಿಮೆ ಯೋಜನೆಗೆ ಒಳಪಟ್ಟಿತ್ತು. ₹39.13 ಕೋಟಿ ವಿಮೆ ಮೊತ್ತ ಪಾವತಿಯಾಗಿತ್ತು.
- ಬೆಳೆ ಹಾನಿಯಾದರೆ ಪ್ರತಿ ಹೆಕ್ಟೇರ್‌ಗೆ ₹2.80 ಲಕ್ಷ ಪರಿಹಾರ ಬರಬೇಕಿತ್ತು. ಆದರೆ, ವಿಮೆ ಅವಧಿ ಮುಗಿದರೂ ಹಣ ಕೈಸೇರಿಲ್ಲ. ಪ್ರಕ್ರಿಯೆ ವಿಳಂಬವಾಗಿದ್ದರಿಂದ ರೈತರು ಇಕ್ಕಟ್ಟಿಗೆ ಸಿಲುಕಿದ್ದಾರೆ.
- 'ನಾನು ನಾಲ್ಕು ಎಕರೆಯಲ್ಲಿ ದ್ರಾಕ್ಷಿ ಬೆಳೆದಿದ್ದು, ವಿಮೆಯನ್ನೂ ಮಾಡಿಸಿದ್ದೆ. ಹವಾಮಾನ ವೈಪರೀತ್ಯದಿಂದ ಬೆಳೆ ಕೈಕೊಟ್ಟಿತು. ಈಗ ವಿಮೆ ಪರಿಹಾರವೂ ಸಿಗದೆ ತೊಂದರೆಯಾಗಿದೆ' ಎಂದು ಅಥಣಿ ತಾಲ್ಲೂಕಿನ ತೆಲಸಂಗದ ರೈತ ರವಿ.
- 'ಅಕ್ರಮವಾಗಿ ವಿಮೆ ಪರಿಹಾರ ಪಡೆಯಲು ಕೆಲ ರೈತರು ಯತ್ನಿಸಿದ್ದಾರೆ. ದ್ರಾಕ್ಷಿ ಬೆಳೆಯದಿದ್ದರೂ ವಿಮೆ ಮಾಡಿಸಿದ್ದಾರೆ ಎಂಬ ಆರೋಪವಿದೆ. ಪರಿಶೀಲನೆ ನಂತರ ಪರಿಹಾರ ಕೊಡುತ್ತೇವೆ ಎಂದು ವಿಮೆ ಕಂಪನಿ ಅಧಿಕಾರಿಗಳು ಹೇಳುತ್ತಾರೆ' ಎಂದು ಹೇಳಿದರು.

Dr. RajkumarIAS.com

## ❖ ವಿತ್ತೀಯ ಕೊರತೆ ₹5.73 ಲಕ್ಷ ಕೋಟಿ

**ಸಂದರ್ಭ: ಕೇಂದ್ರದಿಂದ ರಾಜ್ಯಗಳಿಗೆ ₹6.31 ಲಕ್ಷ ಕೋಟಿ ತೆರಿಗೆ ಪಾಲು ವರ್ಗಾವಣೆ: ಸಿಜಿಎ ಪ್ರಸಕ್ತ ಆರ್ಥಿಕ ವರ್ಷದ ಏಪ್ರಿಲ್–ಸೆಪ್ಟೆಂಬರ್ ಅವಧಿಯಲ್ಲಿ ಕೇಂದ್ರ ಸರ್ಕಾರದ ವರಮಾನ ಮತ್ತು ವೆಚ್ಚದ ನಡುವಿನ ಅಂತರವಾದ ವಿತ್ತೀಯ ಕೊರತೆಯು ಇಡೀ ವರ್ಷದ ಗುರಿಯ ಶೇ 36.5ರಷ್ಟಾಗಿದೆ.**

- ಹಣಕಾಸಿನ ಮೌಲ್ಯದ ಲೆಕ್ಕದಲ್ಲಿ ಇದು ₹5.73 ಲಕ್ಷ ಕೋಟಿಯಾಗಿದೆ ಎಂದು ಲೆಕ್ಕಪತ್ರಗಳ ಮಹಾನಿಯಂತ್ರಕರ (ಸಿಜಿಎ) ವರದಿ ಶುಕ್ರವಾರ ತಿಳಿಸಿದೆ.
- ಕಳೆದ ಆರ್ಥಿಕ ವರ್ಷದ ಇದೇ ಅವಧಿಯಲ್ಲಿ ವಿತ್ತೀಯ ಕೊರತೆಯು ₹4.7 ಲಕ್ಷ ಕೋಟಿಯಷ್ಟು (ಶೇ 29) ಇತ್ತು. 2025–26ರಲ್ಲಿ ವಿತ್ತೀಯ ಕೊರತೆಯನ್ನು ಜಿಡಿಪಿಯ ಶೇ 4.4ಕ್ಕೆ (ಹಣಕಾಸಿನ ಮೌಲ್ಯದ ಲೆಕ್ಕದಲ್ಲಿ ₹15.69 ಲಕ್ಷ ಕೋಟಿ) ತಗ್ಗಿಸಲು ಸರ್ಕಾರ ಬಜೆಟ್‌ನಲ್ಲಿ ಗುರಿ ನಿಗದಿಪಡಿಸಲಾಗಿದೆ.
- ಏಪ್ರಿಲ್‌ನಿಂದ ಸೆಪ್ಟೆಂಬರ್ ವರೆಗೆ ಸರ್ಕಾರವು ₹17.3 ಲಕ್ಷ ಕೋಟಿ (ಶೇ 49.5) ವರಮಾನ ಸ್ವೀಕರಿಸಿದೆ. ಒಟ್ಟು ವೆಚ್ಚವು ₹23 ಲಕ್ಷ ಕೋಟಿ ಆಗಿದೆ. ಇದು ಬಜೆಟ್ ಅಂದಾಜಿನ ಶೇ 45ರಷ್ಟಾಗಿದೆ.
- ಕೇಂದ್ರ ಸರ್ಕಾರ ಸ್ವೀಕರಿಸಿದ ಒಟ್ಟು ಮೊತ್ತದ ಪೈಕಿ ₹12.29 ಲಕ್ಷ ಕೋಟಿ ತೆರಿಗೆ ವರಮಾನದಿಂದ ಸಂಗ್ರಹಿಸಿದೆ. ₹4.66 ಲಕ್ಷ ಕೋಟಿ ತೆರಿಗೆಯೇತರ ವರಮಾನ ಮತ್ತು ಇತರೆ ಮೂಲಗಳಿಂದ ₹34,770 ಕೋಟಿ ಸಂಗ್ರಹಿಸಿದೆ.
- ಕೇಂದ್ರ ಸರ್ಕಾರವು, ರಾಜ್ಯ ಸರ್ಕಾರಗಳಿಗೆ ₹6.31 ಲಕ್ಷ ಕೋಟಿಯನ್ನು ತೆರಿಗೆ ಪಾಲಾಗಿ ವರ್ಗಾಯಿಸಿದೆ. ಇದು ಕಳೆದ ಆರ್ಥಿಕ ವರ್ಷದ ಇದೇ ಅವಧಿಗೆ ಹೋಲಿಸಿದರೆ ₹86,948 ಕೋಟಿಯಷ್ಟು ಅಧಿಕವಾಗಿದೆ ಎಂದು ತಿಳಿಸಿದೆ.

## ❖ ವಿದೇಶಿ ವಿನಿಮಯ ಸಂಗ್ರಹ ಇಳಿಕೆ

**ಸಂದರ್ಭ: ಅಕ್ಟೋಬರ್ 24ಕ್ಕೆ ಅಂತ್ಯಗೊಂಡ ವಾರದಲ್ಲಿ ದೇಶದ ವಿದೇಶಿ ವಿನಿಮಯ ಮೀಸಲು ಸಂಗ್ರಹದ ಪ್ರಮಾಣವು ₹61,434 ಕೋಟಿಯಷ್ಟು ಕಡಿಮೆ ಆಗಿದೆ.**

- ಪ್ರಸ್ತುತ ಒಟ್ಟು ಮೀಸಲು ಸಂಗ್ರಹ ₹61.69 ಲಕ್ಷ ಕೋಟಿಯಷ್ಟಾಗಿದೆ ಎಂದು ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ತಿಳಿಸಿದೆ.
- ವಿದೇಶಿ ಕರೆನ್ಸಿಗಳ ಸಂಪತ್ತಿನ ಮೌಲ್ಯ ₹34,266 ಕೋಟಿಯಷ್ಟು ಕಡಿಮೆಯಾಗಿದ್ದು, ₹50.26 ಲಕ್ಷ ಕೋಟಿಯಾಗಿದೆ. ಚಿನ್ನದ ಮೀಸಲು ಸಂಗ್ರಹದಲ್ಲಿ ₹26,706 ಕೋಟಿ ಇಳಿಕೆಯಾಗಿದ್ದು, ₹9.36 ಲಕ್ಷ ಕೋಟಿಯಾಗಿದೆ. ಸ್ಪೆಷಲ್ ಡ್ರಾಯಿಂಗ್ ರೈಟ್ಸ್ (ಎಸ್‌ಡಿಆರ್) ₹1.65 ಲಕ್ಷ ಕೋಟಿ ಆಗಿದೆ. ಅಂತರರಾಷ್ಟ್ರೀಯ ಹಣಕಾಸು ನಿಧಿಯಲ್ಲಿ ಭಾರತದ ಪಾಲು ₹40,887 ಕೋಟಿಯಾಗಿದೆ ಎಂದು ತಿಳಿಸಿದೆ.

------------------------------------------ಶುಭವಂದನೆಗಳು----------------------------------------

Dr.Rajkumar's KAS Academy